ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ


ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 87 ಸಂಚಿಕೆ- 87 | PAGE-8 ಪುಟ-8 | ಭಾನುವಾರ 11.05.2025 | RS.2/- ಬೆಲೆ 2/-

# ಭಾರತ-ಪಾಕ್:ಕದನ ವಿರಾಮ




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.10 ಒಂದು ವಾರದಿಂದ ನಡೆದಿದ್ದ ಭಾರತ ಮತ್ತು ಪಾಕಿಸ್ತಾನ ನಡುವಿನ ಸೇನಾ ಸಂಘರ್ಷ ಕೊನೆಗೂ ಕದನ ವಿರಾಮ ಘೋಷಣೆಯೊಂದಿಗೆ ಅಂತ್ಯವಾಗಿದೆ.

ಇಂದು ಸಂಜೆ 5 ಗಂಟೆಯಿಂದ ಅನ್ವಯವಾಗುವಂತೆ ಕದನ ವಿರಾಮಕ್ಕೆ ಭಾರತ ಮತ್ತು ಪಾಕಿಸ್ತಾನಗಳು ಒಪ್ಪಿರುವುದಾಗಿ ವಿದೇಶಾಂಗ ಸಚಿವಾಲಯ ಘೋಷಿಸಿದ್ದು, ಭೂ, ವಾಯು ಮತ್ತು ನೌಕಾ ಪಡೆಯ ಮಿಲಿಟರಿ ಕಾರ್ಯಾಚರಣೆಯನ್ನು ನಿಲ್ಲಿಸುವುದಾಗಿ ಒಪ್ಪಂದ ಮಾಡಿಕೊಳ್ಳಲಾಗಿದೆ. ಇದರನ್ವಯ ಎರಡು ಕಡೆಗೆ ಸೂಚನೆಗಳನ್ನು ನೀಡಲಾಗಿದೆ. ಉಭಯ ದೇಶಗಳ ಡಿಜಿಎಂಒಗಳು ಮೇ 12ರಂದು ಮಧ್ಯಾಹ್ನ 12 ಗಂಟಗೆ ಮತ್ತೆ ಮಾತುಕತೆ ನಡೆಸಲಿದ್ದಾರೆ ಎಂದು ಸೇನಾ ಮೂಲಗಳು ತಿಳಿಸಿವೆ. ಯಾವುದೇ ಷರತ್ತುಗಳಿಲ್ಲಇದೇ ವೇಳೆ ಕದನ ವಿರಾಮಕ್ಕೆ ಯಾವುದೇ ಷರತ್ತುಗಳಿಲ್ಲ ಎಂದು ವಿದೇಶಾಂಗ ಇಲಾಖೆ ಸ್ಪಷ್ಟಪಡಿಸಿದ್ದು, ಕದನ ವಿರಾಮಕ್ಕೆ ಪೂರ್ವ ಅಥವಾ ನಂತರದ ಯಾವುದೇ ಷರತ್ತುಗಳಿಲ್ಲ. ಬದಲಿಗೆ ಪಾಕಿಸ್ತಾನದಿಂದಲೇ ಈ ಕದನ ವಿರಾಮಕ್ಕೆ ಕರೆ ಬಂದಿದೆ ಎಂದು ಹೇಳಿದೆ. ಏತನ್ಮಧ್ಯೆ ಸೇನಾ ಸಂಘರ್ಷಕ್ಕೂ ಮುನ್ನ ಅಂದರೆ ಪಹಲ್ಗಾಮ್ ಉಗ್ರ ದಾಳಿ ಬಳಿಕ ಭಾರತ ಘೋಷಿಸಿದ್ದ ಸಿಂಧೂ ಜಲ ಒಪ್ಪಂದ ಅಮಾನತು ಮುಂದುವರೆಯಲಿದೆ ಎಂದೂ ಎಂಇಎ ಸ್ಪಷ್ಟಪಡಿಸಿದೆ. ಉಭಯ ದೇಶಗಳ ಡಿಜಿಎಂಒಗಳು ಮೇ 12ರಂದು ಮಧ್ಯಾಹ್ನ 12 ಗಂಟಗೆ ಮತ್ತೆ ಮಾತುಕತೆ ನಡೆಸಲಿದ್ದು, ಅಂದಿನ ಚರ್ಚೆ ಬಳಿಕ ಎಲ್ಲ ರೀತಿಯ ಗೊಂದಲಗಳಿಗೆ ತೆರೆ ಬೀಳಲಿದೆ. ಏ. 22ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪಾಕ್ ಉಗ್ರರು ದಾಳಿ ಮಾಡಿ 26 ಅಮಾಯಕರನ್ನು ಹತ್ಯೆ ಮಾಡಿದ್ದರು. ಇದಕ್ಕೆ ಪ್ರತೀಕಾರವಾಗಿ ಮೇ 7ರಂದು ಭಾರತವು ?ಆಪರೇಷನ್ ಸಿಂಧೂರ' ಹೆಸರಿನಡಿಯಲ್ಲಿ ಪಾಕ್‌ನ ಉಗ್ರರ ಅಡಗುತಾಣಗಳ ಮೇಲೆ ದಾಳಿ ಮಾಡಿತ್ತು. ಈ ದಾಳಿಗೆ ಪ್ರತಿಯಾಗಿ ಪಾಕ್ ಭಾರತದ ಮೇಲೆ ಡ್ರೋನ್ ಹಾಗೂ ಕ್ಷಿಪಣಿ ದಾಳಿ ಮಾಡಿತ್ತು. ಭಾರತೀಯ ಸೇನೆಯು ಪಾಕ್‌ನ ಡ್ರೋನ್ ಹಾಗೂ ಕ್ಷಿಪಣಿಗಳಿಗೆ ಹೊಡೆದುರುಳಿಸುವ ಮೂಲಕ ಪ್ರತ್ಯುತ್ತರ ನೀಡಿತ್ತು. ಭಾರತದ ಪಾಕಿಸ್ತಾನದ ನಡುವೆ ಉದ್ವಿಗ್ನ ಪರಿಸ್ಥಿತಿ ಏರ್ಪಡುತ್ತಿದ್ದಂತೆ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಉಭಯ ರಾಷ್ಟ್ರಗಳಿಗೆ ಕದನ ವಿರಾಮ ಮಾಡುವಂತೆ ಸಲಹೆ ನೀಡಿದ್ದರು. ಆದರೆ ಇದು ಫಲಪ್ರದವಾಗಿರಲಿಲ್ಲ. ಇದೀಗ ಮತ್ತೊಮ್ಮೆ ಮಾತುಕತೆ ನಡೆಸಿ, ಎರಡೂ ರಾಷ್ಟ್ರಗಳು ಕದನ ವಿರಾಮಕ್ಕೆ ಒಪ್ಪಿಗೆ ಸೂಚಿಸಿದೆ.

## ಸದ್ಯಕ್ಕೆ ಕದನ ವಿರಾಮ: ಭಯೋತ್ಪಾದನೆ ವಿರುದ್ಧ ಭಾರತದ ನಿಲುವು ಬದಲಿಲ್ಲ; ಜೈಶಂಕರ್ ಎಚ್ಚರಿಕೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.10: ಮೂರು ದಿನಗಳಿಂದ ನಡೆಯುತ್ತಿದ್ದ ಭಾರತ-ಪಾಕಿಸ್ತಾನ ನಡುವಿನ ಸೇನಾ ಕಾರ್ಯಾಚರಣೆ ನಿಲ್ಲಿಸಲು ಉಭಯ ರಾಷ್ಟ್ರಗಳು ಒಪ್ಪಿಕೊಂಡಿವೆ. ಆದರೆ ಭಯೋತ್ಪಾದನೆ ವಿರುದ್ಧ ಭಾರತದ ನಿಲುವಿನಲ್ಲಿ ಯಾವುದೇ ರಾಜಿ ಇಲ್ಲ. ಅದು ಮುಂದುವರೆಯುತ್ತದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಶನಿವಾರ ಹೇಳಿದ್ದಾರೆ. ಕದನ ವಿರಾಮ ಒಪ್ಪಂದದ ನಂತರ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಜೈಶಂಕರ್, ಭಾರತ ಮತ್ತು ಪಾಕಿಸ್ತಾನ ಇಂದು ಗುಂಡಿನ ದಾಳಿ ಮತ್ತು ಮಿಲಿಟರಿ ಕಾರ್ಯಾಚರಣೆ ನಿಲ್ಲಿಸುವ ಕುರಿತು ಪರಸ್ಪರ ಒಮ್ಮತಕ್ಕೆ ಬಂದಿವೆ. ಆದರೆ, ಭಾರತ

ಯಾವುದೇ ಮಾದರಿಯ ಭಯೋತ್ಪಾದನೆ ಮತ್ತು ಸೂಚನೆಗಳ ವಿರುದ್ಧ ರಾಜಿಯಾಗದ ನಿಲುವನ್ನು ಸ್ಥಿರವಾಗಿ ನಿರ್ವಹಿಸುತ್ತಿದೆ. ಅದು ಮುಂದುವರಿಯುತ್ತದೆ ಎಂದು ಬರೆದುಕೊಂಡಿದ್ದಾರೆ. ಅಮೆರಿಕದ ಮಧ್ಯಸ್ಥಿಕೆಯಲ್ಲಿ ನಡೆದ ಮಾತುಕತೆಯ ನಂತರ

ಭಾರತ ಮತ್ತು ಪಾಕಿಸ್ತಾನಗಳು 'ಸಂಪೂರ್ಣ ಮತ್ತು ತಕ್ಷಣದ'

ಕದನ ವಿರಾಮಕ್ಕೆ ಒಪ್ಪಿಕೊಂಡಿವೆ ಎಂದು ಯುನೈಟೆಡ್ ಸ್ಟೇಟ್ಸ್ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶನಿವಾರ ಹೇಳಿದ್ದಾರೆ.

## ಭಾರತದ ವಿರುದ್ಧ ಸುಳ್ಳು ಸುದ್ದಿ ಹಬ್ಬಿಸುತ್ತಿರುವ ಪಾಕಿಸ್ತಾನ : ಸೋಫಿಯಾ ಖುರೇಷಿ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.10:ಭಾರತದ ವಿರುದ್ಧ ಪಾಕಿಸ್ತಾನ ಸುಳ್ಳು ಆರೋಪ ಮಾಡಿದೆ ಎಂದು ಕರ್ನಲ್ ಸೋಫಿಯಾ ಖುರೇಷಿ ಹೇಳಿದ್ದಾರೆ. ಶನಿವಾರ ಭಾರತ ಹಾಗೂ ಪಾಕಿಸ್ತಾನದ ನಡುವಿನ ಕದನ ವಿರಾಮದ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್400 ಕ್ಷಿಪಣಿ, ಬ್ರಹ್ಮೋಸ್ ನೆಲೆ ನಾಶವಾಗಿಲ್ಲ. ಭಾರತದ ವಿರುದ್ಧ ಪಾಕಿಸ್ತಾನ ಸುಳ್ಳು ಆರೋಪಗಳನ್ನ ಮಾಡ್ತಿದೆ. ಚಂಡೀಗಢದಲ್ಲಿ ಪಾಕ್ ಶೆಲ್ ಮೇಲೆ ದಾಳಿ ಮಾಡಿರೋದು ಸುಳ್ಳು ಸುದ್ದಿಯಾಗಿದೆ. ಭಾರತೀಯ ಸೇನೆಯು ಪಾಕಿಸ್ತಾನದ ಡ್ರೋನ್‌ಗಳನ್ನ ಹೊಡೆದುರುಳಿಸಿದೆ ಎಂದಿದ್ದಾರೆ.

ಭಾರತೀಯ ಸೇನೆಯು ಕೇವಲ ಪಾಕ್‌ನ ಸೇನಾವಲಯಗಳನ್ನ ಮಾತ್ರ ಗುರಿ ಮಾಡಿ ದಾಳಿ ಮಾಡಿದೆ. ಪಾಕಿಸ್ತಾನ ಸುಳ್ಳು ಸುದ್ದಿಗಳನ್ನ ಹಬ್ಬಿಸುತ್ತಿದೆ. ನಮ್ಮ ದಾಳಿಯಿಂದ ಪಾಕಿಸ್ತಾನ ಸೇನೆಗೆ ಸಾಕಷ್ಟು ನಷ್ಟವಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಭಾರತೀಯ ಸೇನೆಯು ಪಾಕಿಸ್ತಾನದ ಯಾವುದೇ ಮಸೀದಿಗಳನ್ನ ಟಾರ್ಗೆಟ್ ಮಾಡಿಲ್ಲ. ಕೇವಲ ಪಾಕ್ ಉಗ್ರರ ನೆಲೆಗಳನ್ನ ಧ್ವಂಸ ಮಾಡಿದ್ದೇವೆ. ಪಾಕಿಸ್ತಾನ ಏರ್‌ಬೇಸ್‌ಗಳನ್ನ ಹೊಡೆದುರುಳಿಸಿದ್ದೇವೆ. ಎಲ್‌ಒಸಿಯಲ್ಲಿಯೂ ಪಾಕಿಸ್ತಾನ ಗುಂಡಿನ ದಾಳಿ ಮಾಡಿತ್ತು. ಅದಕ್ಕೆ ಪ್ರತಿಯಾಗಿ ಭಾರತ ದಾಳಿ ಮಾಡಿದ ವೇಳೆ ಅವರಿಗೂ ನಷ್ಟವಾಗಿದೆ. ಎಲ್ಲಾ ಸಮಯದಲ್ಲೂ ನಮ್ಮ ಸೇನೆ ಅಲರ್ಟ್ ಇರಲಿದೆ. ಪಾಕ್ ದಾಳಿಗೆ ಪ್ರತಿದಾಳಿ ಮಾಡಲು ಸಿದ್ಧರಾಗಿದ್ದೇವೆ ಎಂದು ಹೇಳಿದ್ದಾರೆ.

## ಯುದ್ಧ ಭೂಮಿಯತ್ತ ಮುಖ ಮಾಡಿದ ಬೀದರ್ ಯೋಧ




ಮಲ್ಲಮ್ಮ ನುಡಿ ವಾರ್ತೆ ಬೀದರ. ಮೇ. 10 : ಇಂಡೋ-ಪಾಕ್ ನಡುವೆ ಯುದ್ಧದ ಕಾರ್ಮೋಡ ಕವಿದಿದೆ. ಈಗ ಯುದ್ಧಭೂಮಿಗೆ ಸೈನಿಕರ ಅಗತ್ಯ ತುಂಬಾ ಇದೆ. ಆ ಹಿನ್ನೆಲೆಯಲ್ಲಿ ರಜೆ ಮೇಲೆ ತವರೂರಿಗೆ ಬಂದಿದ್ದ ಯೋಧ ಸೇವೆಗೆ ಮರಳುತ್ತಿದ್ದಾರೆ. ಹುಲಸೂರ ತಾಲೂಕಿನ ಬೇಲೂರ ಗ್ರಾಮದ ಬಿಎಸ್ ಎಫ್ ಯೋಧ ಅನೀಲ್ ಪಾಟೀಲ್ 30 ದಿನ ರಜೆ ಪಡೆದು ಊರಿಗೆ ಬಂದಿದ್ದರು. ಆದರೆ, ಈಗ ಗಡಿಯಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದೆ. ಈ ಹಿನ್ನೆಲೆಯಲ್ಲಿ ಮರಳಿ ಸೇವೆಗೆ ಹಾಜರಾಗಲು

ಸೂಚನೆ ಬಂದಿದೆ. ಹೀಗಾಗಿಲ್ಲಿ ರಜೆ ರದ್ದುಗೊಳಿಸಿ ಸೇವೆಗೆ ಹಿಂತಿರುಗಿದ್ದಾರೆ. ಬಿಎಸ್‌ಎಫ್ ಯೋಧ ಅನಿಲ್ ಪಾಟೀಲ್ ಅವರನ್ನು ಗ್ರಾಮಸ್ಥರು ಅದ್ದೂರಿಯಾಗಿ ಹಾರೈಸಿ ಕಳುಹಿಸಿದ್ದಾರೆ. ಯೋಧನ ಮೇಲೆ ಹೂವಿನ

ಸುರಿಮಳೆಗೈಯ್ದಿದ್ದಾರೆ. ಈ ವೇಳೆ ಭಾರತಾಂಬೆಯ ಪರ ಘೋಷಣೆ ಕೂಗಲಾಗಿದೆ.

## ಪಾಕ್‌ಗೆ ಆರ್ಥಿಕ ನೆರವು ನೀಡಿದ ಐಎಂಎಫ್ ವಿರುದ್ಧ ಓವೈಸಿ ಕಿಡಿ



ನವದೆಹಲಿ:ಮೇ.10:ಪಾಕಿಸ್ತಾನಕ್ಕೆ ಆರ್ಥಿಕ ನೆರವು ಘೋಷಿಸಿರುವ ಐಎಂಎಫ್ ವಿರುದ್ಧ ಹೈದರಾಬಾದ್ ಸಂಸದ, ಎಐಎಂಐಎಂ ಮುಖ್ಯಸ್ಥ ಅಸಾದುದ್ದೀನ್ ಓವೈಸಿ ತೀವ್ರ ಆಕ್ರೋಶ ಹೊರಹಾಕಿದ್ದಾರೆ.

ಅಂತಾರಾಷ್ಟ್ರೀಯ ಹಣಕಾಸು ನಿಧಿ ನ್ನು ಅಂತಾರಾಷ್ಟ್ರೀಯ ಭಯೋತ್ಪಾದಕ ನಿಧಿ ಎಂದು ಓವೈಸಿ ಟೀಕಾಪ್ರಹಾರ ನಡೆಸಿದ್ದಾರೆ. ಪಾಕಿಸ್ತಾನ್ ಆರ್ಥಿಕ ನೆರವನ್ನು ದುರುಪಯೋಗಪಡಿಸಿಕೊಳ್ಳಲಿದೆ ಮತ್ತು ಐಎಂಎಫ್ ಪಾಕ್‌ಗೆ ಆರ್ಥಿಕ ನೆರವು ನೀಡುವ ಮೂಲಕ ಭಯೋತ್ಪಾದನೆಗೆ ಬೆಂಬಲ ನೀಡುತ್ತಿದೆ ಎಂದು ಓವೈಸಿ ಟೀಕಿಸಿದ್ದಾರೆ.

ಇದೇ ವೇಳೆ ಪಾಕ್ ವಿರುದ್ಧದ ಹೋರಾಟದ ಸಮಯದಲ್ಲಿ ಏಕೀಕೃತ ಭಾರತಕ್ಕೆ ಭಾರತೀಯ ಮುಸ್ಲಿಮರ ಬದ್ಧತೆಯನ್ನು ಓವೈಸಿ ಪುನರುಚ್ಚರಿಸಿದ್ದಾರೆ.

ಪಾಕಿಸ್ತಾನಕ್ಕೆ ಇತ್ತೀಚೆಗೆ $1 ಬಿಲಿಯನ್ ಐಎಂಎಫ್ ಬೇಲ್‌ಔಟ್ ಪ್ಯಾಕೇಜ್ ಕುರಿತು ಪ್ರತಿಕ್ರಿಯೆ ನೀಡಿರುವ ಓವೈಸಿ ಇದು ಅಧಿಕೃತ ಭಿಕ್ಷೆ ಎಂದು ವ್ಯಂಗ್ಯವಾಡಿದ್ದಾರೆ. ಅಮೇರಿಕಾ, ಜರ್ಮನಿ ಮತ್ತು ಜಪಾನ್ ಪಾಕ್‌ಗೆ ನೆರವು ನೀಡಲು ಹೇಗೆ ಒಪ್ಪಿಕೊಂಡವು?." ಎಂದು ಓವೈಸಿ ಪ್ರಶ್ನಿಸಿದ್ದಾರೆ.

"ನಾಯಕತ್ವವನ್ನು ಮರೆತುಬಿಡಿ, ಅವರಿಗೆ (ಪಾಕಿಸ್ತಾನ) ಆರ್ಥಿಕತೆಯನ್ನು ಹೇಗೆ ನಡೆಸಬೇಕೆಂದು ತಿಳಿದಿಲ್ಲ. ನೀವು ಅಲ್ಲಿ ಕುಳಿತು ಇಸ್ಲಾಂ ಎಂದರೇನು ಎಂದು ನಮಗೆ ಹೇಳುತ್ತಿದ್ದೀರಿ,

(2ನೇ ಪುಟ ನೋಡಿ)

## ಹೇಮರೆಡ್ಡಿ ಮಲ್ಲಮ್ಮನ ಬದುಕು ಮನುಕುಲಕ್ಕೆ ಆದರ್ಶ:ಸಚಿವ ರಹೀಮ್ ಖಾನ್




ಮಲ್ಲಮ್ಮ ನುಡಿ ವಾರ್ತೆ ಬೀದರ : ಮೇ.10:14ನೇ ಶತಮಾನದ ಶಿವಶರಣರಲ್ಲಿ ಪ್ರಜ್ವಲಿಸಿದ ಹೇಮರೆಡ್ಡಿ ಮಲ್ಲಮ್ಮ ದೈವಭಕ್ತಿ, ಕಾಯಕ ನಿಷ್ಠೆ, ದಾನ ಧರ್ಮದಿಂದ, ಆದರ್ಶ ಗೃಹಿಣಿಯಾಗುವ ಮೂಲಕ ಲೋಕ ಪ್ರಸಿದ್ಧಿ ಪಡೆದಿದ್ದರು. ಶ್ರೀಶೈಲ ಮಲ್ಲಿಕಾರ್ಜುನನ್ನು ಸಾಕ್ಷಾತ್ಕರಿಸಿಕೊಂಡ ಹೇಮರೆಡ್ಡಿ ಮಲ್ಲಮ್ಮನ ಬದುಕು ಎಂದಿಗೂ ಅನುಕರಣೀಯ ಹಾಗೂ ಮನುಕುಲಕ್ಕೆ ಆದರ್ಶ ಎಂದು ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಹೇಳಿದರು.

ಅವರು ಶನಿವಾರದಂದು ನಗರದ

(2ನೇ ಪುಟ ನೋಡಿ)

## ರಾಜ್ಯದಲ್ಲಿ ಮುಂದಿನ 5 ದಿನ ಮಳೆ ಸಾಧ್ಯತೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಮೇ.10: ಪೂರ್ವ ಮುಂಗಾರುಮಳೆ ಚೇತರಿಕೆ ಕಂಡಿದ್ದು, ರಾಜ್ಯದಲ್ಲಿ ಮುಂದಿನ 5 ದಿನಗಳ ಕಾಲ ಚದುರಿದಂತೆ ಅಲ್ಲಲ್ಲಿ ಮಳೆಯಾಗುವ ಮುನ್ಸೂಚನೆಗಳಿವೆ. ಗುಡುಗು, ಮಿಂಚಿನಿಂದ ಕೂಡಿದ ಹಗುರದಿಂದ ಸಾಧಾರಣ ಮಳೆ ಕರಾವಳಿ ಭಾಗದ ಜಿಲ್ಲೆಗಳಲ್ಲಿ ಒಂದೆರೆಡು ಕಡೆ ಆಗುವ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ರಾಜ್ಯದ ಒಳನಾಡಿನಲ್ಲಿ ಟ್ರಫ್ ನಿರ್ಮಾಣವಾಗಿರುವ ಹಿನ್ನೆಲೆಯಲ್ಲಿ ಬಹುತೇಕ ಕಡೆಗಳಲ್ಲಿ ಮಳೆಯಾಗುವ ಮುನ್ಸೂಚನೆಗಳಿವೆ. ಉತ್ತರ ಒಳನಾಡಿನ ಒಂದೆರೆಡು ಕಡೆ ಗುಡುಗು, ಮಿಂಚಿನಿಂದ ಕೂಡಿದ ಮಳೆಯ ಜೊತೆಗೆ ಗಂಟೆಗೆ 40 ರಿಂದ 50 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆಗಳಿವೆ.

ಗದಗ, ಬಾಗಲಕೋಟೆ, ವಿಜಯಪುರ, ಕಲಬುರಗಿ, ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳ ಕೆಲವೆಡೆ ಮಳೆಯಾಗುವ ಸಾಧ್ಯತೆಗಳಿವೆ. ಕಲ್ಯಾಣ ಕರ್ನಾಟಕದ ಬೀದರ್ ಸೇರಿದಂತೆ ಕೆಲವೆಡೆ ಒಣಹವೆ ಮುಂದುವರೆಯಲಿದೆ. ದಕ್ಷಿಣ ಒಳನಾಡಿನ ಹಲವೆಡೆ ಗುಡುಗು, ಮಿಂಚಿನಿಂದ ಕೂಡಿದ ಹಾಗೂ ಗಂಟೆಗೆ ಸುಮಾರು 50 ಕಿ.ಮೀ. ವೇಗದ ಬಿರುಗಾಳಿ ಸಹಿತ ಮಳೆಯಾಗುವ ಮುನ್ಸೂಚನೆಗಳಿವೆ. ಕೊಡಗು, ಹಾಸನ, ಮೈಸೂರು, ರಾಮನಗರ, ಮಂಡ್ಯ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಿಕ್ಕಬಳ್ಳಾಪುರ, ಕೋಲಾರ ಜಿಲ್ಲೆಗಳ ಕೆಲವೆಡೆ ಸಂಜೆ ಹಾಗೂ ರಾತ್ರಿ ವೇಳೆ ಮಳೆಯಾಗುವ ಸಾಧ್ಯತೆಗಳಿವೆ.

ಹೆಚ್ಚುಕಡಿಮೆ ಇದೇ ಪರಿಸ್ಥಿತಿ ಮುಂದಿನ 5 ದಿನಗಳ ಕಾಲ ಮುಂದುವರೆಯುವ ಸಾಧ್ಯತೆಗಳಿವೆ. ಆದರೆ ವ್ಯಾಪಕವಾಗಿ ರಾಜ್ಯಾದ್ಯಂತ ಎಲ್ಲಾ ಭಾಗಗಳಲ್ಲಿ ಮಳೆಯಾಗುವ ಸಾಧ್ಯತೆ ವಿರಳ. ಪೂರ್ವ ಮುಂಗಾರು ಮಳೆಯಾಗಿರುವುದರಿಂದ ಗುಡುಗು, ಮಿಂಚು, ಸಿಡಿಲು, ಆಲಿಕಲ್ಲು ಹಾಗೂ ಬಿರುಗಾಳಿ ಸಹಿತ ಕೆಲವೆಡೆ ಮಳೆಯಾಗುವುದು ಸಹಜ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಸ್ಥಳೀಯ ಹವಾಮಾನ ಮುನ್ಸೂಚನೆ ಪ್ರಕಾರ ಬೆಂಗಳೂರು ಸುತ್ತಮುತ್ತ ಮೋಡ ಕವಿದ ವಾತಾವರಣವಿದ್ದು, ಸಂಜೆ ಹಾಗೂ ರಾತ್ರಿ ವೇಳೆ ಹಗುರದಿಂದ

ಸಾಧಾರಣ ಮಳೆಯಾಗುವ ಸಾಧ್ಯತೆಗಳಿವೆ. ಕೆಲವೆಡೆ ಗುಡುಗು, ಮಿಂಚು ಹಾಗೂ ಬಿರುಗಾಳಿ ಸಹಿತ ಮಳೆಯಾಗುವ ಲಕ್ಷಣಗಳು ಗೋಚರಿಸುತ್ತಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಕಲ್ಯಾಣ ಕರ್ನಾಟಕದಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಕ್ರಮ

### ಜೂ. 1 ರಿಂದ ಜಿಲ್ಲೆಗಳಲ್ಲಿ 1 ಲಕ್ಷ ಎತ್ತರ ಸಸಿ ನೆಡುವ ಯೋಜನೆಗೆ ಚಾಲನೆ:ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಮೇ.10:ಕಲ್ಯಾಣ ಕರ್ನಾಟಕದ 7 ಜಿಲ್ಲೆಗಳು ಶೇ.10ಕ್ಕಿಂತ ಕಡಿಮೆ ಅರಣ್ಯ ಪ್ರದೇಶ ಹೊಂದಿರುವ ಜಿಲ್ಲೆಗಳ ಪಟ್ಟಿಯಲ್ಲಿದ್ದು, ಇಲ್ಲಿ ಹಸಿರು ಹೊದಿಕೆ ಹೆಚ್ಚಿಸಲು ಬರುವ ಜೂನ್ 1 ರಿಂದ ಒಂದು ಲಕ್ಷ ಸಸಿ ನೆಡುವ ಯೋಜನೆಗೆ ಚಾಲನೆ ನೀಡಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವ ಈಶ್ವರ ಖಂಡ್ರೆ ಹೇಳಿದರು. ಶನಿವಾರ ಕಲಬುರಗಿಯ ಐವಾನ್-ಎ-ಶಾಹಿ ಅತಿಥಿಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಲಬುರಗಿ-ಶೇ.5, ಬಳ್ಳಾರಿ-ಶೇ.7, ಯಾದಗಿರಿ ಮತ್ತು ರಾಯಚೂರು ತಲಾ ಶೇ.3ರಷ್ಟು ಮಾತ್ರ ಅರಣ್ಯ ಪ್ರದೇಶ ಇದೆ. ಹೀಗಾಗಿ ಜೂನ್ 1 ರಿಂದ ಈ ನಾಲ್ಕು ಜಿಲ್ಲೆಗಳಲ್ಲಿ ವಿಶೇಷವಾಗಿ ರಸ್ತೆ ಬದಿಯಲ್ಲಿ 1 ಲಕ್ಷ ಸಸಿ ನೆಡೆಯುವ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು ಎಂದ ಅವರು, ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಮುಂದಿನ 10-15 ವರ್ಷದಲ್ಲಿ 10-20 ರಷ್ಟು ಅರಣ್ಯ ಪ್ರಮಾಣ ಹೆಚ್ಚಿಸಲು ಯೋಜನೆ ರೂಪಿಸಲಾಗುತ್ತಿದೆ ಎಂದರು. ಡಿಸೆಂಬರ್ ಅಂತ್ಯಕ್ಕೆ ಮಾಡಬೂಳ ಪ್ರಾಣಿ ಸಂಗ್ರಹಾಲಯ ಲೋಕಾರ್ಪಣೆ:

(2ನೇ ಪುಟ ನೋಡಿ)

## ಕಲ್ಯಾಣ ಕರ್ನಾಟಕಕ್ಕೆ ಶಿಕ್ಷಕರ ನೇಮಕಾತಿ

### ಆಗಿದೆ ಒಳ ಮೀಸಲಾತಿಯಿಂದ ನೇಮಕಾತಿಗೆ ವಿಳಂಬ:ಡಾ.ಶರಣಪ್ರಕಾಶ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಮೇ.10:ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಈಗಾಗಲೆ 5,530 ಶಿಕ್ಷಕರ ನೇಮಕಾತಿಯಾಗಿದ್ದು, ಪರಿಶಿಷ್ಟ ಜಾತಿ ಒಳ ಮೀಸಲಾತಿ ಕಾರಣ ವಿಳಂಬವಾಗಿದೆ ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಹೇಳಿದರು. ಶನಿವಾರ ಕಲಬುರಗಿಯ ಐವಾನ್-ಎ-ಶಾಹಿ ಅತಿಥಿಗೃಹದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಸ್.ಎಸ್.ಎಲ್. ಫಲಿತಾಂಶ ಕುಸಿಯಲು ಶಿಕ್ಷಕರ ಕೊರತೆಯೆ ಪ್ರಮುಖ ಕಾರಣ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಅವರು, ಒಳ ಮೀಸಲಾತಿ ಸಮೀಕ್ಷೆ ನಂತರ ಶಿಕ್ಷಕರ ನೇಮಕಾತಿಯಾಗಿ ಸಮಸ್ಯೆ ಬಗೆಹರಿಯಲಿದೆ. ಖಾಯಂ ಶಿಕ್ಷಕರು ಇಲ್ಲದಕ್ಕಾಗಿಯೇ ಅತಿಥಿ ಶಿಕ್ಷಕರ ನೇಮಕಾತಿಯಾಗಿದೆ ಎಂದರು. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸಕ್ತ 2025-26ನೇ ಆರ್ಥಿಕ ಸಾಲಿಗೆ 5,000 ಕೋಟಿ ರೂ. ಅನುದಾನ ನೀಡಿದ್ದು, ಈ ಅನುದಾನ ಸಮರ್ಪಕ ಖರ್ಚು ಮಾಡಲು ಕೂಡಲೆ ಕ್ರಿಯಾ ಯೋಜನೆ ರೂಪಿಸಿ ಅನುಷ್ಠಾನ ತರಲು ಕೆಲಸ ಕಾರ್ಯಗಳಿಗೆ ಚಾಲನೆ ನೀಡಲು ಇಂದು ಮಂಡಳಿ ಸಭೆ ಕರೆಯಲಾಗಿದೆ ಎಂದರು.

ಇನ್ನು ಮಂಡಳಿಯಿಂದಲೆ ಪ್ರತ್ಯೇಕ ಇಂಜಿನೀಯರಿಂಗ್ ವಿಂಗ್ ಸ್ಥಾಪನೆ ಕುರಿತಂತೆ ಮಾತನಾಡಿದ ಸಚಿವರು ಮಂಡಳಿಯಿಂದ ವಿಂಗ್ ಅದು ಮತ್ತೊಂದು ಇಲಾಖೆಯಾಗಿ ಹೊರಹೊಮ್ಮುತ್ತೆ ವಿನ: ಸಮಸ್ಯೆಗೆ ಅದುವೇ ಮುಕ್ತಿ ಅಲ್ಲ. ಪ್ರಸ್ತುತ ಇರುವ ಲೋಕೋಪಯೋಗಿ, ಆರ್.ಡಿ.ಪಿ.ಆರ್., ನಿರ್ಮಿತಿ ಕೇಂದ್ರ, ಲ್ಯಾಂಡ್ ಆರ್ಮಿ ಸೇರಿದಂತೆ ಎಲ್ಲಾ ಇಲಾಖೆಗಳನ್ನು ಬಳಸಿಕೊಂಡಲ್ಲಿ ಕೆಲಸದ ವೇಗ ಹೆಚ್ಚಲಿದೆ. ಹೀಗಾಗಿ ಎಲ್ಲಾ ಇಲಾಖೆಗಳಿಗೆ ಕೆಲಸ ಹಂಚಲಾಗುತ್ತಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಅರಣ್ಯ, ಜೀವಿಶಾಸ್ತ್ರ ಹಾಗೂ ಪರಿಸರ ಸಚಿವ ಈಶ್ವರ ಖಂಡ್ರೆ, ಕೆ.ಕೆ.ಆರ್.ಡಿ.ಬಿ ಅಧ್ಯಕ್ಷ ಡಾ.ಅಜಯ್ ಸಿಂಗ್, ಶಾಸಕ ತಿಪ್ಪಣ್ಣಪ್ಪ ಕಮಕನೂರ, ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಶರಣು ಮೋದಿ, ಮುಖಂಡ ನೀಲಕಂಠ ಮೂಲಗೆ ಇದ್ದರು.

**ಒಂದನೇ ಪುಟದಿಂದ**

## ಮನುಕುಲಕ್ಕೆ ಆದರ್ಶ:ಸಚಿವ ರಹೀಮ್ ಖಾನ್

ಹೇಮರೆಡ್ಡಿ ಮಲ್ಲಮ್ಮ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತ್ಯುತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಹಾತ್ಮರು ಕೇವಲ ಒಂದು ಜಾತಿಗೆ ಸೀಮಿತರಾಗಬಾರದು. ಹೇಮರೆಡ್ಡಿ ಮಲ್ಲಮ್ಮರ ಆದರ್ಶಗಳನ್ನು ತಾವೆಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಈ ಮೂಲಕ ಸನ್ಮಾರ್ಗದಲ್ಲಿ ಸಾಗಬೇಕು ಎಂದರು.

ಬೀದರ ದಕ್ಷಿಣ ಕ್ಷೇತ್ರದ ಶಾಸಕರಾದ ಡಾ. ಶೈಲೇಂದ್ರ ಕೆ. ಬೆಲ್ದಾಳೆ ಅವರು ಮಾತನಾಡಿ, ಹೇಮರೆಡ್ಡಿ ಮಲ್ಲಮ್ಮ ಅವರ ಪರಮ ಶಿವಭಕ್ತೆ. ತಮ್ಮ ಸಮಾಜದವರದ್ದು ಬೇಡುವ ಕೈಯಾಗಬಾರದು ಕೊಡುವ ಕೈಯಾಗಬೇಕು ಎನ್ನುವುದು ಮಲ್ಲಮ್ಮನವರ ಆಸೆಯಾಗಿತ್ತು ಅದರಂತೆ ರೆಡ್ಡಿ ಸಮಾಜ ಈಗ ಬಲಿಷ್ಠ ಸಮಾಜವಾಗಿದೆ. ಸಮಾಜದವರ ಮನವೀಯಂತೆ ಸಮುದಾಯ ಭವನಕ್ಕಾಗಿ 15 ಲಕ್ಷ ಅನುಧಾನ ನೀಡಿದ್ದೇನೆ. ಪೋಷಕರು ತಮ್ಮ ಮಕ್ಕಳಿಗೆ ಮೊಬೈಲ್‌ನಿಂದ ದೂರವಿಡಬೇಕು, ಅವರ ಮೇಲೆ ನಿಗಾವಹಿಸಬೇಕು ಹಾಗೂ ಇತ್ತೀಚಿಗೆ ಅಪಘಾತ ಪ್ರಮಾಣ ಹೆಚ್ಚಾಗುತ್ತಿದ್ದೂ ಥ್ರಿಬಲ್ ರೈಡ್ ಬೈಕ್ ಸವಾರಿಗೆ ಅವಕಾಶ ನೀಡಬಾರದು ಎಂದರು.

ಹಿರಿಯ ಉಪನ್ಯಾಸಕ ಶಿವಶರಣಪ್ಪಾ ಹುಗ್ಗಿ ಪಾಟೀಲ್ ಹೇಮರೆಡ್ಡಿ ಮಲ್ಲಮ್ಮ ಜೀವನ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಎಸ್.ಎಸ್.ಎಲ್.ಸಿ, ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದು ಉತ್ತೀರ್ಣರಾದ, ಸರ್ಕಾರಿ ಸೇವೆಗೆ ಆಯ್ಕೆಯಾದ, ಮುಂಬಡ್ತಿ, ನಿವೃತ್ತರಾದ ಹಾಗೂ ಎಂ.ಬಿ.ಬಿ.ಎಸ್ ಪದವಿ ಪಡೆದವರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯ ರಾಜು ಚಿಂತಾಮಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಸಿದ್ರಾಮ್ ಶಿಂಧೆ, ಎನ್.ವಿ.ಗುರೂಜಿ, ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷ ಶಂಕರರೆಡ್ಡಿ ಚಿಟ್ಟಾ, ನಿವೃತ್ತ ಎಡಿಸಿ ಬಾಬುರೆಡ್ಡಿ ಸಂಗ್ರಾಮ ರೆಡ್ಡಿ, ಗೋಪಾಲ್ ರೆಡ್ಡಿ, ರವಿ ರೆಡ್ಡಿ, ಚಂದ್ರಶೇಖರ ರೆಡ್ಡಿ, ಶ್ರೀನಿವಾಸ್ ರೆಡ್ಡಿ, ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹೊದಿಕೆ ಹೆಚ್ಚಿಸಲು ಕ್ರಮ

ಚಿತ್ತಾಪುರ ಕ್ಷೇತ್ರದ ಮಾಡಬೂಳದಲ್ಲಿ 60 ಕೋಟಿ ರೂ. ವೆಚ್ಚದಲ್ಲಿ ಸುಮಾರು 40 ಎಕರೆ ಪ್ರದೇಶದಲ್ಲಿ ಸ್ಥಾಪಿಸಲಾಗುತ್ತಿರುವ ಪ್ರಾಣಿ ಸಂಗ್ರಹಾಲಯ ಕಾರ್ಯ ಭರದಿಂದ ಸಾಗಿದ್ದು, ಇಂದು ಕಾಮಗಾರಿ ವೀಕ್ಷಿಸಿದ್ದೇನೆ. ಡಿಸೆಂಬರ್ ಅಂತ್ಯದೊಳಗೆ ಇದನ್ನು ಲೋಕಾರ್ಪಣೆ ಮಾಡಲಾಗುವುದು ಎಂದು ಸಚಿವ ಈಶ್ವರ ಖಂಡ್ರೆ ತಿಳಿಸಿದರು.

ಪ್ರಾಣಿ ಸಂಗ್ರಹಾಲಯ ಸ್ಥಾಪನೆಯಾದ ನಂತರ ಹುಲಿ, ಸಿಂಹ, ಚಿರತೆ ಸೇರಿದಂತೆ ಅನೇಕ ಪ್ರಾಣಿಗಳ ವೀಕ್ಷಣೆಯ ಅವಕಾಶ ದೊರೆಯಲಿದೆ. ಇಲ್ಲಿನ ಸಿಬ್ಬಂದಿಗಳಿಗೆ ಮೈಸೂರು, ಬನ್ನೇರುಘಟ್ಟದಲ್ಲಿ ತರಬೇತಿ ನೀಡಲಾಗುವುದು ಎಂದರು.ಪತ್ರಿಕಾಗೋಷ್ಠಿಯಲ್ಲಿ ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ, ಕೆ.ಕೆ.ಅರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್, ಶಾಸಕ ತಿಪ್ಪಣ್ಣಪ್ಪ ಕಮಕನೂರ, ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಶರಣು ಮೋದಿ, ಮುಖಂಡ ನೀಲಕಂಠ ಮೂಲಗೆ ಇದ್ದರು.

## ನೆರವು ನೀಡಿದ ಐಎಂಎಫ್ ವಿರುದ್ಧ ಓವೈಸಿ ಕಿಡಿ

ಆದರೆ ನಿಮ್ಮಲ್ಲಿರುವ ಎಲ್ಲವೂ ಇಲ್ಲಿನ ಶಾಂತಿಯನ್ನು ಹಾಳುಮಾಡಲು ಮತ್ತು ಹಿಂದೂಗಳು ಮತ್ತು ಮುಸ್ಲಿಮರ ನಡುವೆ ಸಂಘರ್ಷವನ್ನು ಸೃಷ್ಟಿಸುವ ತಪ್ಪು ನೀತಿಗಳಾಗಿವೆ" ಎಂದು ಓವೈಸಿ ಪಾಕ್ ವಿರುದ್ಧವೂ ವಾಗ್ದಾಳಿ ನಡೆಸಿದ್ದಾರೆ.

# ವೈಶಾಖ ಬುದ್ಧ ಪೂರ್ಣಿಮೆ ಕಾರ್ಯಕ್ರಮ ಹಿನ್ನೆಲೆ: ಬುದ್ಧವಿಹಾರಕ್ಕೆ ನಗರ ಸಾರಿಗೆ ಬಸ್‌ಗಳ ಕಾರ್ಯಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.10:ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ವಿಭಾಗ-1ರ ವತಿಯಿಂದ ಮೇ 12ರಂದು ಸೋಮವಾರಬುದ್ಧವಿಹಾರದಲ್ಲಿ "2569ನೇ" ವೈಶಾಖ ಬುದ್ಧ ಪೂರ್ಣಿಮೆ ಕಾರ್ಯಕ್ರಮ ಜರುಗಲಿದ್ದು,ಆದ್ದರಿಂದವಿವಿಧ ಸ್ಥಳಗಳಿಂದಆಗಮಿಸಲಿರುವ ಉಪಾಸಕರು/ಸಾರ್ವಜನಿಕ ಪ್ರಯಾಣಿಕರಅನುಕೂಲಕ್ಕಾಗಿ ನಗರ ಕೆಳಕಂಡ ಸ್ಥಳಗಳಿಂದ ಬುದ್ಧವಿಹಾರಕ್ಕೆನಗರ ಸಾರಿಗೆ ಬಸ್‌ಗಳನ್ನುಕಾರ್ಯಾಚರಣೆ ಮಾಡಲಾಗುತ್ತಿದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗ-1ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ.

ಕಲಬುರಗಿ

ಕೇಂದ್ರ ಬಸ್‌ನಿಲ್ದಾಣ, ಬಿದ್ದಾಪುರ ಕಾಲೋನಿ, ಹೀರಾಪುರ ವೃತ್ತ, ರೈಲು ಬಸ್ ನಿಲ್ದಾಣ, ಜಗತ್ ವೃತ್ತ (ಅಂಬೇಡ್ಕರ್ ವೃತ್ತ) ಹಾಗೂ ನೆಹರು ಗಂಜ್‌ದಿಂದ ಬುದ್ಧ ವಿಹಾರಕ್ಕೆ ನಗರ ಸಾರಿಗೆ ಬಸ್‌ಗಳನ್ನುಕಾರ್ಯಾಚರಣೆ ಮಾಡಲಾಗುತ್ತಿದೆ.

ಬಸ್‌ಗಳ ಕುರಿತು ಹೆಚ್ಚಿನ ಮಾಹಿತಿಗಾಗಿಕಲಬುರಗಿಘಟಕ-4ರ ಘಟಕ ವ್ಯವಸ್ಥಾಪಕರ ಮೊಬೈಲ್‌ಸಂಖ್ಯೆ7022012103 ಹಾಗೂಕಲಬುರಗಿಘಟಕ-4ರ ಸಂಚಾರಿನಿರೀಕ್ಷಕರಮೊಬೈಲ್ ಸಂಖ್ಯೆ 9663961479 ಗಳಿಗೆ ಸಂಪರ್ಕಿಸಬೇಕು. ಉಪಾಸಕರು/ಪ್ರಯಾಣಿಕರು/ ಯಾತ್ರಾರ್ಥಿಗಳು ಈ ಬಸ್‌ಗಳ ಸದುಪಯೋಗ ಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಅಫಜಲಪೂರ (ಚೌಡಾಪೂರ): ವಿವಿಧ ವೃತ್ತಿ ಘಟಕಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಕಲಬುರಗಿ,ಮೇ. 10:ಅಫಜಲಪೂರ(ಚೌಡಾ ಪೂರಸರ್ಕಾರಿ ಕೈಗಾರಿಕಾ ತರಬೇತಿಸಂಸ್ಥೆಯಲ್ಲಿಎನ್.ಸಿ.ವಿ.ಟಿ. ಸಂಯೋಜನೆಯಡಿಸಿ.ಟಿ.ಎಸ್. ಹಾಗೂಉದ್ಯೋಗಯೋಜನೆಯಡಿ ಈ ಕೆಳಕಂಡವೃತ್ತಿಘಟಕಗಳಿಗೆ ಪ್ರವೇಶ ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕಅರ್ಜಿಆಹ್ವಾನಿಸಲಾಗಿದೆ ಎಂದು ಅಫಜಲಪೂರ (ಚೌಡಾಪೂರ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಖಾಲಿ ಇರುವ ಸಿ.ಟಿ.ಎಸ್.ವೃತ್ತಿ ಘಟಕಗಳ ವಿವರ ಇಂತಿದೆ. ಎಲೆಕ್ಟ್ರಿಶಿಯನ್, ಎಲೆಕ್ಟ್ರಾನಿಕ್ ಮೆಕ್ಯಾನಿಕ್,ಫಿಟ್ಟರ್,ಮೆಕ್ಯಾನಿಕ್ ಮೋಟಾರವಹಿಕಲ್,ಟೆಕ್ನಿಶಿಯನ್ ರೆಫ್ರಿಜರೇಟರ್ ಆಂಡ್ ಏರ್ ಕಂಡಿಶನಿಂಗ್(ಟಿ.ಆರ್.ಆಂಡ್ ಎ.ಸಿ.). ಟಾಟಾವೃತಿಘಟಕಗಳ ವಿವರ ಇಂತಿದೆ. ಮೆಕ್ಯಾನಿಕ್ ಎಲೆಕ್ಟ್ರಿಕ್ ವಹಿಕಲ್, ಸಿಎನ್‌ಸಿ ಮಶಿನಿಂಗ್ ಟೆಕ್ನಿಶಿಯನ್,ಬೇಸಿಕ್ ಡಿಸೈನರ್ ಆಂಡ್ ವರ್ಚುಯಲ್ ವೇರಿಫೈಯರ್,ಇಂಡಸ್ಟ್ರೀಯಲ್ ರೋಬೋಟಿಕ್ ಆಂಡ್ ಡಿಜಿಟಲ್ ಮ್ಯಾನುಫ್ಯಾಕ್ಚರಿಂಗ್,ಅರ್ಟಿಸನ್ ಯುಸಿಂಗ್ ಅಡ್ವಾನ್ಸ್‌ಡ್ ಟೂಲ್ಸ್‌ಟೆಕ್ನಿಶಿಯನ್ ಹಾಗೂ ಮ್ಯಾನುಫ್ಯಾಕ್ಚರಿಂಗ್ ಪ್ರೋಸೆಸ್ ಕಂಟ್ರೋಲ್ ಅಟೋಮೇಶನ್ ಟೆಕ್ನಿಶಿಯನ್.ಅರ್ಹಅಭ್ಯರ್ಥಿಗಳು www.cite.karnataka. gov.in<http://www. cite.karnataka.gov. in>ವೆಬ್‌ಸೈಟ್‌ದಲ್ಲಿಆನ್‌ಲೈನ್ ಮುಖಾಂತರ ಅಥವಾ ಚೌಡಾಪೂರಸರಕಾರಿಕೈಗಾರಿಕಾ ತರಬೇತಿಸಂಸ್ಥೆಯಲ್ಲಿ2025ರಮೇ 28 ಸಂಜೆ 5 ಗಂಟೆಯೊಳಗಾಗಿ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಭೇಟಿನೀಡಲು ಹೆಚ್ಚಿನ ಮಾಹಿತಿಗಾಗಿ ಅಫಜಲಪೂರ (ಚೌಡಾಪೂರ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಸಂಸ್ಥೆಗೆ ಹಾಗೂ ಸಂಸ್ಥೆಯ ಪ್ರಾಚಾರ್ಯ ಸುಭಾಷ ಯವಳೆ-9480360909, ತರಬೇತಿ ಅಧಿಕಾರಿ ಪ್ರವೀಣ ಮಳ್ಳಿ-9844362411,ಕಿರಿಯ ತರಬೇತಿಅಧಿಕಾರಿಅಪ್ಪಾರಾಯ ಭರಣಿಕ-9945834264,ದೇವಿಂದ್ರಪ್ಪ ಕುಂಬಾರ-7483673282, ವಿರೇಶ್-8088071535, ಪ್ರಥಮ ದರ್ಜೆ ಸಹಾಯಕ ಆನಂದ-9880541331ಹಾಗೂ ದ್ವಿತಿಯ ದರ್ಜೆ ಸಹಾಯಕ (ತರಬೇತಿ ವಿಭಾಗ) ಉಮೇಶ -9902107103 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ | ಫೇಲಾದ ಮಕ್ಕಳಿಗೆ ಉಚಿತ ಟ್ಯೂಶನ್





ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 10 : ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆಉಚಿತಟ್ಯೂಶನ್ ಮೂಲಕಸಪ್ಲಿಮೆಂಟರಿಪರೀಕ್ಷೆಗೆ ಸಜ್ಜುಗೊಳಿಸಲು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಮುಂದಾಗಿದೆ.

ಮೇ 26ರಿಂದ ಸಪ್ಲಿಮೆಂಟರಿ ಪರೀಕ್ಷೆಗಳು ಆರಂಭಗೊಳ್ಳಲಿವೆ. ಪರೀಕ್ಷೆಗೂ ಮುನ್ನ ಹತ್ತು ದಿನಗಳ ಕಾಲ ಜಿಲ್ಲೆಯಾದ್ಯಂತ ಉಚಿತ ಟ್ಯೂಶನ್ ನಡೆಸಲು ನಿರ್ಧರಿಸಲಾಗಿದೆ.ಮೇ15ರಿಂದ 25ರ ವರೆಗೆ ತರಗತಿಗಳು ನಡೆಯಲಿವೆ. ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿನಾಲ್ಕುಕೇಂದ್ರಗಳನ್ನು ಸಜ್ಜುಗೊಳಿಸಿ, ಅಲ್ಲಿ ಮಕ್ಕಳಿಗೆ ಪರೀಕ್ಷೆಗೆ ಸಿದ್ಧಗೊಳಿಸಲು ತೀರ್ಮಾನಿಸಲಾಗಿದೆ.

ಜಿಲ್ಲೆಯಲ್ಲಿ ಪರೀ-ಕ್ಷೆಗೆ ಹಾಜರಾಗಿದ್ದ ಒಟ್ಟು 24,187 ವಿದ್ಯಾರ್ಥಿಗಳಲ್ಲಿ 12,651 ಜನ ಪಾಸಾಗಿದ್ದಾರೆ. 11,536 ಮಂದಿ ಫೇಲಾಗಿದ್ದು, ಇವರನ್ನುಸಂಪರ್ಕಿಸಿ,ವಿಶೇಷ ತರಗತಿಗಳಿಗೆ ಕರೆತರಲು ಸಿದ್ಧತೆ ನಡೆದಿದೆ.

ಉಚಿತ ಟ್ಯೂಶನ್‌ಗೆ ಮಕ್ಕಳು ಹಾಜರಾಗುವ ಜವಾಬ್ದಾರಿಯನ್ನು ಆಯಾ ಶಾಲೆಗಳ ಮುಖ್ಯಶಿಕ್ಷಕರಿಗೆ ವಹಿಸಲಾಗಿದೆ. ಮಕ್ಕಳು ಅಥವಾ ಅವರ ಪೋಷಕರನ್ನು ಸಂಪರ್ಕಿಸಿ, ಹತ್ತು ದಿನಗಳ ಟ್ಯೂಶನ್‌ಗೆ ಕರೆತಂದು, ಮಕ್ಕಳು ಯಾವ ವಿಷಯದಲ್ಲಿ ಬಹಳ ಕಡಿಮೆ ಅಂಕಗಳನ್ನು ಗಳಿಸಿದ್ದಾರೆ ಎನ್ನುವುದನ್ನು ತಿಳಿದುಕೊಂಡು, ಆ ವಿಷಯಕ್ಕೆ ಹೆಚ್ಚಿನ ಒತ್ತು ಕೊಡಲು ಶಿಕ್ಷಣ ಇಲಾಖೆ ಮುಂದಾಗಿದೆ. ರಜಾ ದಿನಗಳು ಇರುವುದರಿಂದ ಹೆಚ್ಚಿನ ಮಕ್ಕಳು ಅಜ್ಜ-ಅಜ್ಜಿ ಹಾಗೂ ಇತರೆ ಸಂಬಂಧಿಕರ ಮನೆಗಳಿಗೆ ಹೋಗಿದ್ದಾರೆ. ಇನ್ನು, ಕೆಲವರು ಕುಟುಂಬ ಸದಸ್ಯರೊಂದಿಗೆಪ್ರವಾಸದಲ್ಲಿದ್ದಾರೆ. ಹೀಗಿದ್ದರೂ ಅವರೊಂದಿಗೆ ಸಂಪರ್ಕ ಸಾಧಿಸಿ, ಟ್ಯೂಶನ್‌ಗೆ ಕರೆತರಲು ಶತಾಯಗತಾಯ ಪ್ರಯತ್ನ ಆರಂಭಗೊಂಡಿದೆ. ಪೋಷಕರಿಂದಲೂ ಉತ್ತಮ ಪ್ರತಿಕ್ರಿಯೆವ್ಯಕ್ತವಾಗುತ್ತಿದೆಎಂದು ಗೊತ್ತಾಗಿದೆ. ಅಂಕಿ ಅಂಶ 24187ಪರೀಕ್ಷೆಗೆಹಾಜರಾದವರು 12651 ಪಾಸಾದವರು 11536 ಫೇಲಾದವರು 52.30% ಒಟ್ಟು ಫಲಿತಾಂಶ

'ಫಲಿತಾಂಶ ಕುಸಿತಕ್ಕೆ ಅತಿಥಿ ಶಿಕ್ಷಕರು ಹೊಣೆ' (ಚಿತ್ರ ಇದೆ) ಹಿಂದಿನ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಶೇ 10ರಷ್ಟು ಫಲಿತಾಂಶ ಕುಸಿದಿದೆ. ಇದಕ್ಕೆ ಅತಿಥಿ ಶಿಕ್ಷಕರೇ ಹೊಣೆಗಾರರು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ತಿಳಿಸಿದೆ. 'ಜಿಲ್ಲೆಯಲ್ಲಿ ಶಿಕ್ಷಕರ ಸಂಖ್ಯೆ ಕೊರತೆ ಇದೆ. ಆ ಜಾಗದಲ್ಲಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗಿತ್ತು. ಆದರೆ ಅವರಲ್ಲಿ ಬೋಧನೆಯ ಸಾಮರ್ಥ್ಯ ಎಷ್ಟಿದೆ ಎನ್ನುವುದನ್ನುಪರಿಶೀಲಿಸಲಿಲ್ಲ. ಯಾರೇ ಬಂದರೂ ಅವರನ್ನು ನೇಮಕ ಮಾಡಿಕೊಳ್ಳಲಾಗಿತ್ತು. ಯಾರೂ ಆ ಹುದ್ದೆಗೆ ಬರದಿದ್ದಾಗ ಅದು ಅನಿವಾರ್ಯ ಕೂಡ ಆಗುತ್ತದೆ' ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಸಲೀಂ ಪಾಶಾ ತಿಳಿಸಿದ್ದಾರೆ. ಈ ಸಲವೂ ಯಾರು ಸಿಗದಿದ್ದರೆ ಹಿಂದಿನ ಅತಿಥಿ ಶಿಕ್ಷಕರನ್ನೇ ಮುಂದುವರೆಸಲಾಗುತ್ತದೆ. ಆದರೆ ಯಾರಲ್ಲಿ ಸರಿಯಾಗಿ ಪಾಠ ಮಾಡುವ ಸಾಮರ್ಥ್ಯ ಇಲ್ಲವೋ ಅಂತಹವರನ್ನುಬದಲಿಸಬೇಕೆಂದು ಜಿಲ್ಲಾಡಳಿತವನ್ನುಕೋರಲಾಗಿದೆ ಎಂದು ವಿವರಿಸಿದ್ದಾರೆ.

**'ಪರೀಕ್ಷೆಗಿಲ್ಲ ಶುಲ್ಕ'**

'ವಾರ್ಷಿಕ ಪರೀಕ್ಷೆಯಲ್ಲಿ ಅನುತ್ತೀರ್ಣರಾದವಿದ್ಯಾರ್ಥಿಗಳಿಗೆ ಮೇ 26ರಿಂದ ಜೂ. 2ರ ವರೆಗೆ ಎಸ್‌ಎಸ್‌ಎಲ್‌ಸಿ ಪರೀಕ್ಷೆ-2 ನಡೆಸಲಾಗುತ್ತದೆ. ವಿದ್ಯಾರ್ಥಿಗಳುಹೆಸರುನೋಂದಣಿ ಮಾಡಿಸಬಹುದು. ಪರೀ-ಕ್ಷೆ ಬರೆಯಲು ಯಾವುದೇ ರೀತಿಯ ಶುಲ್ಕ ಇರುವುದಿಲ್ಲ. ಈ ಅವಕಾಶ ಸದುಪಯೋಗ ಪಡೆದುಕೊಳ್ಳಬೇಕು' ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಮನವಿ ಮಾಡಿದ್ದಾರೆ.

## ಖಾಜಾ ಬಂದೇ ನವಾಜ್ ಉರುಸ್ ಹಿನ್ನೆಲೆ: ಹೆಚ್ಚುವರಿ ವಿಶೇಷ ಬಸ್‌ಗಳ ವ್ಯವಸ್ಥೆ

ಕಲಬುರಗಿ,ಮೇ.10:ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ-1 ರಿಂದ ಪ್ರತಿ ವರ್ಷದಂತೆ ಈ ವರ್ಷವೂ ಸಹ ಇದೇ ಮೇ 14 ರಿಂದ 16 ರವರೆಗೆ ಜರುಗಲಿರುವ ಉರುಸ್-ಎ-ಶರೀಫ್ ಹಜರತ್ 621ನೇ ಖಾಜಾ ಬಂದೇ ನವಾಜ್ ಉರುಸ್‌ಗೆಹಿನ್ನೆಲೆಯಲ್ಲಿವಿವಿಧ ಸ್ಥಳಗಳಿಂದ ಆಗಮಿಸಲಿರುವ ಯಾತ್ರಾರ್ಥಿಗಳಅನುಕೂಲಕ್ಕಾಗಿ ಕೆಳಕಂಡ ಮಾರ್ಗಗಳಲ್ಲಿ ಹೆಚ್ಚುವರಿ ವಿಶೇಷ ಬಸ್‌ಗಳ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ ಕಲಬುರಗಿ ವಿಭಾಗ-1ರ ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದ್ದಾರೆ. ಕಲಬುರಗಿ-ಹೈದ್ರಾಬಾದ್ ವ್ಹಾಯಾ ಜಹೀರಾಬಾದ್, ಕಲಬುರಗಿ-ಹೈದ್ರಾಬಾದ್ ವ್ಹಾಯಾ ಸೇಡಂ ಮತ್ತು ಕೊಡಂಗಲ್, ಕಲಬುರಗಿ-ತಾಂಡೂರುವ್ಹಾಯಾ ಚಿಂಚೋಳಿ, ಕಲಬುರಗಿ-ಮೆಹಬೂಬ್‌ನಗರ,ಕಲಬುರಗಿ-ಬೀದರ,ಕಲಬುರಗಿ-ವಿಜಯಪುರ, ಕಲಬುರಗಿಯಿಂದ ಸೇಡಂ, ಚಿಂಚೋಳಿ, ಚಿತ್ತಾಪೂರ ಹಾಗೂ ಕಾಳಗಿ ಇತ್ಯಾದಿ ಮುಖ್ಯ ಸ್ಥಳಗಳಿಗೆ ವಿಶೇಷ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ.

## ಮುಖ್ಯಮಂತ್ರಿಗಳ ವಿಡಿಯೋ ಸಂವಾದ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮೇ. 10: ಮುಖ್ಯಮಂತ್ರಿಶ್ರೀಸಿದ್ದರಾಮಯ್ಯ ಅವರುಯುದ್ಧಸಂದರ್ಭದಲ್ಲಿ ರಾಜ್ಯದಲ್ಲಿ ಶಾಂತಿ, ಸುವ್ಯವಸ್ಥೆ ಹಾಗೂ ಆಹಾರ ಉತ್ಪನ್ನಗಳ ಕೃತಕ ಅಭಾವ ಸೃಷ್ಟಿ, ಅನಗತ್ಯ ಬೆಲೆ ಹೆಚ್ಚಳದ ಕುರಿತು ಜಿಲ್ಲಾ ಮಟ್ಟದಲ್ಲಿ ಅವಲೋಕಿಸಿ, ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಸೂಕ್ತ ನಿರ್ದೇಶನನೀಡುವಸಲುವಾಗಿ ರಾಜ್ಯದ ಎಲ್ಲ ಜಿಲ್ಲೆಗಳ ಡಿಸಿ, ಎಸ್ ಪಿ, ಪೊಲೀಸ್ ಆಯುಕ್ತರೊಂದಿಗೆ ಇಂದು ಸಂಜೆ ವಿಡಿಯೋ ಸಂವಾದ ನಡೆಸಿದರು.ಮುಖ್ಯಮಂತ್ರಿಗಳ ಇಂದಿನವಿಡಿಯೋಸಂವಾದದಲ್ಲಿ ಕಲಬುರಗಿ ಜಿಲ್ಲಾಧಿಕಾರಿ ಬಿ ಫೌಜಿಯಾ ತರನ್ನುಮ್,ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್. ಡಿ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಸಿಂಧೆ, ವಿಮಾನ ನಿಲ್ದಾಣ ಅಧಿಕಾರಿ, ಹಾಗೂ ರೈಲು ನಿಲ್ದಾಣದ ಅಧಿಕಾರಿ ಸಂಬಂಧಪಟ್ಟಅಧಿಕಾರಿಗಳು ಭಾಗವಹಿಸಿದ್ದರು.

## ಭಾರತೀಯ ಸೈನಿಕರಿಗೆ ಶಕ್ತಿ ತುಂಬಲು ಪೂಜೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 10 :ಉಗ್ರರ ವಿರುದ್ಧ ಹೋರಾಡುತ್ತಿರುವ ಭಾರತೀಯ ಸೈನಿಕರಿಗೆ ದೇವರು ಇನ್ನಷ್ಟು ಶಕ್ತಿ ಕೊಡಲಿ ಎಂದು ಪ್ರಾರ್ಥಿಸಿ ಅಮರೇಶ್ವರ ದೇವಸ್ಥಾನದಲ್ಲಿ ಶುಕ್ರವಾರ ವಿಶೇಷ ಪೂಜೆ ಸಲ್ಲಿಸಲಾಯಿತು.

ಶಾಸಕ ಪ್ರಭು ಚವಾಣ್ ಹಾಗೂಸ್ಥಳೀಯಮುಖಂಡರು ಉದ್ಭವಲಿಂಗಅಮರೇಶ್ವರನಿಗೆ ಶಲ್ಯ ತೊಡಿಸಿ ಕಾಯಿ ಒಡೆದು ಪ್ರಾರ್ಥಿಸಿದರು.

ಆಪರೇಷನ್ ಸಿಂಧೂರ್ ಕಾರ್ಯಾಚರಣೆಯಲ್ಲಿದೇಶದ ಗೌರವಹೆಚ್ಚಿಸಿರುವಭಾರತೀಯ ಸೈನಿಕರ ಬಗ್ಗೆ ತುಂಬಾ ಹೆಮ್ಮೆ ಇದೆ. ನಮ್ಮ ಸೈನಿಕರ ಶಕ್ತಿ ಎಂತಹದ್ದುಎಂಬುದು ಉಗ್ರರಿಗೆ ಚೆನ್ನಾಗಿ ಗೊತ್ತಿದೆ ಎಂದರು.

ಕಾಶ್ಮೀರದ ಪಹಲ್ಗಾಮ್ದಲ್ಲಿ ಉಗ್ರರ ದಾಳಿಯಿಂದ ಹತ್ಯೆಯಾದವರ ಆತ್ಮಕ್ಕೆ ಶಾಂತಿ ಕೋರಿಪ್ರಾರ್ಥಿಸಿದರು.ಮುಖಂಡ ರಾಮಶೆಟ್ಟಿಪನ್ನಾಳೆ,ಧೊಂಡಿಬಾ ನರೋಟೆ,ಶಿವರಾಜ ಅಲ್ಮಾಜೆ, ದಯಾನಂದ ಘೂಳೆ,ಕೇರಬಾ ಪವಾರ್, ವೀರೇಶ ಅಲ್ಮಾಜೆ, ಖಂಡೋಬಾ ಕಂಗಟೆ,ಎಂ.ಡಿ ಸಲಾವುದ್ದಿನ್, ಮಹಾದೇವ ಅಲ್ಮಾಜೆ,ಶಿವಾಜಿ ಬೋಗಾರ್, ಸಂದೀಪ ಪಾಟೀಲ ಇದ್ದರು.

## ಹೇಮರಡ್ಡಿ ಮಲ್ಲಮ್ಮ ಮೋಕ್ಷ ಪಡೆಯಲು ಲೌಕಿಕ ಪ್ರಪಂಚವನ್ನು ತ್ಯಾಗ ಮಾಡದೇ ಸಂಸಾರದಲ್ಲಿದ್ದುಕೊಂಡ ಸದ್ಗತಿ ಹೊಂದಿದರು:ಕಮಕನೂರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.10:ಹೇಮರೆಡ್ಡಿ ಮಲ್ಲಮ್ಮ ಜೀವನ ಚರಿತ್ರೆಶ್ರೀಶೈಲ ಮಲ್ಲಿಕಾರ್ಜುನನನ್ನುತನ್ನಆರಾಧ ದೈವವಾಗಿ ಆರಾಧಿಸಿ,ಅವರನ್ನು ಸಾಕ್ಷತ್ಕರಿಸಿಕೊಂಡ ಹೇಮರಡ್ಡಿ ಮಲ್ಲಮ್ಮ ಮೋಕ್ಷಪಡೆಯಲು ಲೌಕಿಕ ಪ್ರಪಂಚವನ್ನು ತ್ಯಾಗ ಮಾಡದೇಸಂಸಾರದಲ್ಲಿದ್ದುಕೊಂಡೆ ಸದ್ಗತಿ ಹೊಂದಿದರು ಎಂದು ವಿಧಾನ ಪರಿಷತ್ ಸದಸ್ಯರಾದ ತಿಮ್ಮಣಪ್ಪ ಕಮಕನೂರ ಅವರು ಹೇಳಿದರು.

ಶನಿವಾರದಂದು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸುವರ್ಣ ಸಭಾಭವನದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಕಲಬುರಗಿ ಇವರುಗಳುಸಂಯುಕ್ತಾಶ್ರಯದಲ್ಲಿ ಮಹಾಸಾಧ್ವಿ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಮಾತನಾಡಿದರು.

ಸಾಕ್ಷಿತ ಮಲ್ಲಿಕಾರ್ಜುನ ಕಂಡುಕೊಂಡರು. ಎಲ್ಲ ಕಷ್ಟ ಕಾರ್ಪಣ್ಯ ಅರೆತು ಮುಂದಿನ ಮಾನವ ಕುಲಕ್ಕೆ ಹೇಮ್ಮರಡ್ಡಿ ಮಲ್ಲಮ್ಮ ಒಳ್ಳೆಯ ವ್ಯಕ್ತಿಯಾಗಿದ್ದಳು. ಯೋಗಿ ವೇಮನ ಅತ್ತಿಗೆಯಾಗಿದ್ದಳು ತನ್ನ ಭಕ್ತಿಯಿಂದ ಜೀವನ ನಡೆಸುತ್ತಿದ್ದಳು ರೆಡ್ಡಿಸಮಾಜದ ಒಳ್ಳೆಯ ಸಮಾಜವನ್ನು ಬೆಳೆಸಿದರು.

ಸಮಾಜದಲ್ಲಿ ಒಗ್ಗಟ್ಟಾಗಿ ರಾಜಕೀಯ ಏನೇ ಸೌಲಭ್ಯ ಪ್ರಯತ್ನಮಾಡಲಾಗುವುದು ಎಂದರು. ಹೇಮರಡ್ಡಿ ಎಲ್ಲ ಜನಾಂಗಸಿಮಿತರಾಗಿದ್ದರುನೀವು ಕೂಡ ಎಲ್ಲ ಜನಾಂಗದವರಿಗೆ ಸಹಾಯ ಮಾಡಬೇಕೆಂದು ಅವರು ಹೇಳಿದರು.

ದಕ್ಷಿಣ ಮತಕ್ಷೇತ್ರಶಾಸಕರಾದ ಅಲ್ಲಮ ಪ್ರಭು ಪಾಟೀಲ ಅವರು ಮಾತನಾಡಿ, ಇಂತಹ ಜಯಂತಿ ಬಹಳಷ್ಟು ಇತಿಹಾಸ ಪರಂಪರೆಯಲೂ ಬಂದಿದೆ 12ನೇ ಶತಮಾನದಲ್ಲಿ ಬಸವಣ್ಣ ಕಾಲದಲ್ಲಿ ಜಯಂತಿ ನೆರವು ಆಗಬೇಕು ಸಮಾಜಕ್ಕೆಧರ್ಮದ ಮುಂದಿನ ಪೀಳಿಗೆಗೊತ್ತಾಗಲಿ ಇತಿಹಾಸ ಹೊಂದಿದ್ದವನು ಇತಿಹಾಸ ಸೃಷ್ಟಿಮಾಡುತ್ತಾನೆ ಎಂದರು.

ದಾರ್ಶನಿಕ , ತತ್ವಜ್ಞಾನಿ ಮಹಾಯೋಗಿ ವೇಮನರನ್ನು ತಿದ್ದು ಮೂಲಕ ಸಮಾಜಕ್ಕೆ ವೇಮನರಂತಹತತ್ವಜ್ಞಾನಿಯನ್ನು ನೀಡಿದಂತಹ ಮಹಾನುಭಾವೆ ಶಿವಶರಣೆಹೇಮರಡ್ಡಿಮಲ್ಲಮ್ಮ ಅವರ ತತ್ವ ಆದರ್ಶಗಳನ್ನು ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು.

ಇಂದಿನಯುವಪೀಳಿಗೆಯನ್ನು ಗುರುತಿಸಲು ಇಂತಹ ಜಯಂತಿಗಳನ್ನು ಅಚರಣೆ ಮಾಡುತ್ತಿದ್ದೇವೆ ಅವರ ಆದರ್ಶ ತತ್ವಗಳನ್ನುನಾವುಕಲಿತುಕೊಂಡಾಗ ನಮ್ಮ ಸಮಾಜ ಸುಧಾರಣೆ-ಯಾಗುತ್ತದೆ ಎಂದರು.

ವಿಧಾನಪರಿಷತ್ ಸದಸ್ಯರಾದ ಶಶೀಲ್ ಜಿ ನಮೋಶಿ ಮಾತನಾಡಿ, ಮಲ್ಲಮ್ಮನವರ ಆದರ್ಶ ತತ್ವಗಳನ್ನುನಾವೆಲ್ಲರೂ ಪಾಲಿಸಬೇಕು ಮಲ್ಲಮ್ಮನವರು ಆಡಿದ ಮಾತುಗಳನ್ನು ಬಹಳಷ್ಟು ವಿಶೇಷವಾಗಿದೆ ನಾವು ಯಾವಾಗಲೂ ದಾನ ಮಾಡುವ ಪರಂಪರೆ ಬೆಳೆಸಿಕೊಳ್ಳಬೇಕು ಎಂದು ಅವರು ಹೇಳಿದರು

ಹೇಮರಡ್ಡಿ ಮಲ್ಲಮ್ಮ ಆಚರಣೆಯ ಸಮಿತಿಯ ಅಧ್ಯಕ್ಷ ಡಾ. ಶರಣಬಸಪ್ಪ ಕಾಮರೆಡ್ಡಿಅವರು ಮಾತನಾಡಿ, ಶ್ರೀಶೈಲಮಲ್ಲಿಕಾರ್ಜುನದರ್ಶನ ಪಡೆದು ತನ್ನ ಸಮಾಜದ ಕಳಕಳಿಯಿಂದ ಜೀವನ ಸಾಗಿಸಿದ್ದಳು ಈವೊಂದು ವೀರಶೈವ ಸಮಾಜ ಎಲ್ಲ ಮಹಾತ್ಮ ಜೀವನ ಅರಿತು ನಡೆದಂತಹ ಹಾದಿ ನಡೆದಂತಹ ನುಡಿ ನಾವು ಪಾಲನೆ ಮಾಡಬೇಕೆಂದು ಅವರು ಹೇಳಿದರು.

ಅಖಿಲ ಕರ್ನಾಟಕ ಹೇಮರಡ್ಡಿ ಮಲ್ಲಮ್ಮ ಮಹಿಳಾ ಅಭಿವೃದ್ಧಿ ಸಂಸ್ಥೆಯ ರಾಜ್ಯ ಅಧ್ಯಕ್ಷೆ ಡಾ. ಶ್ರೀಮತಿ ವಿಶಾಲಾಕ್ಷಿ ವಿ. ಕರಡ್ಡಿ ಹೆಮ್ಮರಡ್ಡಿ ಮಲ್ಲಮ ಜೀವನ ಚರಿತ್ರೆ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಕು. ಶರಣರೆಡ್ಡಿ ಅಂತರಾಷ್ಟ್ರೀಯ ಮಟ್ಟದಲ್ಲಿಕಂಚಿನಪದಕಗಳಿಸಿದ ಹಾಗೂ

ಶಹಾಪೂರಲೋಕೋಪಯೋಗಿ ಇಲಾಖೆಸಹಾಯಕಅಭಿಯಂತರರಾದ ವಿ.ಎಸ್. ಸೂಗರೆಡ್ಡಿ ಸರಕಾರಿ ಸೇವೆಯಲ್ಲಿ ಸರ್ವತೋಮ ಸೇವಾ ಪ್ರಶಸ್ತಿ ಪಡೆದವರಿಗೆ ಸನ್ಮಾನಿಸಲಾಯಿತು.

ವೇದಿಕೆ ಮೇಲೆ

ಅಪರಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ,

ಕನ್ನಡಮತ್ತುಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ಸಮಾಜ ಹಿರಿಯ ಭಾಗನ ಗೌಡ, ಚನ್ನಾರೆಡ್ಡಿ, ಶಾಂತರೆಡ್ಡಿ ಸೇರಿದಂತೆ ಸಮಾಜ ಮುಖಂಡರು ಮಹಿಳೆಯ ಸಮಾಜದ ಮುಖಂಡರು ಭಾಗವಹಿಸಿದ್ದರು.

ಅಂಬಲಗಾ ಸರಕಾರಿ ಪ್ರೌಢಶಾಲೆಯಮುಖೋಪಾಧ್ಯಾಯ ಜಿ.ಜಿ.ವಣಿಕ್ಯಾಳ ಕಾರ್ಯಕ್ರಮ ನಿರೂಪಿಸಿದರು.

ಶೇಖರ ನಾಲವಾರ ಸ್ವಾಗತಿಸಿದರು.

ಸಮಾಜಹಿರಿಯಮುಖಂಡರಾದ ಮಹೇಶರೆಡ್ಡಿ ವಂದಿಸಿದ್ದರು.

# ಜೆಸ್ಕಾಂ ಇಲಾಖೆ ನಿರ್ಲಕ್ಷ್ಯಕ್ಕೆ 8 ಜಾನುವಾರುಗಳ ಸಾವು



ಮಲ್ಲಮ್ಮ ನುಡಿ ವಾರ್ತೆ

ಸುರಪುರ: ತಾಲೂಕಿನ ದೇವರಗೋನಾಲ ಗ್ರಾಮದ ಬಳಿಯಲ್ಲಿನ ಭತ್ತದ ಗದ್ದೆಯಲ್ಲಿ ಕೊಯ್ಲು ಮೇಯುತಿದ್ದ 8 ಜಾನುವಾರುಗಳ ಮೇಲೆ ವಿದ್ಯುತ್ ತಂತಿ ಹರಿದು ಬಿದ್ದು ಜಾನುವಾರುಗಳು ಸ್ಥಳದಲ್ಲಿ ಸಾವನ್ನಪ್ಪಿವೆ. ಅನೇಕ ವರ್ಷಗಳ ಹಿಂದೆ ಹಾಕಿರುವ ವಿದ್ಯುತ್ ತಂತಿಗಳು ಹಳೆಯದಾಗಿದ್ದರಿಂದ ಈ ರೀತಿಯ ಅವಘಡ ಸಂಭವಿಸುತ್ತಿವೆ. ಜೆಸ್ಕಾಂ ಇಲಾಖೆ ವಿದ್ಯುತ್ ತಂತಿ ಬದಲಾಯಿಸದೆ ನಿರ್ಲಕ್ಷ ತೆ-ೋರಿದ್ದರಿಂದ ಜಾನುವಾರುಗಳು ಸಾವನ್ನಪ್ಪಿದ್ದು ರೈತರಿಗೆ ದೊಡ್ಡ ಮಟ್ಟದಲ್ಲಿ ನಷ್ಟ ಉಂಟಾಗಿದೆ. ಸಾಲ ಮಾಡಿ ಜಾನುವಾರುಗಳ ಖರೀದಿಸಿದ ರೈತರಿಗೆ ಕಣ್ಣೀರು ಸುರಿಸುವಂತಾಗಿದ್ದು, ಜಾನುವಾರುಗಳ ಸಾವಿಗೆ ಜೆಸ್ಕಾಂ ಇಲಾಖೆ ಹಾಗೂ ಸರ್ಕಾರ ಪರಿಹಾರವನ್ನು ನೀಡಿ ರೈತರ ಕಣ್ಣೀರು ಒರೆಸಬೇಕಿದೆ..

ಸುದ್ದಿ ತಿಳಿದ ತಕ್ಷಣ ಊರಿನ ಪ್ರಮುಖರಾದ ವೆಂಕಟೇಶ್ ಬೇಟೆಗಾರ. ದೊಡ್ಡ ದೇಸಾಯಿ ದೇವರಗೋನಾಲ .ಘಟನಾ ಸ್ಥಳಕ್ಕೆ ಹೋಗಿ. ಜಾನುವಾರಗಳ ಮಾಲೀಕರಿಗೆ ಸಮಾಧಾನಪಡಿಸಿ, ನಂತರ ಜೆಸ್ಕಾಂ ಅಧಿಕಾರಿಗಳಿಗೆ. ಪೊಲೀಸ್ ಇಲಾಖೆಗೆ. ವೆಟರ್ನರಿ ಅಧಿಕಾರಿಗಳಿಗೆ. ಫೋನ್ ಮುಖಾಂತರ ಕರೆ ಮಾಡಿ . ತಕ್ಷಣ ಸ್ಥಳಕ್ಕೆ ಅವರನ್ನು ಕರೆಯಿಸಿ ಪರಿಶೀಲನೆ ಮಾಡಿ. ಸಂಬಂಧಪಟ್ಟ ಇಲಾಖೆ ತಕ್ಷಣ ಪರಿಹಾರ ಒದಗಿಸಬೇಕೆಂದು. ಒತ್ತಾಯಿಸಿದರು. ಈ ಸಂದರ್ಭದಲ್ಲಿ ಊರಿನ ಪ್ರಮುಖರಾದ .ನಾಗಪ್ಪ ಚಿಕ್ಕನಹಳ್ಳಿ .ಮಾರ್ಥರ್ಂಡಪ್ಪ ದೊರೆ.ಅಮಲಯ್ಯ ಬೇಟೆಗಾರ, ಮಲ್ಲಯ್ಯ ದಿವಲಗುಡ್ ನಾನೇಗೌಡ ಕಡಕಲ್. ವಿರುಪಾಕ್ಷಿ.ಬಸವರಾಜ್. ಬಲ ಭೀಮ .ಹನುಮಂತ. ಭೀಮಣ್ಣ ,ಮುಂತಾದವರು ಇದ್ದರು.



ಬಸವಕಲ್ಯಾಣ :- ನಗರದ ಸಿಎಂಎಂ ಶಿಕ್ಷಣ ಮಹಾವಿದ್ಯಾಲಯದಲ್ಲಿ ಮಹಾ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತೋತ್ಸವ ಆಚರಿಸಲಾಯಿತು. ಈ ಸಂದರ್ಭದಲ್ಲಿ ಶಿಕ್ಷಣ ಮಹಾವಿದ್ಯಾಲಯದ ಬಿ. ಇಡಿ. ಕಾಲೇಜಿನ ಪ್ರಾಂಶುಪಾಲರಾದ ರಾಣಿಮಾ ಡಿ. ಬೆಂಡೆ. ಪದವಿ ಪ್ರಾಂಶುಪಾಲರಾದ ಪ್ರಕಾಶ ಚಿಂಚನಸೂರ, ಎಂ ಎಸ್ ಡಬ್ಲ್ಯೂ ಪ್ರಾಂಶುಪಾಲರಾದ ಕುಮಾರಿ ರೇಖಾದೇವಿ ದೊಡ್ಮನಿ, ಪಿಯುಸಿ ಪ್ರಾಚಾರ್ಯರಾದ ವಿನೋದ ಪಾಟೀಲ, ಉಪನ್ಯಾಸಕರಾದ ಲೋಕೇಶ ಮೋಳಕೇರೆ, ಅಂಜುಮ್ ಬಾನು, ಶ್ರೀನಿವಾಸ ಫುಲೆ, ಸುನಂದಾ ವಾಘಮಾರೆ ಹಾಗೂ ಬಿ.ಇಡಿ ಪ್ರಥಮ ಮತ್ತು ತ್ರತೀಯ ಸೆಮಿಸ್ಟರನ ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದರು. (ಮಲ್ಲಮ್ಮ ನುಡಿ ಚಿತ್ರ)

# ಮಲ್ಲಮ್ಮಳ ಬದುಕಿನ ಆದರ್ಶಗಳ ಅನುಸರಣೆ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಬಸವಾದಿ ಶಿವಶರಣರ ಮಾರ್ಗದಲ್ಲಿ ನಡೆದು ತನ್ನ ಅನನ್ಯವಾದ ಭಕ್ತಿಯಿಂದ ಶ್ರೀಶೈಲ ಮಲ್ಲಿಕಾರ್ಜುನನ ಕೃಪೆಗೆ ಪಾತ್ರಳಾಗಿ, ತಾನು ಸಂಕಷ್ಟಗಳನ್ನು ಸಹಿಸಿ ನೊಂದವರ ಬಾಳಿಗೆ ಬೆಳಕನ್ನು ನೀಡಿದ ರೆಡ್ಡಿ ಕುಲದೇವತೆ ಶ್ರೀ ಹೇಮರೆಡ್ಡಿ ಮಲ್ಲಮ್ಮಳ ಬದುಕಿನ ಆದರ್ಶಗಳನ್ನು ನಾವು ಅನುದಿನವೂ ಅನುಸರಿಸುವ ಅಗತ್ಯ ಇದೆ ಎಂದು ಶಿಕ್ಷಕ ಅಪ್ಪಸಾಹೇಬಗೌಡ ಮೂಲಿಮನಿ ಹೇಳಿದರು. ಪಟ್ಟಣದ ಶ್ರೀ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ಶನಿವಾರ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮಳ 603ನೇ ಜಯಂತ್ಯೋತ್ಸವದ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಾರ್ಯಕ್ರಮದ ಸಾನಿಧ್ಯವಹಿಸಿದ ಪುರಾಣಿಕ ಬಸಯ್ಯ ಶಾಸ್ತ್ರಿಗಳು ಮಾತನಾಡಿ ಮಹಾನ್ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಅಂಗವಾಗಿ 10 ದಿನಗಳ ಕಾಲ ನೀವು ಅವಳ ಇಡೀ ಬದುಕಿನ ಆದರ್ಶ ವೃತ್ತಾಂತಗಳನ್ನು ಆಲಿಸಿದ್ದೀರಿ ಅವುಗಳನ್ನು ಜೀವನಕ್ಕೆ ಅಳವಡಿಸಿಕೊಳ್ಳುವ ಪ್ರಾಮಾಣಿಕ ಪ್ರಯತ್ನ ಮಾಡಿ ಎಂದು ಸಲಹೆ ನೀಡಿದರು. ವೇದಿಕೆ ಕಾರ್ಯಕ್ರಮ ಮುನ್ನ ಹೇಮರೆಡ್ಡಿ ಮಲ್ಲಮ್ಮ ದೇವಸ್ಥಾನದಿಂದ ಶ್ರೀ ಖಾಸ್ಗತೇಶ್ವರ ಬಡಾವಣೆಯ ಪ್ರಮುಖ ಸ್ಥಳಗಳಲ್ಲಿ ಪಲ್ಲಕ್ಕಿಯ ಅದ್ದೂರಿ ಮೆರವಣಿಗೆ ಸಕಲ ವಾದ್ಯ ಮೇಳ ಹಾಗೂ ಕುಂಭ ದೊಂದಿಗೆ ಜರುಗಿತು. ಇದೇ ಸಂದರ್ಭದಲ್ಲಿ ಸಮಿತಿ ವತಿಯಿಂದ ಶಾಸಕ ಅಪ್ಪಾಜಿ ನಾಡಗೌಡರ ಧರ್ಮಪತ್ನಿ ಸುವರ್ಣ ನಾಡಗೌಡ, ತಹಸಿಲ್ದಾರ್ ಡಾ.ವಿನಯಾ ಹೂಗಾರ ಹಾಗೂ ನೀಲಮ್ಮ ಬಿ.ಪಾಟೀಲ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಶರಣೆ ಶಾಂತಮ್ಮ ಕೋಳೂರ, ಪುರಾಣಿಕ ಸಿಎನ್ ಹಿರೇಮಠ, ಎಚ್.ಎಸ್.ಪಾಟೀಲ, ಪ್ರಭುಗೌಡ ಮದರಕಲ್ಲ, ಆರ್. ಎಸ್. ಪಾಟೀಲ ಕೂಚಬಾಳ, ಬಿ. ಎನ್.ಹಿಪ್ಪರಗಿ, ಸಿದ್ದನಗೌಡ

# ಹೇಮರೆಡ್ಡಿ ಮಲ್ಲಮ್ಮ ಮನುಕುಲಕ್ಕೆ ಮಾದರಿ: ಅನೀಲಕುಮಾರ್ ಸಿಂಥೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಭಕ್ತಿ ಹಾಗೂ ಬದುಕಿನ ಆಧ್ಯಾತ್ಮಿಕ ಚಿಂತನಾ ಚೆಲುಮೆಯಾಗಿದ್ದರು. ಭಗವಂತನ ಸಾಕ್ಷಾತ್ಕಾರ ಪಡೆಯಲು ಭಕ್ತಿಯ ಮಾರ್ಗ ತೋರಿಸಿದ್ದಾರೆ. ಅವರ ಆದರ್ಶಗಳು ಮನುಷ್ಯನ ಬದುಕಿಗೆ ದಾರಿ ದೀಪವಾಗಿವೆ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕಾಧ್ಯಕ್ಷ ಅನೀಲಕುಮಾರ ಎಂ. ಸಿಂಥೆ ತಿಳಿಸಿದರು. ಪಟ್ಟಣದಲ್ಲಿ ರೆಡ್ಡಿ ಸಮಾಜದ ವತಿಯಿಂದ ಆಯೋಜಿಸಿದ್ದ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿಯಲ್ಲಿ ಮಾತನಾಡಿ, ಶರಣರ ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ, ಬದುಕು ಹಸನಾಗುತ್ತದೆ. ಮಲ್ಲಮ್ಮನವರ ಜೀವನ ಚರಿತ್ರೆ ಮನುಕುಲಕ್ಕೆ ಮಾದರಿಯಾಗಿದೆ. ಅವರ ಸರಳ ಜೀವನ ಸುಖಿ ಜೀವನಕ್ಕೆ ನಾಂದಿ ಹಾಡಿದ್ದು, ಭರತ ಭೂಮಿ ಕಂಡ ಶ್ರೇಷ್ಠ ಮಹಿಳೆ ಎಂದು ಗುಣಗಾನ ಮಾಡಿದರು. ಮಲ್ಲಮ್ಮನವರು ತಾಳ್ಮೆಯ ಪ್ರತಿರೂಪವಾಗಿದ್ದಾರೆ. ಶಾಂತ ರೀತಿಯಿಂದ ಜೀವನ ನಡೆಸುವ ಮೂಲಕ ಎಲ್ಲ ಮಹಿಳೆಯರಿಗೆ ಮಾರ್ಗದರ್ಶಿಯಾಗಿದ್ದಾರೆ. ಅವರು ಹಾಕಿಕೊಟ್ಟಿರುವ ಮಾರ್ಗದಲ್ಲಿ ನಾವೆಲ್ಲರೂ ಸಾಗುವುದು ಅಗತ್ಯವಿದೆ, ಚಿಟಗುಪ್ಪ ಪಟ್ಟಣದಲ್ಲಿ ಹೇಮರೆಡ್ಡಿ ಮಲ್ಲಮ್ಮನವರ ದೇವಸ್ಥಾನ ನಿರ್ಮಾಣಕ್ಕೆ ಶಾಸಕರ, ವಿಧಾನ ಪರಿಷತ್ ಸದಸ್ಯರಿಗೆ, ಸಂಸದರಿಗೆ ದೇವಸ್ಥಾನ ನಿರ್ಮಾಣಕ್ಕೆ ಅನುದಾನ ನೀಡುವಂತೆ ಮನವಿ ಮಾಡೋಣ ಸದಾ ರೆಡ್ಡಿ ಸಮುದಾಯದ ಜೊತೆಯಲ್ಲಿರುತ್ತೇನೆ ಎಂದು ಹೇಳಿದರು. ಭೀಮಶೆಟ್ಟಿ ವಡನಕೇರಾ ಮಾತನಾಡಿ, ನಾಡಿಗೆ ಶರಣರು, ದಾಸರು, ಸಂತರು ಸೇರಿ ಮಹಾನ್ ವ್ಯಕ್ತಿಗಳು ತತ್ವಾದರ್ಶಗಳನ್ನು ನೀಡಿದ್ದಾರೆ. ಅಂಥವರನ್ನು ಒಂದು ಸಮುದಾಯಕ್ಕೆ ಸೀಮಿತ ಮಾಡದೆ ತತ್ವಾದರ್ಶಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕಿದೆ. ಶರಣರು ಹಾಕಿಕೊಟ್ಟ ಪಥದಲ್ಲಿ ಸಾಗಿದರೆ ಶಾಂತಿ, ಸಮೃದ್ಧಿ ಸಮಾಜ ನಿರ್ಮಾಣ ಸಾಧ್ಯ. ಮಲ್ಲಮ್ಮ ಬದುಕಿನಲ್ಲಿ ಲೌಕಿಕ ಜೀವನದ ಜತೆಗೆ ಆಧ್ಯಾತ್ಮಿಕ ಸಾಧನೆಯಿಂದ ಶ್ರೀಶೈಲ ಮಲ್ಲಿಕಾಜುರ್ನನ ಕೃಪೆಗೆ ಪಾತ್ರರಾಗಿ ಎಲ್ಲರ ಮನಸ್ಸಿನಲ್ಲಿ ನೆಲೆಸಿದ್ದಾಳೆ. ಸ್ತ್ರೀಯರು ತಾಳ್ಮೆಯಿಂದ ಇದ್ದರೆ ಸಾಕಷ್ಟು ಸಾಧನೆ ಮಾಡಬಹದು ಎನ್ನುವುದಕ್ಕೆ ಹೇಮರೆಡ್ಡಿ ಮಲ್ಲಮ್ಮ ಸಾಕ್ಷಿ ಎಂದು ಹೇಳಿದರು. ಈ ಸಂದರ್ಭದಲ್ಲಿ ರೆಡ್ಡಿ ಸಮಾಜದ ತಾಲೂಕಾಧ್ಯಕ್ಷ ಬಿ.ಎನ್. ರೆಡ್ಡಿ, ಜಯಂತಿ ಉತ್ಸವ ಸಮಿತಿ ಅಧ್ಯಕ್ಷ ಕಿರಣ ರೆಡ್ಡಿ, ಬಾಬುರೆಡ್ಡಿ ಮುಸ್ತರಿ, ಕರೇಪ್ಪ ಗಡಮಿ, ಕಾಶೆಪ್ಪ ಒಂಟಿಮಾರಿ, ಉಲ್ಲಾಸ್ ಕಾಳಗಿ, ಪತ್ರಕರ್ತ ರಾಜಕುಮಾರ ಆರ್. ಹಡಪದ, ಬಂಡೆಪ್ಪ ಭಂಡಾರಿ, ಶಿವಕುಮಾರ್ ಪಡಗಿ, ರಂಗಾರೆಡ್ಡಿ ಗುಂಡುರೆಡ್ಡಿ, ಪ್ರಜ್ವಲ್ ರೆಡ್ಡಿ, ಮಹಾಂತೇಶ್ ರೆಡ್ಡಿ, ಸಂತೋಷ್ ರೆಡ್ಡಿ, ಸಿದ್ಧಲಿಂಗ ರೆಡ್ಡಿ, ಹಣಮಂತ ರೆಡ್ಡಿ ಶಾಂತಕುಮಾರ್ ಚಾಮರೆಡ್ಡಿ, ಈಶ್ವರ್ ರೆಡ್ಡಿ, ರಾಮರೆಡ್ಡಿ, ರಾಜರೆಡ್ಡಿ ಮುಡಬಿ, ಅಭಿಷೇಕ ಚಿಂಚೋಳಿ, ಶರಣು ಗಡಮಿ, ಗುಂಡು ಗಡಮಿ, ಶ್ರೀಮಂತ ರೆಡ್ಡಿ, ಸೇರಿದಂತೆ ಹಿರಿಯರು, ಮಹಿಳೆಯರು, ಯುವಕರು, ಮಕ್ಕಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ನಿವೃತ್ತ ಶಿಕ್ಷಕ ಮಹಾರುದ್ರಪ್ಪ ಅಣದೂರೆ ನಿರೋಪಿಸಿ ವಂದಿಸಿದರು. ನಂತರ ಸಾಯಂಕಾಲ ಹೇಮರೆಡ್ಡಿ ಮಲ್ಲಮ್ಮನವರ ಭಾವಚಿತ್ರ ಭವ್ಯ ಮೆರವಣಿಗೆ ಕುಂಬಿವಾಡ್ ಓಣಿಯ ಹನುಮಾನ್ ದೇವಸ್ಥಾನದಿಂದ ಆರಂಭಗೊಂಡು ಮುಖ್ಯ ರಸ್ತೆಗಳ ಮೂಲಕ ಅದ್ದೂರಿಯಾಗಿ ಮೆರವಣಿಗೆ ಜರುಗಿತ್ತು. ಮೆರವಣಿಗೆಯಲ್ಲಿ ಯುವಕರು, ಮಕ್ಕಳು ಹೆಜ್ಜೆ ಹಾಕುತ್ತಾ ಸಂಭ್ರಮಿಸಿದರು.



ಚಿಟಗುಪ್ಪ ಬೀದರ್ ದಕ್ಷಿಣ ಕ್ಷೇತ್ರದ ಬಗದ್ದಲ್ ಗ್ರಾಮದ ಪ್ರಸಿದ್ಧವಾದ ಏ-ಶರೀಫ ಕಾ ಜಲಸಾ ದರ್ಗಾದ ಜಾತ್ರಾ ಮಹೋತ್ಸವ ಅಂಗವಾಗಿ ದರ್ಗಾದ ಸಜ್ಜಾದೆ ನಶೀನ್ ಆಸ್ಥಾನ ಖಾದ್ರಿಯ ಬಗದಲ್ ಷರೀಫ್ ಡಾ. ಮಹಮ್ಮದ್ ಇದ್ರಿಸ್ ಅಹಮ್ಮದ್ ಖಾದ್ರಿ ಬಗ್ದಲಿ ಅವರಿಗೆ ಪಟ್ಟಣದ ಆಜಮ್ ಸ್ವೀಟ್ ಹೌಸ್ ಮಾಲೀಕ ಹಾಗೂ ಸಾಮಾಜಿಕ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರು ದೇವರ ಭಾವಚಿತ್ರ ನೀಡಿ ಸನ್ಮಾನಿಸಿ ಆಶೀರ್ವಾದ ಪಡೆದರು.

(ಮಲ್ಲಮ್ಮ ನುಡಿ ಚಿತ್ರ)

# ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಆದರ್ಶ ಮಾತೆ:- ಅಶೋಕ ಸ್ವಾಮಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಮಹಾಸಾಧ್ವಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಕಷ್ಟ-ಕಾರ್ಪಣ್ಯಗಳ ನಡುವೆಯೂ ಆದರ್ಶ ಬದುಕು ಸಾಗಿಸಿ ಸಮಾಜಕ್ಕೆ ದಾರಿ ದೀಪವಾದವರು' ಎಂದು ಪಿಕೆಪಿಎಸ್ ಮಾಜಿ ಅಧ್ಯಕ್ಷ ಅಶೋಕ ಸ್ವಾಮಿ ಹೇಳಿದರು. ಪಟ್ಟಣದ 23ನೇ ವಾರ್ಡಿನ ಫಾತ್ಮಪುರ್ ಹೇಮರೆಡ್ಡಿ ಮಲ್ಲಮ್ಮನವರ ವೃತ್ತದಲ್ಲಿ ಆಯೋಜಿಸಿದ್ದ ಹೇಮರೆಡ್ಡಿ ಮಲ್ಲಮ್ಮನವರ 603ನೇ ಜಯಂತಿ ನಿಮಿತ್ಯ ಹೇಮರೆಡ್ಡಿ ಮಲ್ಲಮ್ಮನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಕಷ್ಟಗಳನ್ನು ನುಂಗಿ ಗಂಡನ ಮನೆ ಬೆಳೆಸಿದರು. ಶ್ರೀಶೈಲ ಚೆನ್ನಮಲ್ಲಿಕಾರ್ಜುನನ್ನು ಅರಾಧಿಸಿ ಅಮರತ್ವ ಸಾಧಿಸಿದವರು. ರೆಡ್ಡಿ ಸಮುದಾಯದ ಬದುಕು ಸದಾ ಬಂಗಾರವಾಗಲಿ ಎಂದು ಪ್ರಾರ್ಥಿಸಿದ ಮಲ್ಲಮ್ಮ ತಾಯಿ ಸಮಾಜಕ್ಕೆ ಮಾದರಿ ಎಂದರು. ಈ ಸಂದರ್ಭದಲ್ಲಿ ಪಿಕೆಪಿಎಸ್ ನಿರ್ದೇಶಕ ಮಹಾರುದ್ರಯ್ಯಾ ಸ್ವಾಮಿ, ಸಂಜೀವರೆಡ್ಡಿ ಮುಡಬಿ, ಸಂಗಯ್ಯಾ ಸ್ವಾಮಿ, ಮಾಣಿಕರೆಡ್ಡಿ ರಾಂಪುರ, ರಾಜಕುಮಾರ್ ಸ್ವಾಮಿ, ಶಿವರೆಡ್ಡಿ ಉಸ್ತಾಲಿ, ಮಲ್ಲಿಕಾರ್ಜುನ ಮಟ್ಟಿ, ಮಲ್ಲಪ್ಪ ರಾಂಪುರ, ರಾಜರೆಡ್ಡಿ ಮುಡಬಿ, ಇರಾ-ರೆಡ್ಡಿ ಮುಡಬಿ, ವಿಜಯಕುಮಾರ ಸ್ವಾಮಿ, ಶ್ರೀನಿವಾಸರೆಡ್ಡಿ ಧರಿ, ಶಿವಪುತ್ರ ರಾಂಪುರ, ರವೀಂದ್ರರೆಡ್ಡಿ ರಾಂಪುರ, ಸಂಗ್ರಾಮರೆಡ್ಡಿ ರಾಂಪುರ, ಶಿವರಾಜ ಸ್ವಾಮಿ, ನಾಗೇಶ್ ಮುಡಬಿ, ನರೇಂದ್ರರೆಡ್ಡಿ ರಾಂಪುರ, ರಾಜಕುಮಾರ್ ಆರ್. ಹಡಪದ, ಅನೀಲ ರೆಡ್ಡಿ ಮುಡಬಿ, ವೆಂಕಪ್ಪ ಮುಡಬಿ, ಬಸವರಾಜ್ ರಾಂಪುರ, ಅನೀಲರೆಡ್ಡಿ ರಾಂಪುರ, ಧರ್ಮರೆಡ್ಡಿ ಚಿಂಚೋಳಿ, ಹಣಮಂತ ರಾಂಪುರ, ಪ್ರಶಾಂತರೆಡ್ಡಿ ಉಸ್ತಾಲಿ, ಈರಪ್ಪ ರಾಂಪುರ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ:9008990515

# ಸದೃಢ ಸಮಾಜಕ್ಕೆ ಯುವಕರ ಪಾತ್ರ ಪ್ರಮುಖ್ಯ- ಸಿಪಿಐ ಶ್ರೀನಿವಾಸ ಅಲ್ಲಾಪೂರೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಪಟ್ಟಣದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಸಿಪಿಐ ಶ್ರೀನಿವಾಸ ಅಲ್ಲಾಪುರೆ ಮಾತನಾಡಿ, ಸದೃಢ ಭಾರತ ನಿರ್ಮಾಣಕ್ಕೆ ಯುವ ಜನತೆ ಜಾಗೃತರಾಗಬೇಕು ಎನ್ಎಸ್ಎಸ್ ಶಿಬಿರವು ಶಿಸ್ತು, ಸಮಯ ಪಾಲನೆ ಹಾಗೂ ವಿದ್ಯಾರ್ಥಿ ಜೀವನದ ದಿಸೆಯನ್ನು ಬದಲಾಯಿಸುವ ಶಕ್ತಿ ರಾಷ್ಟ್ರೀಯ ಸೇವಾ ಯೋಜನಾ ಶಿಬಿರಕ್ಕಿದೆ ಎಂದು ಶಿಬಿರಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲ ಡಾ. ಜಯಕುಮಾರ ಎ.ಸಿಂಥೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಸತತ ಅಭ್ಯಾಸವನ್ನು ಮಾಡಿ ಉನ್ನತ ಸ್ಥಾನ ಪಡೆದ-ರೆ ಸಾಕು ಗುರುಗಳಿಗೆ ಅದಕ್ಕಿಂತ ಬೇರೆ ಹೆಮ್ಮೆ ಏನು ಬೇಕಾಗಿಲ್ಲ ಎಂದು ಹೇಳಿದರು. ರಂಗೋಲಿ, ನಾಟಕ, ಕೋಲಾಟ, ಹೀಗೆ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ವಿಶಾಲ ಬೋರಾಳೆ, ಅಪರ್ಣಾಶೆಟ್ಟಿ, ನರಸಪ್ಪ ನರನಾಳ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಗೂ ಎನ್ಎಸ್ಎಸ್ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

# ಬದ್ಧತೆ, ಆಸಕ್ತಿಯಿಂದ ಕೆಲಸ ಮಾಡುತ್ತಿರುವುದು ಶ್ಲಾಘನೀಯ



ಮಲ್ಲಮ್ಮ ನುಡಿ ವಾರ್ತೆ

ಮೈಸೂರು: ಮೇ.10:- ಸಹಕಾರ ಸಂಸ್ಥೆ ಬೆಳವಣಿಗೆಗೆ ಆಡಳಿತ ಮಂಡಳಿ ಹಾಗೂ ಅಧಿಕಾರಿಗಳಲ್ಲಿ ಬದ್ಧತೆ, ಆಸಕ್ತಿಯಿಂದ ಸಹಕಾರಿ ಸಂಸ್ಥೆ ಕೆಲಸ ಮಾಡುತ್ತಿರುವುದು ನಿಜಕ್ಕೂ ಶ್ಲಾಘನೀಯ ಎಂದು ರಾಮಕೃಷ್ಣ ಆಶ್ರಮದ ಅಧ್ಯಕ್ಷ ಮುಕ್ತಿದಾನಂದಜೀ ಹೇಳಿದರು. ನಗರದ ಕೆಆರ್ಎಸ್ ರಸ್ತೆಯಲ್ಲಿರುವ ರಾಮಕೃಷ್ಣ ನೈತಿಕ ಮತ್ತು ಆಧ್ಯಾತ್ಮಿಕ ಶಿಕ್ಷಣ ಸಂಸ್ಥೆ ಆವರಣದಲ್ಲಿ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಬೆಂಗಳೂರು, ಸಂಯುಕ್ತ ಸಹಕಾರಿಯ ಹಿರಿಯ ಅಧಿಕಾರಿಗಳು, ಕಿರಿಯ ಅಧಿಕಾರಿಗಳು ಹಾಗೂ ಜಿಲ್ಲಾ ಸಂಯೋಜಕರುಗಳಿಗಾಗಿ ಅಯೋಜಿಸಿದ್ದ ಕೌಶಲ್ಯ ಅಭಿವೃದ್ಧಿ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾವೆಲ್ಲಾ ಮನುಷ್ಯರಾಗಿದ್ದು ಪರಸ್ಪರ ಸೌಹಾರ್ದದಿಂದ ಸಮಾಜದಲ್ಲಿ ಬೆಳೆಯಬೇಕು. ಪರಸ್ಪರ ಸಹಕಾರ ಎಂಬುದು ನಮ್ಮ ಕುಟುಂಬದ ಜೀವನ ಹಾಗೂ ವೃತ್ತಿಪರ ಜೀವನದಲ್ಲಿ ಅತ್ಯಂತ ಮುಖ್ಯವಾಗಿ ಅವಶ್ಯಕತೆ ಇದೆ ಎಂದರು.

ಎಲ್ಲ ರೀತಿಯ ವಿಕೋಪ, ಋಣಾತ್ಮಕ ನಕಾರಾತ್ಮಕ ಭಾವನೆಗೆ ಸೌಹಾರ್ದದ ತರಬೇತಿ ಮುಖ್ಯ. ಸಹಕಾರಿ ಸಂಸ್ಥೆಗಳಿಗೆ ಸಂಬಂಧಿಸಿದಂತೆ ನಿಯಮಾವಳಿಗಳನ್ನು ಮಾಡಿದ್ದು ಅದರಂತೆ ಕೆಲಸ ನೀಡುತ್ತಿರುವುದು ಸಂತೋಷದ ವಿಷಯ. ಎಲ್ಲ ಸಹಕಾರ ಸಂಘದ ಜತೆಗೆ ಹಾಲು ಉತ್ಪಾದಕರ ಸಂಘದಲ್ಲಿ ಪ್ರತಿಯೊಬ್ಬರಿಗೂ ಉತ್ತಮವಾದ ಹಾಲನ್ನು ನೀಡುವಂತಹ ವ್ಯವಸ್ಥೆ ನಮ್ಮ ಸಹಕಾರಿಯಲ್ಲಿದೆ. ತರಬೇತಿಯಲ್ಲಿರುವಂತಹ ಪ್ರತಿಯೊಬ್ಬರು ನೈಪುಣ್ಯತೆ, ಪ್ರಾಮಾಣಿಕತೆಯಿಂದ ಕೆಲಸ ಮಾಡಬೇಕು. ಪ್ರತಿಯೊಂದು ತರಬೇತಿಯಲ್ಲಿ ವಿವಿಧ ವಿಷಯದ ಬಗ್ಗೆ ನಿಮಗೆ ಅರಿವು ಮೂಡಿಸಲಿದ್ದು ಅದನ್ನು ಆಸಕ್ತಿಯಿಂದ ಗ್ರಹಿಸಿ ಮಾಹಿತಿ ಪಡೆದುಕೊಳ್ಳಬೇಕು ಎಂದು ಹೇಳಿದರು.

ಸಹಕಾರ ಯೂನಿಯನ್ ಅಧ್ಯಕ್ಷ ಎಚ್.ವಿ.ರಾಜೀವ್ ಮಾತನಾಡಿ, ಸಹಕಾರ ಸಂಘದ ಸದಸ್ಯರು, ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ಉತ್ತಮ ಸಂಬಂಧ ಕಾಯ್ದುಕೊಳ್ಳಬೇಕು. ಸಹಕಾರ ಕಾಯ್ದೆ, ಕಾನೂನನ್ನು ಅರಿತುಕೊಳ್ಳಬೇಕು. ಸಂಘದಲ್ಲಿ ಯಾವುದೇ ಸಮಸ್ಯೆ ಎದುರಾದಾಗ ಸಹಕಾರ ಇಲಾಖೆಯ ಗಮನಕ್ಕೆ ತಂದು ಪರಿಹರಿಸಿಕೊಂಡು ಸಂಘವನ್ನು ಸುಗಮವಾಗಿ ಮುನ್ನಡೆಸುವ ಕಡೆಗೆ ಪ್ರಥಮ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಎಲ್ಲರು ಆರೋಗ್ಯ ಹಾಗೂ ಕುಟುಂಬದ ಜೊತೆ ಸೌಹಾರ್ದ ಪಡೆದುಕೊಂಡರೇ ಗುಣಾತ್ಮಕ ಜೀವನ ನಡೆಸಬಹುದು. ಇರುವ ಅವಧಿಯಲ್ಲಿ ಋಣಾತ್ಮಕವಾಗಿ ಎಷ್ಟು ಕೆಲಸ ಮಾಡುತ್ತೇವೆ ಎಂಬುದು ನಾವು ತಿಳಿಯಬೇಕು. ಇವತ್ತಿನ ಆಧುನಿಕ ಪ್ರಪಂಚದಲ್ಲಿ ಮನಸ್ಸಿನ ನೆಮ್ಮದಿ ಇಲ್ಲದಿರುವಂತಹ ಕುಟುಂಬಗಳನ್ನು ನಾವು ನೋಡಿದ್ದೇವೆ. ಹಾಗಾಗಿ ಈ ತರಬೇತಿಯಲ್ಲಿ ಭಾಗವಹಿಸಿ ಆಶ್ರಮದಲ್ಲಿ ಕಲ್ಪಿಸುವಂತಹ ತರಬೇತಿಯಲ್ಲಿ ಅರಿವು ಮಾಡಿಸಿಕೊಳ್ಳಬೇಕಾಗಿದ್ದು ಸಹಕಾರಿ ಚಳವಳಿ ಮೈಸೂರಿನಲ್ಲಿ ನಾವು ಅಂದುಕೊಂಡಿರುವಷ್ಟು ಮುಂದೆ ಇಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಆಧ್ಯಾತ್ಮಿಕ ಕಲ್ಪನೆ ಸೃಜನ ಶೀಲ ನುಡಿ ತಿಳಿಸುವಂತ ಕೆಲಸವನ್ನು ಶ್ರೀ ರಾಮಕೃಷ್ಣ ಆಶ್ರಮ ಮಾಡುತ್ತಿದ್ದು ಅದನ್ನು ಸದುಪಯೋಗ ಮಾಡಿಕೊಳ್ಳಿ ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.

## ಸ್ವಯಂ ಸೇವಕರು ದೇಶಕ್ಕೆ ಕೊಡುಗೆ ನೀಡಲಿ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 10 : ರಾಷ್ಟ್ರೀಯ ಸೇವಾ ಯೋಜನೆಯ ಸ್ವಯಂ ಸೇವಕರು ಸಮಾಜ ಹಾಗೂ ದೇಶಕ್ಕೆ ಕೊಡುಗೆ ನೀಡಬೇಕು ಎಂದು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ನಿವೃತ್ತ ಸಹ ಪ್ರಾಧ್ಯಾಪಕ ಅಶೋಕ ರೆಡ್ಡಿ ಹೇಳಿದರು.

ನಗರದ ಓಡವಾಡದಲ್ಲಿ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ವತಿಯಿಂದ ಹಮ್ಮಿಕೊಳ್ಳಲಾದ ಏಳು ದಿನಗಳ ರಾಷ್ಟ್ರೀಯ ಸೇವಾ ಯೋಜನೆ ವಿಶೇಷ ಶಿಬಿರವನ್ನು ಶನಿವಾರ ಉದ್ಘಾಟಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಸೇವಾ ಯೋಜನೆ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಸಹಕಾರಿಯಾಗಿದೆ ಎಂದು ತಿಳಿಸಿದರು.

ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು, ಸಮಯ ಪ್ರಜ್ಞೆ, ಸಂಯಮ ಮೈಗೂಡಿಸಿಕೊಳ್ಳಬೇಕು. ಶಿಕ್ಷಣದ ಜತೆಗೆ ಸಾಮಾಜಿಕ ಕಾರ್ಯಗಳಲ್ಲೂ ಪಾಲ್ಗೊಳ್ಳಬೇಕು ಎಂದು ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಪ್ರೊ. ಮನೋಜಕುಮಾರ ಕಿವಿಮಾತು ಹೇಳಿದರು.

ಪ್ರೊ. ಶ್ರೀಕಾಂತ ಪಾಟೀಲ ರಾಷ್ಟ್ರೀಯ ಸೇವಾ ಯೋಜನೆ ಉದ್ದೇಶಗಳನ್ನು ವಿವರಿಸಿದರು.

ಎನ್‌ಎಸ್‌ಎಸ್ ಘಟಕ 1 ರ ಕಾರ್ಯಕ್ರಮ ಅಧಿಕಾರಿ ಶ್ರೀನಿವಾಸ್ ರೆಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎನ್‌ಎಸ್‌ಎಸ್ ಘಟಕ 2 ರ ಕಾರ್ಯಕ್ರಮ ಅಧಿಕಾರಿ ಡಾ. ವಿದ್ಯಾ ಪಾಟೀಲ ಸ್ವಾಗತಿಸಿದರು. ಅಂಜಲಿ ನಿರೂಪಿಸಿದರು. ಅಶ್ವಿನಿ ವಂದಿಸಿದರು.



ಬೀದರ :ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದರು. ಈ ಸಂದರ್ಭದಲ್ಲಿ ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್, ಬೀದರ ನಗರಸಭೆ ಅಧ್ಯಕ್ಷರಾದ ಮಹ್ಮದ ಗೌಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಚಂದ್ರಕಾಂತ ಪೂಜಾರಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 10 : ನಗರದ ಶ್ರೀ ಸ್ವಾಮಿ ನರೇಂದ್ರ ಪದವಿಪೂರ್ವ ಕಾಲೇಜಿನಲ್ಲಿ ಶನಿವಾರ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಸಂಭ್ರಮದಿಂದ ಆಚರಿಸಲಾಯಿತು.

ಕಾಲೇಜು ನಿರ್ದೇಶಕಿ ಕಲ್ಪನಾ ಮಠಪತಿ ಅವರು ಹೇಮರೆಡ್ಡಿ ಮಲ್ಲಮ್ಮನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು.

ಮಹಿಳೆಯರು ಹೇಮರೆಡ್ಡಿ ಮಲ್ಲಮ್ಮ ಅವರ ತತ್ವಾದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಇದ್ದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆ-2ಕ್ಕೆ

### ನೊಂದಾಯಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಅವಕಾಶ



ಬೀದರ ಮೇ.10: 2025ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆ–1ರಲ್ಲಿ ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಪರೀಕ್ಷೆ–2ನ್ನು ದಿನಾಂಕ: 26–05–2025 ರಿಂದ 02–06–2025ರವರೆಗೆ ನಡೆಸಲಾಗುತ್ತಿದೆ. ಪರೀಕ್ಷೆ–1ರಲ್ಲಿ ನೊಂದಾಯಿಸಿಕೊಂಡು ಉತ್ತೀರ್ಣರಾಗದ ವಿದ್ಯಾರ್ಥಿಗಳಿಗೆ ಮಾತ್ರ ಪರೀಕ್ಷೆ–2ರಲ್ಲಿ ನೊಂದಾಯಿಸಲು ಯಾವುದೇ ಶುಲ್ಕ ಪಡೆಯುವುದಿಲ್ಲ. ಕಾರಣ ಪರೀಕ್ಷೆ–1ರಲ್ಲಿ ಉತ್ತೀರ್ಣರಾಗದ ಜಿಲ್ಲೆಯ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬ'ೇಕೆಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೇ.12 ರಂದು ವಿದ್ಯುತ್ ವ್ಯತ್ಯಯ

ಬೀದರ ಮೇ.10: ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗ ಗು.ವಿ.ಸ.ಕಂ ವ್ಯಾಪ್ತಿಯಲ್ಲಿ ಬರುವ 220ಕೆ.ವಿ ಹುಮನಾಬಾದ, ವಿದ್ಯುತ್ ಸ್ವೀಕರಣ ಕೇಂದ್ರದ 10ಎಂವಿಎ, 110/11ಕೆ.ವಿ ಪರಿವರ್ತಕದ ತುರ್ತು ಕೆಲಸದ ಪ್ರಯುಕ್ತ ದಿನಾಂಕ: 12–05–2025 ರಂದು ಬೆಳಗ್ಗೆ 8 ಗಂಟೆಯಿಂದ 1 ಗಂಟೆವರೆಗೆ 11ಕೆವಿ ಕೆ.ಐ.ಡಿ.ಬಿ, 11ಕೆವಿ ಮುಸ್ತಾಪುರ, 11ಕೆವಿ ಆರ್.ಟಿ.ಒ, 11ಕೆವಿ ನೇಕ್ಟರ ಮತ್ತು 11ಕೆವಿ ಇಂಡಸ್ಟ್ರೀಯಲ್ ಫೀಡರ ಮಾರ್ಗದ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ. ಕಾರಣ ಗ್ರಾಹಕರು ಸಹಕರಿಸಬೇಕೆಂದು ಹುಮನಾಬಾದ 220ಕೆವಿ ಸ್ವೀಕರಣಾ ಕೇಂದ್ರದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹುಮನಾಬಾದ: ಐಟಿಐ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಬೀದರ : ಮೇ.10:ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಹುಮನಾಬಾದನಲ್ಲಿ ಅಗಸ್ಟ್–2025ನೇ ಶೈಕ್ಷಣಿಕ ಸಾಲಿನ ಮೇರಿಟ್–ಕಂ–ರಿಸರ್ವೇಶನ್ ಆಧಾರಿತ ಐಟಿಐ ಪ್ರವೇಶಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಹುಮನಾಬಾದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆಸಕ್ತ ಅಭ್ಯರ್ಥಿಗಳು ಇಲಾಖೆಯ ವೆಬ್‌ಸೈಟ್ www.cite.karnataka.gov.in ಮೂಲಕ ದಿನಾಂಕ: ದಿನಾಂಕ: 28–05–2025 ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಹುಮನಾಬಾದ ಅಥವಾ ಮೊಬೈಲ್ ಸಂ–ಖ್ಯೆ: (9449041472), (9448100294),(7483148185) ಹಾಗೂ 9448150536 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಬೀದರ: ಐಟಿಐ ಪ್ರವೇಶಾತಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ : ಮೇ.10: ಬೀದರ ಜಿಲ್ಲೆಯ ಸರಕಾರಿ/ಅನುದಾನಿತ ಐಟಿಐ ಗಳ ವಿವಿಧ ವೃತ್ತಿಗಳಗೆ 202526ನೇ ಶೈಕ್ಷಣಿಕ ಸಾಲಿನ ಪ್ರವೇಶಕಾಗಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಅಹ್ವಾನಿಸಿದ್ದು, ಮೆರಿಟ ಕಮ್ ರಿಜರ್ವೇಶನ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು, ಹತ್ತನೇ ಪಾಸಾದ, 14 ವರ್ಷ ಮೇಲ್ಪಟ್ಟ ಹಾಗೂ ಎಸ್.ಎಸ್.ಎಲ್.ಸಿ ಅನುತ್ತೀರ್ಣರಾದ /8ನೇ ತರಗತಿ ಉತ್ತೀರ್ಣರಾದ ಅಭ್ಯರ್ಥಿಗಳು ಬೆಸುಗೆಗಾರ ವೃತ್ತಿಗೆ (ವೆಲ್ಡರ್ ಟ್ರೇಡ್) ವಿದ್ಯಾರ್ಥಿಗಳು ದಿನಾಂಕ 09–05–2025ರಿಂದ 28–05–2025ರ ವರೆಗೆ ಅರ್ಜಿಯನ್ನು ಆನ್‌ಲೈನ್ ವೆಬ್‌ಸೈI http://cite.karnataka.govin ನಲ್ಲಿ ಸಲ್ಲಿಸಬಹುದು ಅಥವಾ ಸಮೀಪದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಊಜಟರಿ ಆಭಇ ಗಳಲ್ಲಿ ಮಾಹಿತಿ ಪಡೆದು ಅಲ್ಲಿಯೆ ಅರ್ಜಿ ಹಾಕಬಹುದು ಅಥವಾ ಯಾವುದೇ ಸೈಬರ್ ಕಫೇನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಬೀದರ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಬೀದರ (9901097655), (7259854729), ಹುಮನಾಬಾದ (9449041472), ಔರಾದ (9740314795), ಬಸವಕಲ್ಯಾಣ (9945834467), ಭಾಲ್ಕಿ (9110412264) ಹಾಗೂ ಕಮಲನಗರ (9448349888) ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ದೇಶದ ರಕ್ಷಣಾಕಾರ್ಯ ಯಶಸ್ವಿಯಾಗಲಿ

### ಸಂಸದ ಸಾಗರ ಖಂಡ್ರೆ ನೇತೃತ್ವದಲ್ಲಿ ವಿಶೇಷ ಪೂಜೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮೇ.10: ಪಟ್ಟಣದ ಭಾಲ್ಕೇಶ್ವರ ಮಂದಿರದಲ್ಲಿ ಆಪರೇಷನ್ ಸಿಂಧೂರ ಕಾರ್ಯಾಚರಣೆ ಯಶಸ್ವಿಯಾದ ಸಂಬಂಧ ದೇಶದ ಸೈನಿಕರನ್ನು ಅಭಿನಂದಿಸಿ, ಯಶಸ್ಸನ್ನು ಕೋರಿ ವಿಶೇಷ ಪ್ರಾರ್ಥನೆಯೊಂದಿಗೆ ಪೂಜೆ ನೆರವೇರಿತು. ಸಂಸದ ಸಾಗರ ಖಂಡ್ರೆ ಅವರು ವಿಶೇಷ ಪೂಜೆ ಸಲ್ಲಿಸಿ, ಸೈನಿಕರಿಂದ ದೇಶದ ರಕ್ಷಣಾಕಾರ್ಯ ಯಶಸ್ವಿಯಾಗಲಿ, ಭಯ ಮತ್ತು ಆತಂಕ ನಿವಾರಣೆಯಾಗಿ ಎಲ್ಲೆಡೆ ಶಾಂತಿ, ನೆಮ್ಮದಿ ಮತ್ತು ಸಾಮರಸ್ಯ ನೆಲೆಗೊಳ್ಳಲಿ ಎಂದು ಪ್ರಾರ್ಥಿಸಿದರು.



ಕ್ಷೇತ್ರದ ಜನರು ದೇಶದ ಸೇನೆ ನೀಡುವ ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸಿ ಯೋಧರಿಗೆ ಸಹಕಾರ ನೀಡಬೇಕು. ಎಲ್ಲರೂ ತಮ್ಮ ಗ್ರಾಮದ ದೇವಸ್ಥಾನ, ಮಸೀದಿ, ಚರ್ಚ್, ಬುದ್ಧ ವಿಹಾರಗಳಲ್ಲಿ ವಿಶೇಷ ಪ್ರಾರ್ಥನೆಯೊಂದಿಗೆ ಪೂಜೆ ನೆರವೇರಿಸಿ ಭಾರತೀಯ ಸೈನಿಕರ ಮನೋಬಲ ಹೆಚ್ಚಿಸುವ ಕೆಲಸ ಆಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಕಾಶ ಮಾಶೆಟ್ಟೆ, ತಾಲೂಕು ಅಧ್ಯಕ್ಷ ಹಣಮಂತರಾವ ಚವ್ಹಾಣ, ಪುರಸಭೆ ಮಾಜಿ ಅಧ್ಯಕ್ಷರಾದ ಬಸವರಾಜ ವಂಕೆ, ವಿಶಾಲ ಪೂರಿ, ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಸದಸ್ಯರಾದ ಜಯರಾಜ ಖಂಡ್ರೆ, ರಾಹುಲ ಪೂಜಾರಿ, ಮಾಜಿ ಸದಸ್ಯ ಮಹಾದೇವ ಸ್ವಾಮಿ, ಪ್ರಮುಖರಾದ ಅನಿಲ ಲೋಖಂಡೆ, ಕಾಶಿನಾಥ ಲದ್ದೆ, ಟಿಂಕು ರಾಜಭವನ ಸೇರಿದಂತೆ ಹಲವರು ಇದ್ದರು.

## ಕಲ್ಯಾಣಪಥ ಪ್ರಗತಿಪಥ ರಸ್ತೆ ನಿರ್ಮಾಣದಲ್ಲಿ ಗುಣಮಟ್ಟ ಕಾಪಾಡಲು

### ಸಚಿವ ಪ್ರಿಯಾಂಕ್ ಖರ್ಗೆ ಅವರಿಂದ ಎಂಜನಿಯರುಗಳಿಗೆ ನಿರ್ದೇಶನ

ಬೆಂಗಳೂರು, ಮೇ 10: ಶಾಲೆಗಳು, ಆಸ್ಪತ್ರೆಗಳು, ವಾಣಿಜ್ಯ ಸಂಸ್ಥೆಗಳು. ಕೈಗಾರಿಕೆಗಳಿಗೆ ಗ್ರಾಮಗಳಿಂದ ಸಂಪರ್ಕ ಕಲ್ಪಿಸುವ ಕಲ್ಯಾಣಪಥ ಹಾಗೂ ಪ್ರಗತಿಪಥ ಸರ್ಕಾರದ ಮಹತ್ತರ ಯೋಜನೆಗಳಾಗಿದ್ದು, ಗ್ರಾಮೀಣ ಬದುಕಿನ ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗೆ ಪೂರಕವಾಗಬಲ್ಲ ಈ ರಸ್ತೆಗಳನ್ನು ಗುಣಮಟ್ಟದಿಂದ ನಿರ್ಮಾಣ ಮಾಡಬೇಕೆಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಪಂಚಾಯತ್ ರಾಜ್ ಇಲಾಖೆಯ ಎಂಜನಿಯರುಗಳಿಗೆ ಸೂಚನೆ ನೀಡಿದರು. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಪಂಚಾಯತ್ ರಾಜ್ ಎಂಜನಿಯರಿಂಗ್ ಇಲಾಖೆ ಹಾಗೂ ಕರ್ನಾಟಕ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಪ್ರಮುಕ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿ, ರಾಜ್ಯದ ಎಲ್ಲ ಜಿಲ್ಲೆಗಳಿಂದ ಆಗಮಿಸಿದ್ದ ಎಂಜನಿಯರುಗಳನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಕಲ್ಯಾಣಪಥ ಯೋಜನೆಗಾಗಿ ಸರ್ಕಾರ ಈ ಬಾರಿಯ ಆಯವ್ಯದಲ್ಲಿ 1000 ಕೋಟಿ ರೂ ಅನುದಾನ ನೀಡಿದ್ದು, ಕಲ್ಯಾಣ ಕರ್ನಾಟಕ ಭಾಗದ ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರ ಇಷ್ಟು ದೊಡ್ಡ ಮೊತ್ತದ ಆರ್ಥಿಕ ನೆರವನ್ನು ಮೊದಲ ಬಾರಿಗೆ ಒದಗಿಸಿದೆ, ಸರ್ಕಾರ ನೀಡಿರುವ ಅನುದಾನದಿಂದ ಉತ್ತಮ ಗುಣಮಟ್ಟದ ರಸ್ತೆಗಳನ್ನು ನಿರ್ಮಾಣ ಮಾಡುವ ಹೊಣೆಗಾರಿಕೆ ಎಂಜನಿಯರುಗಳ ಮೇಲಿದೆ, ಯಾವುದೇ ಲೋಪವಿಲ್ಲದಂತೆ ದೀರ್ಘಕಾಲ ಬಾಳಿಕೆ ಬರುವಂತೆ ರಸ್ತೆಗಳನ್ನು ನಿರ್ಮಾಣ ಮಾಡಬೇಕೆಂದು ಸಚಿವ ಪ್ರಿಯಾಂಕ್ ಖರ್ಗೆ ನಿರ್ದೇಶನ ನೀಡಿದರು.



ಪ್ರಗತಿಪಥ ಯೋಜನೆಗಾಗಿ ಸರ್ಕಾರ 5200 ಕೋಟಿ ಅನುದಾನ ಒದಗಿಸಿದ್ದು, ಕೇಂದ್ರ ಸರ್ಕಾರದ ಆರ್ಥಿಕ ವ್ಯವಹಾರಗಳ ಇಲಾಖೆಯು ಅನುಮೋದನೆ ನೀಡಲು ಏಷ್ಯನ್ ಡೆವಲೆಪ್‌ಮೆಂಟ್ ಬ್ಯಾಂಕಿಗೆ ಸೂಚನೆ ನೀಡಿದೆ, ಬ್ಯಾಂಕಿನ ತಂಡವು ಈಗಾಗಲೆ ರಾಜ್ಯಕ್ಕೆ ಭೇಟಿ ನೀಡಿ ಪರಿಶೀಲಿಸಿದೆ, ಈ ನಡುವೆ ಇಲಾಖೆಯು ರಸ್ತೆಗಳ ಪೂರ್ಣ ಯೋಜನಾ ವರದಿಯನ್ನು ಸಿದ್ಧಪಡಿಸುತ್ತಿದೆ ಎಂದು ಸಬೆಯಲ್ಲಿ ಸಚಿವರಿಗೆ ಮಾಹಿತಿ ನೀಡಲಾಯಿತು.

ಪಂಚಾಯತ್ ರಾಜ್ ಎಂಜನಿಯರಿಂಗ್ ಇಲಾಖೆ ನಿರ್ಮಾಣ ಕಾಮಗಾರಿಗಳ ವಿನಃ ಬೇರಾವುದೆ ಸರಕು ಸರಬರಾಜಿನಂತಹ ಪ್ರಕ್ರಿಯೆಗಳಲ್ಲಿ ತೊಡಗಬಾರದು ಎಂದು ಕಟ್ಟುನಿಟ್ಟಾಗಿ ಸೂಚಿಸಿದ ಸಚಿವರು, ಹೊಸ ಸಂಶೋಧನೆಗಳ ಮೂಲಕ ಮತ್ತಷ್ಟು ಬಾಳಿಕೆ ಬರುವಂತಹ ಸಾಮಗ್ರಿಗಳನ್ನು ನಿರ್ಮಾಣದಲ್ಲಿ ಬಳಸುವ ಮೂಲಕ ಸುಧಾರಣೆಗಳನ್ನು ತರಬೇಕೆಂದು ಸಲಹೆ ಮಾಡಿದರು. ಎಂಜನಿಯರಿಂಗ್ ಕ್ಷೇತ್ರದ ಸುಧಾರಣೆಗಳಿಗಾಗಿ ಹಾಗೂ ಹೊಸ ತಂತ್ರಜ್ಞಾನಗಳ ಅಳವಡಿಕೆ ಮಾಡುವ ಸಂಬಂಧ ಹಿರಿಯ ಎಂಜನಿಯರ್‌ಗಳು ಮತ್ತು ಉತ್ಸಾಹಿ ಕಿರಿಯ ಎಂಜನಿಯರ್‌ಗಳನ್ನು ಒಳಗೊಂಡ ಸಮಿತಿ ರಚಿಸಿ ವರದಿ ಪಡೆಯಲು ಸಚಿವರು ಸಲಹೆ ಮಾಡಿದರು.

ಗ್ರಾಮಗಳ ಜಲಮೂಲಗಳನ್ನು ಸುಸ್ಥಿರಗೊಳಿಸುವ ಮತ್ತು ವಿದ್ಯುತ್ ಭದ್ರತೆ ನೀಡುವ ಹೊಸ ಪರಿಕಲ್ಪನೆ ಇಲಾಖೆ ಹೊಂದಿದ್ದು, ಗ್ರಾಮಗಳ ಕೆರೆಗಳು ಸೇರಿದಂತೆ ಜಲಮೂಲಗಳನ್ನು ಸಂರಕ್ಷಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಮೂಲಕ ಹೊಸತನವನ್ನು ಅಳವಡಿಸಿಕೊಳ್ಳಲು ಸಚಿವರು ಎಂಜನಿಯರುಗಳಿಗೆ ತಿಳಿಸಿದರು. 2022–23ನೆ ಸಾಲಿನಲ್ಲಿ ಅನುಮೋದನೆಯಾದ 27322 ಕಾಮಗಾರಿಗಳಲ್ಲಿ 22712 ಕಾಮಗಾರಿಗಳು ಪೂರ್ಣಗೊಂಡಿದ್ದು, 3100 ಕಾಮಗಾರಿಗಳು ಪ್ರಗತಿಯಲ್ಲಿವೆ; 2023–24ನೆ ಸಾಲಿನಲ್ಲಿ ಅನುಮೋದನೆಯಾದ 23338 ಕಾಮಗಾರಿಗಳ ಪೈಕಿ 15522 ಕಾಮಗಾರಿಗಳು ಪೂರ್ಣವಾಗಿವೆ, 5695 ಕಾಮಗಾರಿಗಳು ಪ್ರಗತಿಯಲ್ಲಿವೆ ಹಾಗೂ 2024–25ನೆ ಸಾಲಿನಲ್ಲಿ ಅನುವೋದನೆಗೊಂಡ 25786 ಕಾಮಗಾರಿಗಳಲ್ಲಿ 11916 ಕಾಮಗಾರಿಗಳು ಪೂರ್ಣವಾಗಿದ್ದು 8013 ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದೂ ಸಭೆಯಲ್ಲಿ ಮಾಹಿತಿ ನೀಡಲಾಯಿತು. ಕಾಮಗಾರಿಗಳು ವಿಳಂಬವಾಗಿರುವ ಪ್ರಕರಣಗಳನ್ನು ಸಚಿವರು ಗಂಭೀರವಾಗಿ ಪರಿಗಣಿಸಿ, ಶಾಸಕರು ಹಾಗೂ ಸಂಸತ್ ಸದಸ್ಯರ ಜೊತೆ ಸಂಪರ್ಕದಲ್ಲಿದ್ದು, ಕಾಮಗಾರಿಗಳನ್ನು ಶೀಘ್ರ ಮುಗಿಸಲು ಬದ್ಧತೆ ಹೊಂದಬೇಕೆಂದು ಹೇಳಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರವೇಜ್ ಹಾಗೂ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

## ಮೌಲಾನಾಸಾಬಗೆ ನಾಗಪ್ಪ ಸಾಮಾಜಿಕ ಮತ್ತು ಸಾಂಸ್ಕೃತಿಕ ಸೇವಾ ಸಂಸ್ಥೆಯ ಗೌರವ ಸನ್ಮಾನ



ಬೀದರ. ಮೇ. 10 : ಜಿಲ್ಲೆಯ ಕನ್ನಡ ಪ್ರಭ ಸಹಾಯಕ ವರದಿಗಾರರಾಗಿ ಮೌಲಾನಾ ಸಾಬ್ ಅವರ ಸೇವೆ ಸಲ್ಲಿಸಿರುವುದನ್ನು ಪರಿಗಣಿಸಿ ಕೇರಳದ ಕಾಸರಗೋಡಿನಲ್ಲಿ ಇತ್ತೀಚೆಗೆ ನಡೆದ ಸಮಾರಂಭದಲ್ಲಿ ಡಾಕುಳೂರು ಕನ್ಯಾನ ಸದಾಶಿವ ಶೆಟ್ಟಿ ದತ್ತಿ ನಿಧಿ ಪ್ರಶಸ್ತಿಯನ್ನು ನೀಡಲಾಗಿರುವ ಸಂದರ್ಭದಲ್ಲಿ ಇಂದು ಅವರಿಗೆ ಇಂದು ನಾಗಪ್ಪ ಸಾಮಾಜಿಕ ಮತ್ತು ಸಾಂಸ್ಕೃತಿಕ ಸೇವಾ ಸಂಸ್ಥೆಯ ಅಧ್ಯಕ್ಷ ಭೀಮರಾವ ಬೀದರಕರ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಹಿರಿಯರಾದ ಶಿವರಾಜ ಪಾಟೀಲ್ ಅತಿವಾಳ ಶಾಲ ಹೊದಿಸಿ ಸನ್ಮಾನಿಸಿದರು. ಬಹಮನಿ ಕೋಟೆ ಪತ್ರಿಕೆ ಸಂಪಾದಕ ಶಿವಕುಮಾರ ವಣಗೇರಿ. ಶೋಧವಾಣಿ ಪತ್ರಿಕೆ ಸಂಪಾದಕ ಧರ್ಮೇಂದ್ರ ಪೂಜಾರಿ ಬಗ್ದೂರಿ. ಆಶೀರ್ವಾದ ವಾಣಿ ಪತ್ರಿಕೆ ಸಹಸಂಪಾದಕ ಜೈಕುಮಾರ. ಪ್ರಶಾಂತ ಬಕ್ಕನೂರ. ಪ್ರವೀಣಕುಮಾರ. ಹಿರಿಯ ಸಾಹಿತಿ ರುಕ್ಮೊದ್ದಿನ ಇಸ್ಲಾಂಪುರ. ಹಾಗೂ ಇನ್ನಿತರರು ಹಾಜರಿದ್ದರು.

## ಆದಿ ಜಾಂಬವ ಸಂಘಕ್ಕೆ ನೇಮಕ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 10 : ಆದಿ ಜಾಂಬವ ಸಂಘದ ಪದಾಧಿಕಾರಿಗಳ ಸಭೆ ಇತ್ತೀಚೆಗೆ ನಗರದಲ್ಲಿ ನಡೆಯಿತು. ಸಂಘದ ರಾಜ್ಯಜ ಹಿರಿಯ ಉಪಾಧ್ಯಕ್ಷ ರಾಜು ಕಡ್ಯಾಳ್ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸಂಘದ ಜಿಲ್ಲಾ ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಯಿತು.

ಜಿಲ್ಲಾ ಘಟಕ್ಕೆ ಸಂಜು ಬೇಂದ್ರೆ (ಜಿಲ್ಲಾ ಘಟಕ ಅಧ್ಯಕ್ಷ), ಜಾಫ್ ಕಡ್ಯಾಳ್ (ಗೌರವಾಧ್ಯಕ್ಷ), ಯುವರಾಜ ಭಂಡೆ (ಕಾರ್ಯಾಧ್ಯಕ್ಷರು),





ಸಿ.ಎಂ. ದಾಸ್ (ಉಪಾಧ್ಯಕ್ಷ), ಜೀವನ ರೆಕ್ಕೆ (ಯುವ ಘಟಕ ಜಿಲ್ಲಾಧ್ಯಕ್ಷ) ಅವರನ್ನು ನೇಮಿಸಲಾಗಿದೆ.

ಸನ್ಮಾನ: ನೂತನ ಪದಾಧಿಕಾರಿಗಳನ್ನು ಸನ್ಮಾನಿಸಿ ಮಾತನಾಡಿದ ರಾಜು ಕಡ್ಯಾಳ, ಹೊಸದಾಗಿ ನೇಮಕಗೊಂಡ ಜಿಲ್ಲಾ ಘಟಕದ ಪದಾಧಿಕಾರಿಗಳು ಜಾತಿ ಗಣತಿ ಕುರಿತು ಜಾಗೃತಿ ಮೂಡಿಸಬೇಕು. ಅಧಿಕಾರಿಗಳು ಮನೆಗೆ ಬಂದಾಗ ಸಮಾಜದವರು ಕಡ್ಡಾಯವಾಗಿ ಜಾತಿ ಕಾಲಂನಲ್ಲಿ ಮಾದಿಗ ಎಂದು ನಮೂದಿಸಬೇಕು. ಈ ನಿಟ್ಟಿನಲ್ಲಿ ಪ್ರತಿ ಹಳ್ಳಿಯಲ್ಲಿ ಅರಿವು ಮೂಡಿಸಿ ಎಂದು ಕರೆ ನೀಡಿದರು.

## ಪ್ರತಿಷ್ಠಿತ ಶಾಲೆಗಳಿಗೆ ಪ್ರವೇಶಕ್ಕಾಗಿ ಅರ್ಹತಾ ಪರೀಕ್ಷೆ : ಪರೀಕ್ಷೆಗೆ ಹಾಜರಾದ 381ಎಸ್ ಸಿ, ಎಸ್ ಟಿ ಮಕ್ಕಳು



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ:10: ಜಿಲ್ಲೆಯಲ್ಲಿರುವ ನಾಲ್ಕು ಪ್ರತಿಷ್ಠಿತ ಶಾಲೆಗಳಲ್ಲಿ ಎಸ್ ಸಿ,ಎಸ್ ಟಿ ಮಕ್ಕಳಿಗೆ 6ನೇ ತರಗತಿಯಿಂದ ಉಚಿತ ಶಿಕ್ಷಣ ಕೊಡಿಸುವ ನಿಟ್ಟಿನಲ್ಲಿ ಸಮಾಜ ಕಲ್ಯಾಣ ಇಲಾಖೆ ಶನಿವಾರ ಹಮ್ಮಿಕೊಂಡಿದ್ದ ಅರ್ಹತಾ ಪರೀಕ್ಷೆ ಒಟ್ಟು 384 ಮಕ್ಕಳು ಹಜರಾಗಿದ್ದಾರೆ.

ಶನಿವಾರ ಇಲ್ಲಿನ ಕನಕ ನಗರದಲ್ಲಿನಲಿಂಗೇರಿಕೊನಪ್ಪಆರ್. ನಾಡಗೌಡ ಪ್ರೌಢ ಶಾಲೆ ನಡೆದ ಪರೀಕ್ಷೆಗೆ 303 ಎಸ್ ಸಿ ಹಾಗೂ 81 ಎಸ್ ಟಿ ಸಮುದಾಯಗಳ ಮಕ್ಕಳು ಪರೀಕ್ಷೆ ಬರೆದಿದ್ದಾರೆ. ಈ ವೇಳೆ ಪರೀಕ್ಷಾ ಕೇಂದ್ರಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿ ಡಾ.ಸುಶೀಲಾ. ಬಿ ಅವರು, ಶಾಲೆಯ ಬೇರೆ,ಬೇರೆ ಕೋಣೆಗಳಲ್ಲಿ ಪರೀಕ್ಷೆ ಬರೆಯುತ್ತಿದ್ದ ಮಕ್ಕಳಿಗೆ ಧೈರ್ಯ ಹೇಳಿ ತಾಳ್ಮೆಯಿಂದ ಎಲ್ಲ ಪ್ರಶ್ನೆಗಳಿಗೆ ಉತ್ತರ ಬರೆಯಿರಿ ಎಂದು ಹೇಳಿದರು.

ಈ ಪರೀಕ್ಷೆಯಲ್ಲಿ ಪಾಸಾದವರಿಗೆ ಮೇರಿಟ್ ಆಧಾರದ ಮೇಲೆ ನಗರದ ಡಿಡಿಯು,ಶಹಾಪುರದ ಡಿಡಿಯು, ವಿದ್ಯಾರಣ್ಯ ಶಾಲೆ ಹಾಗೂ ದಿಗ್ಗಿಯಲ್ಲಿ ಇರುವ ಶಾಲೆಯೊಂದರಲ್ಲಿ ಪ್ರವೇಶ ನೀಡಿ, ಶಾಲಾ ಶುಲ್ಕ, ವಸತಿ ಮತ್ತು ಊಟದ ವ್ಯವಸ್ಥೆ ಸಮಾಜ ಕಲ್ಯಾಣ ಇಲಾಖೆಯಿಂದ ಮಾಡಲಾಗುವುದು. 6 ರಿಂದ 10 ತರಗತಿಯವರೆಗೆ ಮತ್ತು ಡಿಡಿಯು ಸಂಸ್ಥೆಯಲ್ಲಿ ಕಾಲೇಜು ವ್ಯಾಸಂಗವೂ ಮಾಡಬಹುದೆಂದು ಇಲಾಖೆ ಉಪನಿರ್ದೇಶಕ ಎಸ್. ಎಸ್. ಚನ್ನಬಸಪ್ಪ ತಿಳಿಸಿದ್ದಾರೆ. ಈ ವೇಳೆ ವಿವಿಧ ಇಲಾಖೆಗಳ ಅಧಿಕಾರಿಗಳಾದ ಸಿದ್ದಣ ಅಣಬಿ, ಬೇಬಿ ಹುಲಸ್ವಾರ್, ಡಿ.ಎಂ. ಹೊಸಮನಿ, ಪರೀಕ್ಷಾ ಮುಖ್ಯಸ್ಥೆ ಅನ್ನಪೂರ್ಣಾ, ಅಧಿಕ್ಷಕರಾದ ಶೇಖರಪ್ಪ, ಚನ್ನಪ್ಪ, ವಿದ್ಯಾ ಸಜ್ಜನ್ ಸೇರಿದಂತೆ ಇತರರಿದ್ದರು.

## ತಾಲೂಕಿನಲ್ಲೆಡೆ ಅದ್ದೂರಿಯಾಗಿ ನೆರವೇರಿದ ಹೇಮರೆಡ್ಡಿ ಮಲ್ಲಮ್ಮ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ತಾಲೂಕಿನ ವಿವಿಧಡೆಗಳಲ್ಲಿ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿಯನ್ನು ಅದ್ದೂರಿಯಾಗಿ ಆಯೋಜನೆ ಮಾಡಲಾಯಿತು.

ತಾಲೂಕಿನ ತಳಕಲ್, ಅರ-ಕೇರಿ, ಮಂಡಲಗಿರಿ ಸೇರಿದಂತೆ ವಿವಿಧಡೆಗಳಲ್ಲಿ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ನವರ ಬೃಹತ ಭಾವಚಿತ್ರ ಮೆರವಣಿಗೆ ಮಾಡಿ ವಿಜೃಂಭಣೆಯಿಂದ ಸಹ ಧಾರ್ಮಿಕರು ಸೇರಿಕೊಂಡು ಸೌಹಾರ್ದತೆಯಿಂದ ಜಯಂತಿ ಆಚರಣೆ ಮಾಡಲಾಯಿತು. ಮಂಡಲಗಿರಿ ಗ್ರಾಮದ ಕೆಂಪುಕೆರೆ ಬಸವಣ್ಣನ ದೇವಸ್ಥಾನದಿಂದ ಆರಂಭಗೊಂಡ ಬೃಹತ್ ಭಾವಚಿತ್ರ ಮೆರವಣಿಗೆಯು ಶ್ರೀ ವೀರಭದ್ರೇಶ್ವರ ದೇವಸ್ಥಾನ, ಗಾಳಿ ದುರ್ಗಾದೇವಿ ದೇವಸ್ಥಾನ, ದ್ಯಾಮವ್ವನ ದೇವಸ್ಥಾನ ಸೇರಿದಂತೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮೂಲಕ ಸಾಗಿ ಸಾಗಿಬಂದು ಪುನಃ ಕೆಂಪುಕೆರೆ ಬಸವಣ್ಣನ ದೇವಸ್ಥಾನದ ಹತ್ತಿರ ಮೆರವಣಿಗೆಯನ್ನು ಸಂಪನ್ನಗೊಳಿಸಲಾಯಿತು.

ಮೆರವಣಿಗೆಯದ್ದಕ್ಕೂ ಮುತ್ತೈದೆ ಮಹಿಳೆಯರಿಂದ ಕುಂಭ ಮೆರವಣಿಗೆ ಎಲ್ಲರ ಆಕರ್ಷಣೀಯವಾಗಿದ್ದು ಹೇಮರೆಡ್ಡಿ ಮಲ್ಲಮ್ಮನವರ ಜಯ ಘೋಷದೊಂದಿಗೆ ಅದ್ದೂರಿಯಾಗಿ ಮೆರವಣಿಗೆ ಮಾಡಿ ಅನ್ನ ಸಂತರ್ಪಣೆ ಮಹಾದಾಸೊಹ ಕಾರ್ಯಕ್ರಮವನ್ನು ಸಹ ಆಯೋಜಿಸಲಾಯಿತು.

ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರು, ವಿವಿಧ ಸಂಘ ಸಂಸ್ಥೆಗಳ ಯುವಕರು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

## ಸರ್ಕಾರಿ ಪ್ರೌಢ ಶಾಲೆಗಳಲ್ಲಿಯೇ ಅತೀ ಹೆಚ್ಚು ಅಂಕ ಪಡೆದು ಉತ್ತೀರ್ಣಗೊಂಡ ವಿದ್ಯಾರ್ಥಿ ಝುರಣಪ್ಪ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ(ಗ್ರಾ):ತಾಲೂಕಿನ ಹಳ್ಳಿಖೇಡ (ಬಿ) ಸರಕಾರಿ ಪ್ರೌಢ ಶಾಲೆ ಶಾಲೆಯಲ್ಲಿ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಕೂಲಿ ಕಾರ್ಮಿಕನ ಮಗ ಝುರಣಪ್ಪ ಶೇಶಪ್ಪ 625ಕ್ಕೆ 600 ಅಂಕ ಪಡೆದು ಸರ್ಕಾರಿ ಶಾಲೆಗಳಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದಕ್ಕೆ ಶಾಲೆಯ ಮುಖ್ಯ ಗುರುಗಳಾದ ದತ್ತಾತ್ರೇಯ ಹಾಗೂ ಸಿಬ್ಬಂದಿ ವರ್ಗ ಮತ್ತು ಶಾಲೆಯ ಎಸ್.ಡಿ.ಎಮ್.ಸಿ ಅಧ್ಯಕ್ಷ ಮಹಮ್ಮದ್ ಮಕ್ಸುದ ಅಲಿ ಹಾಗೂ ಸದಸ್ಯರು ಹರ್ಷ ವ್ಯಕ್ತಪಡಿಸಿ ವಿದ್ಯಾರ್ಥಿಗೆ ಅಭಿನಂದನೆಗಳು ಸಲ್ಲಿಸಿದ್ದಾರೆ.

## ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಪಂಚಲೋಹ ಮೂರ್ತಿ ಪ್ರತಿಷ್ಠಾಪನೆ

ಮಲ್ಲಮ್ಮ ನುಡಿ ವಾರ್ತೆ

ಶಹಪುರ್ ದಿನಾಂಕ12.05.2025 ರಂದು ಡಾಕ್ಟರ್ ಬಾಬಾ ಸಾಹೇಬ್ ಅಂಬೇಡ್ಕರ್ ಪಂಚಲೋಹ ಮೂರ್ತಿ ಪ್ರತಿಷ್ಠಾಪನೆ ಮಾಡಲು ದಿನಾಂಕ ಘೋಷಣೆಯಾಗಿದ್ದು. ತಾಲೂಕಿನ ದಂಡಾಧಿಕಾರಿಗಳಾದ ಉಮಾಕಂತ ಹಳ್ಳಿಯವರಿಗೆ ಬಂದೋಬಸ್ತಿಗಾಗಿ ಮನವಿ ಸಲ್ಲಿಸಲಾಯಿತು.

ಎಲ್ಲಾ ದಲಿತ ಸಮಾಜದ ಎಲ್ಲಾ ಬಂಧುಗಳು ದಿನಾಂಕ 12/05/2025 ರಂದು ನಗರದ ತಹಸೀಲ್ ಕಾರ್ಯಾಲಯದಿಂದ ಮೆರವಣಿಗೆ ಮೂಲಕ ಸಾಯಂಕಾಲ 4:00 ಗಂಟೆಗೆ



ಇಂದ ಬಸವೇಶ್ವರ ವೃತ್ತದಿಂದ ಹಳೆ ಬಸ್ ನಿಲ್ದಾಣದ ವರೆಗೂ ಮೆರವಣಿಗೆ ಮುಖಾಂತರ ಸಂಜೆ 8 ಗಂಟೆಗೆ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಮೂರ್ತಿಯನ್ನು ಅನಾವರಣಗೊಳಿಸಲಾಗುತ್ತಿದ್ದು ಎಲ್ಲಾ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಅಭಿಮಾನಿ ಬಳಗದವರು ಬಂದು ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಸುಭಾಸ್ ತಳವಾರ್ ಬಂಧುಗಳಲ್ಲಿ ಮನವಿ ಮಾಡಿದ್ದಾರೆ.

ಶಿವು ತಳವಾರ್ ನಗರಸಭೆ ಸದಸ್ಯರು.ನಾಗಣ್ಣಬಡಿಗೇರ್.ಬಸವರಾಜ ಚಲವಾದಿ. ಶಿವಪುತ್ರ ಜವಳಿ. ಚಂದ್ರಶೇಖರ್ ಬೇವಿನಹಳ್ಳಿ. ಸಮಸ್ತ ದಲಿತ ಸಂಘಟನೆ ಪದಾಧಿಕಾರಿಗಳು ಉಪಸ್ಥಿತರಿದ್ದರು.

### ಗ್ರಾಮೀಣ ಭಾಗದಲ್ಲಿ ಬಯಲಾಟ, ನಾಟಕ, ಗೀಗಿ ಪದ ಜನಪದಗಳು ನಶಿಸುತ್ತೇವೆ.

## ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ ಎಂ.ವೈ. ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮೇ.09-ಗ್ರಾಮೀಣ ಭಾಗದಲ್ಲಿ ಗ್ರಾಮೀಣ ಬಯಲಾಟ, ನಾಟಕ ಗೀಗಿ ಪದ ಜನಪದಗಳು ಇಂದಿನ ದಿನಗಳಲ್ಲಿ ನಶಿಸುತ್ತೇವೆ ನಾವೆಲ್ಲ ಪ್ರೋತ್ಸಾಹಿಸುತ್ತಿಲ್ಲ ಇದನ್ನು ತಡೆಗಟ್ಟಲು ನಾವೆಲ್ಲ ಪ್ರೋತ್ಸಾಹಿಸಬೇಕೆಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಶಾಸಕರಾದ ಎಂ.ವೈ ಪಾಟೀಲ ಅವರು ಹೇಳಿದರು.




ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕರ್ನಾಟಕ ರಂಗಾಯಣ ಕಲಬುರಗಿ, ಮಕ್ಕಳ ಹಬ್ಬ-2025 ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರದ ಸಮಾರೋಪ ಸಮಾರಂಭ ಚಿಣ್ಣರ ರಂಗೋತ್ಸವ ಉದ್ಘಾಟನಾ ಸಮಾರಂಭ 9 ಮತ್ತು 10 ರಂದು ಎರಡು ದಿನ ಸಾಂಸ್ಕೃತಿ ಕಾರ್ಯಕ್ರಮ ಮತ್ತು ನಾಟಕ ಪ್ರದರ್ಶನವನ್ನು ಡೊಳ್ಳು ಬಾರಿಸುವುದರ ಮೂಲಕ ಚಾಲನೆ ನೀಡಿದರು.

ಡಾ.ಸುಜಾತ ಜಂಗಮ ಶೆಟ್ಟಿಯವರು ರಂಗಾಯಣಕ್ಕೆ ಸಹಾಯಧನ ಒದಗಿಸಲು ಮನವಿ ಮಾಡಿದರು. ನಾನು ಇವತ್ತು 1.5 ಕೋಟಿಯ ಅನುದಾನ ಕೆ.ಕೆ.ಆರ್.ಡಿ.ಬಿ. ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂದು ಹೇಳಿದರು

ದಕ್ಷಿಣ ಮತ ಕ್ಷೇತ್ರದ ಶಾಸಕರಾದ ಅಲ್ಲಮ ಪ್ರಭು ಪಾಟೀಲ ಅವರು ಮಾತನಾಡಿ, ಗೀಗಿ ಪದ ಡೊಳ್ಳು ಗುಣಿತ, ತತ್ವಪದಗಳು ಬಯಲಾಟ, ನಾಟಕಗಳನ್ನು ನಾವು ಮರೆತುಬಿಟ್ಟು ಸಿನಿಮಾಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದೇವೆ ಇದನ್ನು ಬಿಟ್ಟು ನಾವೆಲ್ಲರೂ ಕಲೆ ಹೆಚ್ಚಿನ ಮಹತ್ವ ನೀಡಬೇಕೆಂದು ಅವರು ತಿಳಿಸಿದರು.

ಇಂದಿನ ಯುಗದಲ್ಲಿ ನಮ್ಮ ಪ್ರತಿಭೆಗಳಿಗೆ ನಾವು ಗುರುತಿಸಬೇಕಾದರೆ ನಾಟಕಗಳನ್ನು ಯಕ್ಷಗಾನ, ಡೊಳ್ಳುಗುಣಿತ ಗೀಗಿಪದಗಳನ್ನು ಉತ್ತೇಜಿಸಿ ನಮ್ಮ ಪ್ರತಿಭೆಗಳನ್ನು ಗುರುತಿಸುವಂತ ಕೆಲಸ ಆಗಬೇಕೆಂದರು.

ರಂಗಾಯಣ ನಿರ್ದೇಶಕಿ ಪ್ರಸ್ತಾವಿಕವಾಗಿ ಮಾತನಾಡಿ, ಇಂಥಹ ಬೇಸಿಗೆ ಶಿಬಿರಗಳನ್ನು ಏರ್ಪಡಿಸುವುದರಿಂದ ಮಕ್ಕಳಿಗೆ ಒಳ್ಳೆಯ ಜ್ಞಾನ ಬೆಳವಣಿಯಾಗುತ್ತದೆ. ತಂದೆ ತಾಯಿಗಳು ಮಕ್ಕಳಿಗೆ ಓದು ಅನುವುದು ತಪ್ಪು ಎಲ್ಲ ಕಲೆ ಸಾಹಿತ್ಯ ಪ್ರಬಂಧ ಸ್ಪರ್ಧೆಗಳು ಭಾಗವಹಿಸಿ ಮಕ್ಕಳು ತಮ್ಮ ಪ್ರತಿಭೆ ಹೊರತರಬೇಕೆಂದರು.

ಇಂತಹ ಶಿಬಿರಗಳನ್ನು ಹಮ್ಮಿಕೊಳ್ಳುವುದರಿಂದ ಮಕ್ಕಳು ಓದುವುದರ ಜೊತೆಗೆ ಹೆಚ್ಚಿನ ಆಟಗಳು, ತರಬೇತಿಗಳು ಹಮ್ಮಿಕೊಳ್ಳಾಗಿತ್ತು. ಇದರ ಸದುಪಯೋಗ ಮಕ್ಕಳು ಪಡೆದು-ಕೊಂಡರು ಎಂದರು.

ಪೋಲಿಸ್ ಠಾಣಿ ಡಿ.ವೈ.ಎಸ್.ಪಿ. ಸೈಬರ್ ಬಸವೇಶ್ವರ ಹೀರಾ ಮಾತನಾಡಿದರು.

ರಂಗಾಯಣದ ಆಡಳಿತಾಧಿಕಾರಿ ಸಿದ್ರಾಮ ಸಿಂದೆ ಸ್ವಾಗತಿಸಿದರು. .

ಇದೇ ಸಂದರ್ಭದಲ್ಲಿ ನಾಡಗೀತೆ ಪ್ರಕಾಶ ಪೂಜಾರಿ ಮತ್ತು ತಂಡ ಪ್ರಾರ್ಥನಾಗೀತೆ ಶಿಬಿರದ ಮಕ್ಕಳಿಂದ ಡೊಳ್ಳು ಕುಣಿತ ಸಂಜುಕುಮಾರ ಬರಗಾಲಿ , ತಮಟೆ ವಾದನ ವಿಶ್ವನಾಥ ತೋಟ್ನಳ್ಳಿ, ನಾಟಕ:ರಾಜ ಮತ್ತು ವೃಕ್ಷ ದೇವತೆ: ಪ್ರಸ್ತುತಿ ಕೃಷ ನದಿ ತಂಡ ರಚನೆ: ಶೈಲಿ ಪ್ರಭಾಕರ, ವಿನ್ಯಾಸ ಮತ್ತು ನಿರ್ದೇಶಕ ಭಾಗ್ಯಶ್ರೀ ಪಾಳ, ರಂಗಗೀತೆ: ಶರಣು ಹೆಳವು ಸ್ವಾಮಿ ನಾವು ನಿಗಮ ಏರ್ಪಡಿಸಲಾಯಿತು.

ಇದೇ ಸಂದರ್ಭದಲ್ಲಿ ಮಕ್ಕಳ ಸಾಹಿತ್ಯ ಆದ ಎ.ಕೆ.ರಾಮಶೇಶ್ವರ, ಶರಣಬಸವೇಶ್ವರ ಸಂಸ್ಥಾನ ಕಾರ್ಯದರ್ಶಿಗಳಾದ ಬಸವರಾದ ದೇಶಮುಖ, ರಂಗ ಸಮಾಜದ ಸದಸ್ಯರಾದ ಮಹಾಂತೇಶ ಗಜೇಂದ್ರಗಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರು ಸೇರಿದಂತೆ ಮಕ್ಕಳ ಪಾಲಕರು ಭಾಗವಹಿಸಿದ್ದರು.

## ಮಕ್ಕಳು ಬಿಸಿಲಲ್ಲಿ ಓಡಾಡದೆ ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಮಕ್ಕಳು ಇಂತಹ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 10: ಜಿಲ್ಲೆಯಲ್ಲಿ 5 ರಿಂದ 16ರ ವರ್ಷದ ಮಕ್ಕಳಿಗೆ ಜಿಲ್ಲಾ ಮಟ್ಟದಲ್ಲಿ ಉಚಿತ ಬೇಸಿಗೆ ಶಿಬಿರವನ್ನು ಮಕ್ಕಳಿಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳಾದ ಚಿತ್ರಕಲೆ, ಕರಕುಶಲ, ನಾಟಕ, ನೃತ್ಯ, ಯೋಗ, ಕರಾಟೆ, ಪ್ರಕೃತಿ ಪರಿಸರ, ಓದುವ ಕೌಶಲ್ಯ ಕುರಿತು 15 ದಿನದ ಶಿಬಿರವನ್ನು ಹಮ್ಮಿಕೊಳ್ಳಲಾಯಿತು ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವದ್ದಿ ಇಲಾಖೆ ಉಪ ನಿರ್ದೇಶಕರಾದ ವೀರನಗೌಡ ಪಾಟೀಲ್ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾ ಬಾಲಭವನ ಸಭಾಂಗಣದಲ್ಲಿ ಇತ್ತೀಚಿನ ನಡೆದ ಬೆಂಗಳೂರು ರಾಜ್ಯ ಬಾಲ ಭವನ ಸೊಸೈಟಿ, ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಯಾದಗಿರಿ ಜಿಲ್ಲಾ ಬಾಲ ಭವನ ಸೊಸೈಟಿ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಬೇಸಿಗೆ ಶಿಬಿರ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾದಗಿರಿ ಜಿಲ್ಲೆಯಲ್ಲಿ ಬೇಸಿಗೆ ಕಾಲದ ಕುರಿತು ಮಕ್ಕಳು ಬಿಸಿಲಲ್ಲಿ ಓಡಾಡದೆ ಬಿಸಿಲಿನ ತಾಪಮಾನ ಹೆಚ್ಚಿರುವುದರಿಂದ ಮಕ್ಕಳು ಇಂತಹ ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ ಈ ಒಂದು ಉಚಿತ ಬೇಸಿಗೆ ಶಿಬಿರ 15 ದಿನದ ತರಬೇತಿಯಲ್ಲಿ ತರಬೇತಿದಾರರು ಹೇಳಿಕೊಡುವ ಚಟುವಟಿಕೆಗಳನ್ನು ಕಲಿಯಬೇಕೆಂದು ಮಕ್ಕಳಿಗೆ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದರು.

ಯಾದಗಿರ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ದಿನೇಶ್ ಕುಮಾರ ಅವರು ಮಾತನಾಡಿ ಪ್ರತಿಯೊಂದು ಮಕ್ಕಳಲ್ಲಿ ಕೌಶಲ್ಯ ಬೆಳವಣಿಗೆ ಇರುತ್ತದೆ. ಆದರೆ ಮಕ್ಕಳಿಗೆ ಸರಿಯಾದ ವೇದಿಕೆ ಕಲ್ಪಿಸಿರುವುದಿಲ್ಲಾ. ಆದ್ದರಿಂದ ಇಂತಹ ಶಿಬಿರದಲ್ಲಿ ಪಾಲ್ಗೊಂಡು ಶಿಬಿರದ ಚಡುವಡಿಕೆಗಳನ್ನು ಪರಿಪೂರ್ಣ ಕಲಿತುಕೊಂಡು ವಿದ್ಯಾಭ್ಯಾಸದ ಜೊತೆಗೆ ಪಠ್ಯೇತರ ಚಟುವಟಿಕೆಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಮಕ್ಕಳಿಗೆ ತಿಳಿಸಿದರು.

ಯಾದಗಿರಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರು ರುದ್ರಸ್ವಾಮಿ ಚಿಕ್ಕಮಠ ಮಾತನಾಡಿ, ಬೇಸಿಗೆ ಶಿಬಿರದಲ್ಲಿ ಈ ಹಿಂದೆ ನಾನು ಕೂಡ ಬಾಲ ಭವನದ ವತಿಯಿಂದ ಏರ್ಪಡಿಸಿರುವ ವಿವಿಧ ಕಾರ್ಯಕ್ರಮಗಳಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದೇನೆ. ಆದರೆ ಇವಾಗ ನಾನು ಮಕ್ಕಳ ಕಲ್ಯಾಣ ಸಮಿತಿಯ ಸದಸ್ಯನಾಗಿ ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಬಂದಿರುವುದು ನನಗೆ ತುಂಬ ಖುಷಿಯಾಗಿದೆ. ಪ್ರತಿ ವರ್ಷವು ಬಾಲ ಭವನವು ಪ್ರತಿಯೊಂದು ಮಕ್ಕಳಲ್ಲಿರುವ ಪ್ರತಿಯೊಂದು ಪ್ರತಿಭೆಯನ್ನು ಹೊರತರುವ ಕೆಲಸ ಮಾಡುತ್ತಿದೆ ಎಂದು ಖುಷಿ ಪಟ್ಟರು.

ಜಿಲ್ಲಾ ಕಾರ್ಯಕ್ರಮ ಸಂಯೋಜಕರು ಅನೀಲ್ ಕುಮಾರ ಮಾತನಾಡಿ, ಬೇಸಿಗೆ ಶಿಬಿರವನ್ನು 2025ರ ಮೇ 22ರ ವರೆಗೆ ಸೃಜನಾತ್ಮಕ ಹಾಗೂ ಕ್ರಿಯಾತ್ಮಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುತ್ತಿದ್ದು, ಈ ಒಂದು ಶಿಬಿರದಲ್ಲಿ ಸುಮಾರು 80 ಮಕ್ಕಳು ಭಾಗವಹಿಸಲಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರು ಕುಮಾರಿ ಮಂಜುಳಾ, ಯಾದಗಿರಿ ಸರಕಾರಿ ಬಾಲಕಿಯರ ಬಾಲ ಮಂದಿರ ಅಧೀಕ್ಷಕರು ಶ್ರೀಮತಿ ನಾಗಮ್ಮ ಹಿರೇಮಠ, ಮಕ್ಕಳ ಜಾಗೃತಿ ಸಂಪನ್ಮೂಲ ವ್ಯಕ್ತಿ ದೇವಪ್ಪ, ನೃತ್ಯ ಶಿಕ್ಷಕರು ಮಧುಕುಮಾರ ಶಿಕ್ಷಕರು ವಿಶ್ವನಾಥ ಜಿಲ್ಲಾ ಕಾರ್ಯಕ್ರಮ ಸಹಾಯಕರು ಪ್ರಶಾಂತಕುಮಾರ ಉಪಸ್ಥಿತರಿದ್ದರು.

## ಗ್ರಾ. ಪಂ ಉಪ ಚುನಾವಣೆ : ಮೇ 25ಕ್ಕೆ ಮತದಾನ, ಮೇ 28ಕ್ಕೆ ಮತ ಎಣಿಕೆ:ಡಾ.ಸುಶೀಲಾ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 10- : ಯಾದಗಿರಿ ಜಿಲ್ಲೆಯಲ್ಲಿ ವಿವಿಧ ಕಾರಣಗಳಿಂದ ಶಹಾಪುರ ತಾಲ್ಲೂಕಿನ 1-ಚಾಮನಾಳ ಗ್ರಾಮ ಪಂಚಾಯತಿಯ 5-ದರ್ಶನಾಪೂರ, ಶೋರಾಪುರ ತಾಲ್ಲೂಕಿನ 04-ಸೂಗುರು ಗ್ರಾಮ ಪಂಚಾಯತಿಯ 5-ಬೇವಿನಾಳ ಎಸ್. ಹೆಚ್ ಮತ್ತು ವಡಗೇರಾ ತಾಲ್ಲೂಕಿನಲ್ಲಿ 09-ನಾಯ್ಕಲ್ ಗ್ರಾಮ ಪಂಚಾಯತಿಯ 2-ನಾಯ್ಕಲ್ ಕ್ಷೇತ್ರಗಳಲ್ಲಿ ತೆರವಾಗಿರುವ ಕ್ಷೇತ್ರಗಳಿಗೆ ಉಪ-ಚುನಾವಣೆ ನಡೆಸಲು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಚುನಾವಣಾಧಿಕಾರಿ ಡಾ.ಸುಶೀಲಾ ಅವರು ಬುಧವಾರ ಅಧಿಸೂಚನೆ ಹೊರಡಿಸಿದ್ದಾರೆ.

ಚುನಾವಣೆ ವೇಳಾಪಟ್ಟಿ ಪ್ರಕಾರ ನಾಮಪತ್ರ ಸಲ್ಲಿಸಲು 2025ರ ಮೇ 14 ಕೊನೆ ದಿನವಾಗಿದ್ದು, 2025ರ ಮೇ 15 ರಂದು ನಾಮಪತ್ರ ಪರಿಶೀಲಿಸಲಾಗುತ್ತದೆ. ಉಮೇದುವಾರಿಕೆ ಹಿಂಪಡೆಯಲು 2025ರ ಮೇ 17 ಕೊನೆ ದಿನವಾಗಿದೆ.

ಮತದಾನದ ಅವಶ್ಯವಿದ್ದರೆ 2025ರ ಮೇ 25 ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆ ವರೆಗೆ ನಡೆಸಲಾಗುವುದು. ಅವಶ್ಯವಿದ್ದರೆ ಮರು ಮತದಾನ 2025ರ ಮೇ 27 ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆ ವರೆಗೆ ನಡೆಸಿ 2025ರ ಮೇ 28 ರಂದು ಬೆಳಿಗ್ಗೆ 8 ಗಂಟೆಯಿಂದ ಆಯಾ ತಾಲೂಕಾ ಕೇಂದ್ರಗಳಲ್ಲಿ ಮತ ಎಣಿಕೆ ನಡೆಸಲಾಗುವುದು. ಇನ್ನು ಉಪ ಚುನಾವಣೆ ನಡೆಯುವ ಈ ಗ್ರಾಮ ಪಂಚಾಯತಿಗಳ ಚುನಾವಣೆ ನಡೆಯುವ ಕ್ಷೇತ್ರದ ವ್ಯಾಪ್ತಿಯಲ್ಲಿ ಚುನಾವಣಾ ನೀತಿ ಸಂಹಿತೆಯು 2025ರ ಮೇ 8 ರಿಂದ 28ರ ವರೆಗೆ ಜಾರಿಯಲ್ಲಿರುತ್ತದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಳೆಬೆಳಗುಂದಿಯಲ್ಲಿ ಅದ್ಧೂರಿ ಕನ್ನಿಕಾ ಪರಮೇಶ್ವರಿ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಸೈದಾಪುರ:ಮೇ.9: ಕಾಳೆಬೆಳಗುಂದಿ ಗ್ರಾಮದ ಬಿಬಿಸಿ ಕಲ್ಯಾಣ ಮಂಟಪದಲ್ಲಿ ಯಾದಗಿರಿ ಗ್ರಾಮೀಣ ವಲಯ ಆರ್ಯ ವೈಶ್ಯ ಸ್ವಯಂ ಸೇವಕರ ವತಿಯಿಂದ ಹಮ್ಮಿಕೊಂಡಿದ ಆರ್ಯವೈಶ್ಯ ಸಮಾಜದದ ಕುಲದೇವತೆ ಕನ್ನಿಕಾ ಪರಮೇಶ್ವರಿ ಜಯಂತಿಯನ್ನು ಅದ್ಧೂ-ರಿಯಾಗಿ ಆಚರಿಸಲಾಯಿತು.

ಬೆಳಗ್ಗೆ 8 ಗಂಟೆಗೆ ಸುಮಂಗಲೆಯರ ಕುಂಭ ಕಳಸದೊಂದಿಗೆ ಕನ್ನಿಕಾ ಪರಮೇಶ್ವರಿಯ ವಿಶೇಷ ಪೂಜೆ ಸಲ್ಲಿಸಲಾಯಿತು. ಈ ವೇಳೆಯಲ್ಲಿ ಸುತ್ತಮುತ್ತಲಿನ ಗ್ರಾಮದ ಸಮಾಜ ಭಾಂದವರು ತಮ್ಮ ಅಂಗಡಿಗಳನ್ನು ಬಂದ್ ಮಾಡಿ, ಬಿಳಿ ಸಮುವಸ್ತ್ರದೊಂದಿಗೆ ಭಕ್ತಿಯಿಂದ ಜಯಂತಿಯ ಕಾರ್ಯಕ್ರಮದಲ್ಲಿ ಭಾಗಿಯಾಗುವುದು ವಿಶೇಷವಾಗಿತ್ತು.

ಈ ಸಂದರ್ಭದಲ್ಲಿ ಯಾದಗಿರಿ ಗ್ರಾಮೀಣ ವಲಯಾಧ್ಯಕ್ಷ ವೆಂಕೋಬಯ್ಯ ಗುಜ್ಜ, ಉಪಾಧ್ಯಕ್ಷ ಶ್ರೀನಿವಾಸ್ ಶೆಟ್ಟಿ, ಗುರುರಾಜ ಗುಜ್ಜ, ವೆಂಕಟೇಶ ಪಾಲದಿ, ಸುಭಾಷ್ ಕಟ್ಟಾ, ಸಿದ್ದು ಕೊಂಕಲ್, ಪ್ರಸಾದ್ ಹಳ್ಳಿಗೇರಾ, ಶಿವಕುಮಾರ ನೀಲಹಳ್ಳಿ, ಸುನೀಲ್ ಕಂದಳ್ಳಿ, ಸತೀಶ ಕಟ್ಟಾ, ನರಸಿಂಹ ಬಾಲಛೇಡ್, ನಾರಾಯಣ ಶೆಟ್ಟಿ ಗುಡ್ಲಾಗುಂಟ, ಶ್ರೀನಿವಾಸ ಶೆಟ್ಟಿ ಕಣೇಕಲ್, ಸೇರಿದಂತೆ ಮಹಿಳೆಯರು, ಮಕ್ಕಳು ಭಾಗವಹಿಸಿದ್ದರು.

## ಮುಖ್ಯ ಪೇದೆ ಲಕ್ಷ್ಮಣ ನಾಯ್ಕ್-ನಿಧನ

ಮಲ್ಲಮ್ಮ ನುಡಿ ವಾರ್ತೆ

ಹೊಸಪೇಟೆ.(ವಿಜಯನಗರ) ಮೇ10: ನಗರದ ಪೊಲೀಸ್ ಇಲಾಖೆಯಲ್ಲಿ ಮುಖ್ಯಪೇದೆಯಾಗಿ ಕಾರ್ಯನಿರ್ವಹಿಸುತ್ತಿದ್ದ ಲಕ್ಷಣ ನಾಯ್ಕ (42) ಅವರು ಅನಾರೋಗ್ಯದಿಂದ ಶುಕ್ರವಾರ ನಿಧನರಾಗಿದ್ದಾರೆ.

ಮೃತರಿಗೆ ಪತ್ನಿ, ಓರ್ವ ಪುತ್ರ, ಓರ್ವ ಪುತ್ರಿ ಇದ್ದಾರೆ. ಮೂಲತಃ ಹೂವಿನಹಡಗಲಿ ತಾಲೂಕಿನ ದಾಸರಹಳ್ಳಿ ತಾಂಡಾದ ಲಕ್ಷಣ ನಾಯ್ಕ ಅವರು 2005ರಲ್ಲಿ



ಪೊಲೀಸ್ ಇಲಾಖೆ ಸೇವೆಗೆ ಸೇರಿದ್ದರು. ಅವರು ನಗರದ ಪಟ್ಟಣಠಾಣೆ, ಸಂಚಾರಠಾಣೆ, ಗಾದಿಗನೂರು ಠಾಣೆ, ಬಡಾವಣೆ ಠಾಣೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ.

ಇವರ ಸಾವಿಗೆ ಎಸ್ಪಿ ಬಿ.ಎಲ್. ಶ್ರೀಹರಿಬಾಬು, ಎಎಸ್ಪಿ ಸಲೀಂ ಪಾಷಾ, ಡಿವೈಎಸ್ಪಿ ಮಂಜುನಾಥ ತಳವಾರ ಸೇರಿದಂತೆ ಜಿಲ್ಲೆಯ ಪೊಲೀಸ್ ಸಿಬ್ಬಂದಿ ಕಂಬನಿ ಮಿಡಿದಿದ್ದಾರೆ. ನಗರದ ಪಟ್ಟಣ ಪೊಲೀಸ್ ಠಾಣೆಯ ಕ್ವಾರ್ಟಸ್‌ನಲ್ಲಿ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿತ್ತು. ದಾಸರಹಳ್ಳಿ ತಾಂಡಾದಲ್ಲಿ ಸಕಲ ಸರ್ಕಾರಿ ಗೌರವದೊಂದಿಗೆ ಅಂತ್ಯಕ್ರಿಯೆ ನೆರವೇರಿಸಲಾಯಿತು.

### ಬಳ್ಳಾರಿಯಲ್ಲಿ ಸಂಭ್ರಮದ ಹೇಮರೆಡ್ಡಿ ಮಲ್ಲಮ್ಮ ಜಯಂತ್ಯೋತ್ಸವ

# ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಅವರ ಆದರ್ಶ ತತ್ವಗಳನ್ನು ಪಾಲಿಸೋಣ: ವೈ.ಎಂ.ಸತೀಶ್





ಬಳ್ಳಾರಿ,ಮೇ 10–ಹೇಮರೆಡ್ಡಿ ಮಲ್ಲಮ್ಮ ಸಾಕ್ಷಾತ್ ಶ್ರೀಶೈಲ ಮಲ್ಲಿಕಾರ್ಜುನನ ಅನುಗ್ರಹಕ್ಕೆ ಪಾತ್ರಳಾದವರು ಸಮಸ್ತ ರೆಡ್ಡಿ ಕುಲದಧರ್ಮ ಉದ್ಧಾರಮಾಡಲು ಅವತರಿಸಿದ ಶರಣೆ ಹೇಮರೆಡ್ಡಿ ಮಲ್ಲಮ್ಮ ಅವರ ಮೌಲ್ಯ ಮತ್ತು ತತ್ವಗಳ ಮಾರ್ಗದರ್ಶನದಲ್ಲಿ ಸಾಗೋಣ ಎಂದು ವಿಧಾನಪರಿಷತ್ ಸದಸ್ಯರಾದ ವೈ.ಎಂ.ಸತೀಶ್ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಪಾರ್ವತಿ ನಗರ ಬಡಾವಣೆಯ ಬಸವ ಭವನ ವೇದಿಕೆ ಸಭಾಂಗಣದಲ್ಲಿ ಶನಿವಾರ ಆಯೋಜಿಸಲಾಗಿದ್ದ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮವನ್ನು ಹೇಮರೆಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಶ್ರೀಶೈಲ ಮಲ್ಲಿಕಾರ್ಜುನನನ್ನು ಆರಾಧ್ಯ ದೈವವಾಗಿ ಸ್ವೀಕರಿಸಿ, ಸಾಕ್ಷಾತ್ಕರಿಸಿಕೊಂಡ ಸಾಧ್ವಿ ಮಲ್ಲಮ್ಮ ವೇಮನ ಮಹಾಯೋಗಿಯಾಗಿ ಬದಲಾಗಲು ಪ್ರೇರಣೆಯಾದವರು ಎಂದು ಹೇಳಿದರು.

ವೀರಶೈವ ಲಿಂಗಾಯತ ರೆಡ್ಡಿ ಸಮಾಜದ ಅಧ್ಯಕ್ಷ ಡಾ.ಎಸ್.ಜೆ.ವಿ.ಮಹಿಪಾಲ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಮಹಾಸಾಧ್ವಿಯಾದ ಹೇಮರೆಡ್ಡಿ ಮಲ್ಲಮ್ಮ ಎಲ್ಲರಿಗೂ ಆದರ್ಶ ಮಹಿಳೆಯಾಗಿದ್ದು, ಭಕ್ತಿ ಮಾರ್ಗದ ಮೂಲಕ ಶ್ರೀಶೈಲ ಮಲ್ಲಿಕಾರ್ಜುನ ದೇವರ ಮಹಿಮೆ ನಾಡಿಗೆ ಸಾರಿದ್ದಾರೆ. ಇಂದಿಗೂ ಕೂಡ ಆಂದ್ರಪ್ರದೇಶದ ಶ್ರೀಶೈಲ ಕ್ಷೇತ್ರದಲ್ಲಿ ಕಣ್ಣಿರು ಎಂಬ ಸ್ಥಳದಲ್ಲಿ ಹೇಮರೆಡ್ಡಿ ಮಲ್ಲಮ್ಮ ಅವರ ದೇವಸ್ಥಾನವನ್ನು ನೋಡಬಹುದು ಎಂದರು.

ಕೊಟ್ಟೂರು ಸ್ವಾಮಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯದ ನಿವೃತ್ತ ಅಧ್ಯಾಪಕಿ ಸುಶೀಲ ಸಿರೂರು ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, 15ನೇ ಶತಮಾನದ ಪ್ರಸಿದ್ಧ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಜನಮಾನಸದಲ್ಲಿ ತನ್ನ ಭಕ್ತಿ ಹಾಗೂ ಕಾಯಕದಿಂದ ಮನೆಮಾತಾಗಿದ್ದಾರೆ. ಕೌಟುಂಬಿಕ ಸಂಕಷ್ಟಗಳನ್ನು ಮೆಟ್ಟಿ ನಿಂತು, ಆದರ್ಶ ಮೌಲ್ಯಗಳನ್ನು ಬದುಕಿನಲ್ಲಿ ರೂಢಿಸಿಕೊಂಡು ಸಾಮಾಜಿಕ ಹಾಗೂ ಧಾರ್ಮಿಕ ಚಿಂತನೆಯಲ್ಲಿ ಸಾಧನೆಗೈದ ಮಹಾಶಿವಶರಣೆ ಹೇಮರೆಡ್ಡಿ ಮಲ್ಲಮ್ಮ ಸ್ತ್ರೀ ಕುಲಕ್ಕೆ ಮಾದರಿ. ಹೇಮರೆಡ್ಡಿ ಮಲ್ಲಮ್ಮನ ಪವಾಡ ಹಾಗೂ ಭಕ್ತಿಯ ಕುರಿತು ಹಲವು ಪ್ರತೀತಿ ಹಾಗೂ ಕಥನಗಳಿವೆ.

ಸಂತ ಶಿಶುನಾಳ ಶರೀಫರು ಹೇಮರೆಡ್ಡಿ ಮಲ್ಲಮ್ಮಳನ್ನು ರೆಡ್ಡಿ ಕುಲದ ಉದ್ಧಾರಕಳು ಎಂದು ಬಣ್ಣಿಸಿದ್ದಾರೆ.

ಹೇಮರೆಡ್ಡಿ ಮಲ್ಲಮ್ಮ ಅವರು ಆಂದ್ರಪ್ರದೇಶದ ಶ್ರೀಶೈಲದ ದಕ್ಷಿಣ ದಿಕ್ಕಿನಲ್ಲಿರುವ ವೆಲ್ಲಟೂರು ಬಳಿಯ ರಾಮಪುರ ಗ್ರಾಮದ ಸುಸಂಸ್ಕೃತ ಮನೆತನದ ರಾಮರೆಡ್ಡಿ ಹಾಗೂ ಗೌರಮ್ಮ ದಂಪತಿಗಳಿಗೆ ಮಗಳಾಗಿ ಜನಿಸಿದರು. ಚಿಕ್ಕಂದಿನಿಂದಲೂ ಶಿವಭಕ್ತೆಯಾದ ಮಲ್ಲಮ್ಮ ತನ್ನ ಹದಿನಾರನೆ ವಯಸ್ಸಿಗೆ ಸಿದ್ದಾಪುರ ಸಂಸ್ಥಾನದ ಒಡೆಯ ಹೇಮರೆಡ್ಡಿ ಅವರ ಮೂರನೆ ಮಗ ಭರಮರೆಡ್ಡಿಯನ್ನು ಮದುವೆಯಾದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಬಳ್ಳಾರಿಯ ವಿ.ಎಂ.ವೀರಭದ್ರಯ್ಯ ತಂಡದಿಂದ ವಚನ ಸಂಗೀತ ಪ್ರಸ್ತುತ ಪಡಿಸಿದರು.

ಇದೇ ವೇಳೆ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ಸಮಾಜದ ಮುಖಂಡರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್, ಮಹಾನಗರ ಪಾಲಿಕೆಯ ಸದಸ್ಯರಾದ ಸುರೇಖಾ ಮಲ್ಲನಗೌಡ, ಸಹಾಯಕ ಆಯುಕ್ತ ಪಿ.ಪ್ರಮೋದ್ ಸೇರಿದಂತೆ ಸಮಾಜದ ಮುಖಂಡರು, ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

*ಸಂಭ್ರಮದ ಮೆರವಣಿಗೆ:*

ಹೇಮರೆಡ್ಡಿ ಮಲ್ಲಮ್ಮ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್ ಅವರು ಹೇಮರೆಡ್ಡಿ ಮಲ್ಲಮ್ಮ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಗಮನ ಸೆಳೆದವು.

ಮೆರವಣಿಗೆಯು ನಗರದ ಶ್ರೀ ಕನಕದುರ್ಗಮ್ಮ ದೇವಸ್ಥಾನದಿಂದ ಆರಂಭವಾಗಿ ಎಸ್‌ಪಿ ಸರ್ಕಲ್ ಮೂಲಕ ಬಸವ ಭವನದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.

## ದುರ್ಗಾದೇವಿಯ ನೂತನ ದೇವಸ್ಥಾನ ಹಾಗೂ ಮೂರ್ತಿ ಪ್ರಾಣ ಪ್ರತಿಷ್ಠಾಪನೆ





ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಶುಕ್ರವಾರ ರಂದು ಹಣವಾಳ ಗ್ರಾಮದಲ್ಲಿ ನಡೆದ ಶ್ರೀ ದುರ್ಗಾದೇವಿಯ ನೂತನ ದೇವಸ್ಥಾನದ ಉದ್ಘಾಟನೆ ಮತ್ತು ಶ್ರೀ ದುರ್ಗಾದೇವಿ ನೂತನ ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಕಾರ್ಯಕ್ರಮವು ಧಾರ್ಮಿಕ ವಿಧಿ ವಿಧಾನಗಳ ಪೂಜೆಯೊಂದಿಗೆ ವಿಜೃಂಭಣೆಯಿಂದ ನೆರವೇರಿತು.

ಕಾರ್ಯಕ್ರಮದ ಅಂಗವಾಗಿ 10ನೇ ತರಗತಿ ಮತ್ತು ದ್ವಿತೀಯ ಪಿಯುಸಿಯಲ್ಲಿ ಅತಿ ಹೆಚ್ಚಿನ ಅಂಕ ಪಡೆದ ಹಣವಾಳ ಗ್ರಾಮದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಕರುನಾಡು ಯುವ ಪಡೆಯ ವೇದಿಕೆಯ ಜಿಲ್ಲಾಧ್ಯಕ್ಷರಾದ ಫಕೀರೇಶ ಕೆ. ಬಾರಕೇರ ಮತ್ತು ಗ್ರಾಮ ಪಂಚಾಯತಿಯ ಸದಸ್ಯರು, ಗ್ರಾಮದ ಮುಖಂಡರು, ಯುವಕ ಮಿತ್ರರು ಹಾಗೂ ಊರಿನ ಗುರುಹಿರಿಯರು ಉಪಸ್ಥಿತರಿದ್ದರು..

## ಮಹಿಳೆಯರಿಗೆ ಸ್ತ್ರೀ ಚೇತನ ಅಭಿಯಾನದಡಿ ನಿರಂತರ ಕೆಲಸ : ಪಿಡಿಓ ರಮೇಶ್ ತಿಮ್ಮಾರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ

ಕುಕನೂರ : ತಾಲೂಕಿನ ಭಾನಾಪೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ಲಕಮಾಪೂರ ಗ್ರಾಮದಲ್ಲಿ ಇಂದು ಸ್ತ್ರೀ ಚೇತನ ಹಾಗೂ ದುಡಿಯೋಣ ಬಾ ಅಭಿಯಾನವನ್ನು ಆಯೋಜಿಸಲಾಗಿತ್ತು. ಕಾಮಗಾರಿ ಸ್ಥಳದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಮೇಶ್ ತಿಮ್ಮಾರೆಡ್ಡಿ ಮಾತನಾಡಿ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ, ಮಹಿಳಾ ಕೂಲಿಕಾರರಿಗೆ ಸ್ತ್ರೀ ಚೇತನ, ದುಡಿಯೋಣ ಬಾ ಕಾರ್ಯಕ್ರಮದಡಿ ನಿರಂತರ ಕೆಲಸ ನೀಡುತ್ತಿದ್ದು ಇದನ್ನು ಸದುಪಯೋಗಪಡಿಸಿಕೊಳ್ಳಬೇಕು, ಅದರಂತೆ ನಿಗದಿತ ಅಳತೆಯನ್ನು ಕಾಮಗಾರಿಗಳಲ್ಲಿ ನಿರ್ವಹಿಸಬೇಕು, ಅಂದಾಗ ಮಾತ್ರ ಪೂರ್ತಿ ಕೂಲಿ ರೂ.370/– ಸಿಗುತ್ತದೆ ಎಂದರು.

ನಂತರ ತಾಲೂಕ ಐ.ಇ.ಸಿ ಸಂಯೋಜಕ ಲಕ್ಷ್ಮಣ ಕೆರಳ್ಳಿ ಮಾತನಾಡಿ PMSBY, PMJJBY, APY, PM-SYMDY ಯೋಜನೆಯಡಿ ನೊಂದಣಿ ಮಾಡಿಕೊಳ್ಳಲು ಸೂಚಿಸಿದರು. ಸ್ಥಳದಲ್ಲಿ ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಬಸವರಾಜ, ಮರ್ತುಜಾ, ಕಾಯಕ ಬಂಧುಗಳು, ಕೂಲಿಕಾರರು

## ಅತಿಥಿ ಉಪನ್ಯಾಸಕ ಮತ್ತು ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : 2025–26ನೇ ಸಾಲಿಗೆ ಕೊಪ್ಪಳ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ವಸತಿ ಕಾಲೇಜು, ಮೌಲಾನಾ ಆಜಾದ್ ಮಾದರಿ ಶಾಲೆ ಮತ್ತು ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕ, ಶಿಕ್ಷಕರ ತಾತ್ಕಾಲಿಕ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ಕೊಪ್ಪಳ, ಗಂಗಾವತಿ, ಯಲಬುರ್ಗಾ, ಕುಷ್ಟಗಿ, ಕನಕಗಿರಿ, ಕಾರಟಗಿ ಮತ್ತು ಕುಕನೂರು ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ, ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಪದವಿ ಪೂರ್ವ ವಸತಿ ಕಾಲೇಜು, ಮೌಲಾನಾ ಆಜಾದ್ ಮಾದರಿ ಶಾಲೆ ಹಾಗೂ ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರು ಮತ್ತು ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರು ಹಾಗೂ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುತ್ತಿದ್ದು, ಆಸಕ್ತ ಅಭ್ಯರ್ಥಿಗಳು ವೆಬ್‌ಸೈಟ್‌ಃಣಣಠಿ:// ಜಠಟ.ಞಚಿಡಿಟಿಚಿಣಚಿಞಚಿ. ರಠಿ.ಟಿ ನಲ್ಲಿ ಅಥವಾ ಶಾಲೆ, ಕಾಲೇಜುಗಳಿಗೆ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಾಹಿತಿ ಕೇಂದ್ರ ಹಾಗೂ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಭೇಟಿ ನೀಡಿ ಅರ್ಜಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ, ಕೊಪ್ಪಳ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಕಛೇರಿ ವೇಳೆಯಲ್ಲಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹತ್ತಿರ ವಸತಿ ಶಾಲೆ, ಕಾಲೇಜು ಅಥವಾ ಮೌಲಾನಾ ಆಜಾದ್ ಶಾಲೆ, ಕಾಲೇಜುಗಳಿಗೆ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಮಾಹಿತಿ ಕೇಂದ್ರ ಮತ್ತು ಕೊಪ್ಪಳ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಮೌಲಾನಾ ಆಜಾದ್ ಭವನದ ದೂರವಾಣಿ ಸಂಖ್ಯೆ: 08539–225070, ಕುಷ್ಟಗಿ ಮತ್ತು ಕೊಪ್ಪಳ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರದ ಮೊ.ನಂ. 9738467445, ಗಂಗಾವತಿ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ದೂರವಾಣಿ ಸಂಖ್ಯೆ: 9740346533, ಯಲಬುರ್ಗಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮೊ.ನಂ. 9611419830ಗೆ ಸಂಪರ್ಕಿಸುವಂತೆ ಕೊಪ್ಪಳ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ್ಞಾನಜ್ಯೋತಿ ಶಾಲೆಯು ಹೆಮ್ಮರವಾಗಿ ಬೆಳೆಯಲಿ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ: ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುತ್ತಾ ಕಲ್ಯಾಣ ಕರ್ನಾಟಕ ಭಾಗದಲ್ಲಿಯೇ ಜ್ಞಾನಜ್ಯೋತಿ ಶಾಲೆಯು ಹೆಮ್ಮರವಾಗಿ ಬೆಳೆಯಲಿ ಎಂದು ಪೂಜ್ಯ ಷ.ಬ್ರ.ಶಾಂತಮಲ್ಲಿಕಾರ್ಜುನ ಪಂಡಿತಾರಾಧ್ಯರು ಶಿವಾಚಾರ್ಯ ಹೆಡಗಿಮದ್ರಿ ತಿಳಿಸಿದರು.

ನಗರದ ಹೊಸ ತಹಶೀಲ ಹಿಂದುಗಡೆ ಬಾಪುಗೌಡ ನಗರದಲ್ಲಿ ಶ್ರೀ ಗುರುಸಿದ್ಧರಾಮೇಶ್ವರ ಎಜ್ಯೂಕೇಶನ್ ಟ್ರಸ್ಟ್ ವತಿಯಿಂದ ನಡೆಯುತ್ತಿರುವ ಜ್ಞಾನಜ್ಯೋತಿ ಆಂಗ್ಲ ಮಾಧ್ಯಮ ಶಾಲೆಯ ನೂತನ ಭವ್ಯ ಕಟ್ಟಡ ಉದ್ಘಾಟನೆಯ ಸಂದರ್ಭದಲ್ಲಿ ಪಾಲ್ಗೊಂಡು ಆಶೀರ್ವಚನ ನೀಡಿದ ಪೂಜ್ಯರು ಹಣಮಂತ್ರಾಯಗೌಡ ಮಾಲಿಪಾಟೀಲ್ ಹಾಗೂ ಭೀಮನಗೌಡ ಪಾಟೀಲ ಅವರ ಅವಿರತ ಪರಿಶ್ರಮದಿಂದ ಇಂದು ಶಾಲೆಯು ಉನ್ನತಮಟ್ಟದಲ್ಲಿ ಬೆಳೆಯುತ್ತಿರುವುದು ಹೆಮ್ಮೆಯ ಸಂಗತಿ ಎಂದು ಈ ಸಂದರ್ಭದಲ್ಲಿ ಷ.ಬ್ರ.ಸೂಗೂರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ವೇ.ಮೂ.ಬಸವಯ್ಯ ಶರಣರು, ಸಾಥಖೇಡದ ಪೂಜ್ಯ ಶ್ರೀ ಈರಣ್ಣಮುತ್ಯ ಸಾಥಖೇಡ, ಸಾನಿಧ್ಯವಹಿದ್ದರು. ಪ್ರಮುಖರಾದ ಮಾಜಿ ಶಾಸಕ ದೊಡ್ಡಪ್ಪಗೌಡ ನರಬೋಳ, ಮಲ್ಲಿನಾಥಗೌಡ ಪಾಟೀಲ ಯಲಗೋಡ, ಶಿವರಾಜ ರದ್ದೆವಾಡಿಗಿ, ವಿಶ್ವನಾಥರೆಡ್ಡಿ ದರ್ಶನಾಪುರ, ಆರ್.ಚನ್ನಬಸ್ಸು ವನದುರ್ಗ, ಸೇರಿದಂತೆ ಅಪಾರ ಸಂಖ್ಯೆಯ ಪಾಲಕರು, ನಗರದ ಗಣ್ಯರು, ಖಾಸಗಿ ಶಾಲೆಯ ಮುಖ್ಯಸ್ಥರು ಪಾಲ್ಗೊಂಡು ಶುಭಹಾರೈಸಿದರು.

### CEPMIZ ಯೋಜನೆಯಡಿ ಸಮುದಾಯ ಸಹಭಾಗಿತ್ವ ಕಾರ್ಯಕ್ರಮ

## ಗಣಿಬಾಧಿತ ವಲಯ ಪ್ರದೇಶಗಳ ಮಣ್ಣು, ನೀರಿನ ಸಂರಕ್ಷಣೆ ಅಗತ್ಯ: ಮಂಜುನಾಥ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 10–ಗಣಿಬಾಧಿತ ವಲಯ ಪ್ರದೇಶದ ರೈತರಿಗೆ ತಮ್ಮ ತಮ್ಮ ಜಮೀನುಗಳಲ್ಲಿ ಯಾವ ರೀತಿಯಾಗಿ ಮಣ್ಣು ಮತ್ತು ನೀರಿನ ಸಂರಕ್ಷಣೆ ಮಾಡಬೇಕು, ಸಂರಕ್ಷಣೆಯನ್ನು ಮಾಡಲು ಯಾವ ರೀತಿಯಾಗಿ ಉಪಚಾರ ಕೈಗೊಳ್ಳಬೇಕು ಎಂಬುದರ ಬಗ್ಗೆ ತಿಳಿಸಿಕೊಡುವುದು ಗಣಿಗಾರಿಕೆ ಪ್ರಭಾವಿತ ವಲಯಗಳ ಸಮಗ್ರ ಪರಿಸರ ಯೋಜನೆಯ ಉದ್ದೇಶವಾಗಿದೆ ಎಂದು ಉಪ ಕೃಷಿ ನಿರ್ದೇಶಕ ಮಂಜುನಾಥ್ ಅವರು ಹೇಳಿದರು.

ಜಲಾನಯನ ಅಭಿವೃದ್ಧಿ ಇಲಾಖೆ, ಕೃಷಿ ಇಲಾಖೆ ಬಳ್ಳಾರಿ ಹಾಗೂ ಗ್ರಾಮ್ಸ್ ಲಿಂಗಸೂಗೂರು ಅನುಷ್ಠಾನ ಸಂಸ್ಥೆಯ ವತಿಯಿಂದ ಗಣಿಗಾರಿಕೆ ಪ್ರಭಾವಕ್ಕೆ ಒಳಗಾದ ವಲಯಗಳಿಗೆ ಸಮಗ್ರ ಪರಿಸರ ಯೋಜನೆ (ಅಇಕಒಖಚ) ಅಡಿ ಬಳ್ಳಾರಿ ತಾಲೂಕಿನ ಹಲಕುಂದಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಹೊನ್ನಾಳಿ ತಾಂಡದಲ್ಲಿ ಗುರುವಾರ ಏರ್ಪಡಿಸಿದ್ದ ಸಮುದಾಯ ಸಹಭಾಗಿತ್ವ ಕಾರ್ಯಕ್ರಮ (ಆರ್) ದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಈ ಯೋಜನೆಯು ಗಣಿಗಾರಿಕೆ ಪರಿಣಾಮ ವಲಯಕ್ಕೆ ರಾಜ್ಯದ ನಾಲ್ಕು ಜಿಲ್ಲೆಗಳು ಮೊದಲನೇ ಹಂತದಲ್ಲಿ ಆಯ್ಕೆಯಾಗಿದ್ದು, ಅದರಲ್ಲಿ ಬಳ್ಳಾರಿ ಜಿಲ್ಲೆಯು ಕೂಡ ಒಂದಾಗಿದೆ. ಈ ಯೋಜನೆಯು ಐದು ವರ್ಷದ ಅವಧಿಗೆ ಅನುಷ್ಠಾನ ಮಾಡಲಾಗುವುದು ಎಂದು ತಿಳಿಸಿದರು.

ಈ ಯೋಜನೆಯಡಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ತಮ್ಮ ಮನೆಗಳಿಗೆ ಖುದ್ದಾಗಿ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿ ಅಗತ್ಯವಿರುವ ಮಾಹಿತಿಯ ದಾಖಲೆಗಳನ್ನು ಪಡೆದುಕೊಳ್ಳಲು ಸಮೀಕ್ಷೆ ಮಾಡಲಾಗುತ್ತದೆ. ಹಾಗಾಗಿ ಗ್ರಾಮದ ಎಲ್ಲಾ ರೈತರು ಸರಿಯಾಗಿ ಮಾಹಿತಿ ಕೊಡಬೇಕು ಎಂದು ಹೇಳಿದರು.

ಸಹಾಯಕ ಕೃಷಿ ನಿರ್ದೇಶಕ ದಯಾನಂದ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಗಣಿಬಾಧಿತ ಪ್ರದೇಶದಲ್ಲಿ ನಾಶವಾಗಿರುವ ಮೇಲ್ಮಣ್ಣನ್ನು ಪುನರ್ ಸ್ಥಾಪಿಸಿ ಮಣ್ಣು ಮತ್ತು ನೀರಿನ ಸಂರಕ್ಷಣೆ ಮೂಲಕ ಮಣ್ಣಿನ ಫಲವತ್ತತೆಯನ್ನು ಪುನರುಜ್ಜೀವನಗೊಳಿಸಿ ವ್ಯವಸಾಯಕ್ಕೆ ಯೋಗ್ಯವನ್ನಾಗಿಸುವ ಮೂಲಕ ರೈತರಲ್ಲಿ ಸಾಮಾಜಿಕ ಮತ್ತು ಆರ್ಥಿಕ ಸುಸ್ಥಿರತೆಯನ್ನು ಪಡೆಯಲು ಈ ಯೋಜನೆ ಅನುಷ್ಠಾನವಾಗುತ್ತಿದೆ ಎಂದು ತಿಳಿಸಿದರು.

ಗ್ರಾಮ್ಸ್ ಸಂಸ್ಥೆಯ ಸಿಇಓ ಮಹೇಶ್ ಕುಮಾರ್ ಅವರು ಮಾತನಾಡಿ, ಯೋಜನಾ ವ್ಯಾಪ್ತಿಯ ಗ್ರಾಮಗಳ ರೈತರಿಗೆ ತಮ್ಮ ತಮ್ಮ ಜಮೀನುಗಳಲ್ಲಿ ಯಾವ ರೀತಿಯಾಗಿ ಮಣ್ಣು ಮತ್ತು ನೀರಿನ ಸಂರಕ್ಷಣೆಯನ್ನು ಮಾಡಿಕೊಳ್ಳಬೇಕು, ಸಂರಕ್ಷಣೆಯನ್ನು ಮಾಡಲು ಯಾವ ರೀತಿಯಾಗಿ ಉಪಚಾರಗಳನ್ನು ಮಾಡಬೇಕು ಎಂದು ತಿಳಿಸಿಕೊಡಲಾಗುವುದು ಎಂದರು.

ಈ ಯೋಜನೆಯಡಿ ಕಾರ್ಯನಿರ್ವಹಿಸುವ ಸಿಬ್ಬಂದಿಗಳು ತಮ್ಮ ಜಮೀನುಗಳಿಗೆ ಖುದ್ದಾಗಿ ಭೇಟಿ ನೀಡಿ ರೈತರೊಂದಿಗೆ ಚರ್ಚಿಸಿ ಅಗತ್ಯವಿರುವ ಮತ್ತು ಜಮೀನಿಗೆ ಸೂಕ್ತವೆನಿಸುವ ಮಣ್ಣು ಮತ್ತು ನೀರಿನ ಸಂರಕ್ಷಣೆ ಉಪಚಾರ, ತೋಟಗಾರಿಕೆ, ಅರಣ್ಯೀಕರಣ, ಜೀವನೋಪಾಯ ಚಟುವಟಿಕೆಗಳ ಮಾಹಿತಿ ನೀಡುವರು ಎಂದರು.

ರೈತರಿಗೆ ತಿಳಿಸಿದಂತಹ ಉಪಚಾರಗಳನ್ನು ಯೋಜನಾ ವಿಸ್ತೃತ ವರದಿಯಲ್ಲಿ ನಿಯಮಾನುಸಾರ ನಮೂದಿಸಿ, ಜಿಲ್ಲಾ ಮಟ್ಟದ ಸಭೆಯಲ್ಲಿ ಅನುಮೋದನೆ ಪಡೆದು ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗುತ್ತದೆ. ಈ ಯೋಜನೆಯನ್ನು ಉಚ್ಚ ನ್ಯಾಯಾಲಯ ನಿರ್ದೇಶನದ ಮೇರೆಗೆ ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ ನಿರ್ದೇಶನ ಮತ್ತು ಮಾರ್ಗದರ್ಶನದಲ್ಲಿ ಅನುಷ್ಠಾನವಾಗುತ್ತದೆ ಎಂದು ನಕ್ಷೆಯ ಮೂಲಕ ಗ್ರಾಮಸ್ಥರಿಗೆ ಮನ ಮುಟ್ಟುವಂತೆ ತಿಳಿಸಿದರು.

ಈ ಸಂದರ್ಭದಲ್ಲಿ ತೇರಿ ಸಂಸ್ಥೆಯ ವಿಜಯ ಮೇಟಿ, ಕ್ಷೇತ್ರದ ಜಿಲ್ಲಾ ತಂಡದ ನಾಯಕರಾದ ಅಶ್ವಿನಿ, ಗ್ರಾಮ ಪಂಚಾಯಿತಿ ಸದಸ್ಯರಾದ ನಿರ್ಮಲ ಬಾಯಿ, ರಮೇಶ್ ನಾಯಕ್, ರವಿನಾಯಕ್, ಕೃಷಿ ಅಧಿಕಾರಿಗಳಾದ ಲೋಕರಾಜ್, ಬಸವರಾಜ್ ಸೇರಿದಂತೆ ಸಾರ್ವಜನಿಕರು ಹಾಜರಿದ್ದರು.

ಜಾನೆಕುಂಟೆ–ವೇಣಿ ವೀರಾಪುರ ಯೋಜನೆಯ ತಂಡದ ನಾಯಕರಾದ ವೀಣಾ ಅವರು ಕಾರ್ಯಕ್ರಮ ನಿರೂಪಿಸಿದರು. ಹಲಕುಂದಿ ಬೆಳಗಲ್ಲು ಯೋಜನೆಯ ತಂಡದ ನಾಯಕರಾದ ಅಶ್ವಿನಿ ಅವರು ಸ್ವಾಗತ ಮತ್ತು ವಂದನಾರ್ಪಣೆ ನೆರವೇರಿಸಿದರು.

# ವೃತ್ತಿಪರ ತರಬೇತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮೇ 10– ಕರ್ನಾಟಕ ರಾಜ್ಯ ಶಿಶುಕಲ್ಯಾಣ ಸಂಸ್ಥೆಯು ಗ್ರಾಮೀಣ ಹಾಗೂ ನಗರ ಪ್ರದೇಶದ ಆರ್ಥಿಕವಾಗಿ ಹಿಂದುಳಿದ ಯುವತಿಯರಿಗೆ / ಮಹಿಳೆಯರಿಗೆ ವೃತ್ತಿಪರ ತರಬೇತಿ ನೀಡುತ್ತಿರುವ 2025 ನೇ ಸಾಲಿನ ವೃತ್ತಿಪರ ತರಬೇತಿಗೆ ಅರ್ಜಿಯನ್ನು ಆಹ್ವಾನಿಸಿದೆ.

ಎಸ್.ಎಸ್.ಎಲ್.ಸಿ./ಪಿಯುಸಿ ಪಾಸ್ ಅಥವಾ ಫೇಲ್ ಆದ 17 ರಿಂದ 35 ವರ್ಷದೊಳಗಿನ ಯುವತಿಯರು ಅರ್ಜಿ ಸಲ್ಲಿಸಬಹುದಾಗಿದ್ದು, ಅರ್ಜಿ ಸಲ್ಲಿಸಲು ಮೇ 31 ಕೊನೆಯ ದಿನಾಂಕವಾಗಿದೆ. ತರಬೇತಿ ಪಡೆದ ಅಭ್ಯರ್ಥಿಗಳು ಬಾಲವಾಡಿ, ಶಿಶುವಿಹಾರ, ಹಗಲು ಪೋಷಣಾ ಕೇಂದ್ರ, ವಿಶೇಷ ಮಕ್ಕಳ ಶಾಲೆ, ಗಾರ್ಮೆಂಟ್ಸ್ ಕಂಪೆನಿಗಳಲ್ಲಿ ಹಾಗೂ ಸರ್ಕಾರೇತರ ಸಂಘ ಸಂಸ್ಥೆಗಳಲ್ಲಿ ಶಾಲಾಪೂರ್ವ ಶಿಕ್ಷಕಿಯಾಗಿ ಕೆಲಸ ಮಾಡಲು ಅರ್ಹರಾಗುತ್ತಾರೆ. ಜೂನ್ 10 ರಿಂದ ಬೆಂಗಳೂರಿನ ಜಯಮಹಲ್ ಬಡಾವಣೆಯ ಬಾಲಸೇವಿಕಾ ತರಬೇತಿ ಕೇಂದ್ರದಲ್ಲಿ ತರಬೇತಿ ಆರಂಭವಾಗಲಿದೆ. ತರಬೇತಿಯು ಸಂಪೂರ್ಣ ಉಚಿತವಾಗಿದ್ದು, ಅವಶ್ಯಕತೆ ಇರುವವರಿಗೆ, ಉಚಿತ ವಸತಿ ಮತ್ತು ಊಟದ ಸೌಲಭ್ಯವಿದೆ. ಅಭ್ಯರ್ಥಿಗಳಿಗೆ ವಿಶೇಷ ವಿದ್ಯಾರ್ಥಿ ವೇತನವಿರುತ್ತದೆ.

ತರಬೇತಿ ಅವಧಿಯು 10 ತಿಂಗಳಾಗಿದ್ದು, ತರಬೇತಿಯು 2025 ನೇ ಜೂನ್ 10 ರಿಂದ ಪ್ರಾರಂಭವಾಗಲಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080–22925898 ಹಾಗೂ ಕರ್ನಾಟಕ ರಾಜ್ಯ ಶಿಶುಕಲ್ಯಾಣ ಸಂಸ್ಥೆ, ಬಾಲಸೇವಿಕಾ ತರಬೇತಿ ಕೇಂದ್ರ, ನಂ.135, 3ನೇ ಅಡ್ಡರಸ್ತೆ, ನಂದಿದುರ್ಗ ರಸ್ತೆ, ಜಯಮಹಲ್ ಬಡಾವಣೆ, ಬೆಂಗಳೂರು–46 ಗೆ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಟಿಕೇಟ್ ಇಲ್ಲದೆ ಪ್ರಯಾಣಿಸಿದ 3780 ಪ್ರಯಾಣಿಕರಿಗೆ ದಂಡ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು,ಮೇ10–ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು ಏಪ್ರಿಲ್–2025 ರ ಮಾಹೆಯಲ್ಲಿ ತನ್ನ ತನಿಖಾ ತಂಡಗಳಿಂದ ತಪಾಸಣಾ ಕಾರ್ಯವನ್ನು ಚುರುಕುಗೊಳಿಸಿ ನಿಗಮದ ವ್ಯಾಪ್ತಿಯಲ್ಲಿ ಸಂಚರಿಸುವ 43,244 ವಾಹನಗಳನ್ನು ತನಿಖೆಗೊಳಪಡಿಸಿ 3,882 ಪ್ರಕರಣಗಳನ್ನು ಪತ್ತೆಹಚ್ಚಿ, 3,780 ಟಿಕೇಟ್ ರಹಿತ ಪ್ರಯಾಣಿಕರಿಂದ 7,32,495/–ರೂಗಳನ್ನು ದಂಡದ ರೂಪದಲ್ಲಿ ವಸೂಲಿ ಮಾಡಿದ್ದಾರೆ.

ನಿಗಮದ ಆದಾಯದಲ್ಲಿ ಸೋರಿಕೆ ಆಗುತ್ತಿದ್ದ 97,576/– ರೂಗಳನ್ನು ತನಿಖಾಧಿಕಾರಿಗಳು ಪತ್ತೆಹಚ್ಚಿದ್ದಾರೆ, ಹಾಗೂ ತಪ್ಪಿತಸ್ಥರ ವಿರುದ್ಧ ಇಲಾಖಾ ರೀತ್ಯಾ ಸೂಕ್ತ ಶಿಸ್ತಿನ ಕ್ರಮವನ್ನು ಜರುಗಿಸಲಾಗಿದೆ. ಆದ್ದರಿಂದ ಸಾರ್ವಜನಿಕ ಪ್ರಯಾಣಿಕರು, ಬಸ್ಸಿನಲ್ಲಿ ಪ್ರಯಾಣಿಸುವಾಗ ಸರಿಯಾದ ಟಿಕೇಟ್/ಪಾಸ್ ಪಡೆದು ಪ್ರಯಾಣ ಮಾಡುವಂತೆ, ನಿಗಮವು ಈ ಮೂಲಕ ಪ್ರಯಾಣಿಕರಲ್ಲಿ ಮನವಿ ಮಾಡಿದೆ.

# ಹೇಮರಡ್ಡಿ ಮಲ್ಲಮ್ಮಳದು ಪ್ರೇಮಭಾವ:ಸಂಗಮೇಶ ದೇವರು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.10:ಸಂತರು, ಶರಣರು ಪ್ರೇಮಭಾವದಿಂದ ಬದುಕಿ ಬಾಳಿದ್ದರಿಂದಲೇ ಅವರು ದೇವಸ್ವರೂಪಿಗಳಾಗಿ ಇಂದಿಗೂ ಸ್ಮರಣೆಯಲ್ಲಿದ್ದಾರೆ ಎಂದು ವಿಜಯಪುರದ ಜ್ಞಾನಯೋಗಾಶ್ರಮದ ಸಂಗಮೇಶದೇವರು ಹೇಳಿದ್ದಾರೆ. ಸಮೀಪದ ಬೆನಕಟ್ಟಿ ಗ್ರಾಮದಲ್ಲಿ ಹೇಮರಡ್ಡಿ ಮಲ್ಲಮ್ಮ ಜಯಂತಿ ಅಂಗವಾಗಿ ಶುಕ್ರವಾರ ಸಂಜೆ ಹಮ್ಮಿಕೊಂಡಿದ್ದ ಜ್ಞಾನದಾಸೋಹ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಹಾತ್ಮರು, ಸಂತ ಶರಣರು ಮನುಕುಲಕ್ಕೆ ದ್ವೇಷ, ರೋಷದ ಬದುಕಿನಲ್ಲಿ ಅರ್ಥವಿಲ್ಲ ಎಂಬುದನ್ನು ತಿಳಿಸಿದರಷ್ಟೇ ಅಲ್ಲ, ಅದರಂತೆ ನಡೆದರು ಎಂದರು. ಹೇಮರಡ್ಡಿ ಮಲ್ಲಮ್ಮ ಎಂದಿಗೂ ದ್ವೇಷ ಭಾವ ತೋರಲಿಲ್ಲ. ಅವಳ ಅಂತರಂಗದಲ್ಲಿ ಪ್ರೇಮಭಾವ, ದೇವಭಾವ ತುಂಬಿತ್ತು ಎಂದ ಸಂಗಮೇಶದೇವರು, ಮಲ್ಲಮ್ಮಳ ಆದರ್ಶ ಬದುಕನ್ನು ಎಲ್ಲರೂ ಅರಿತು ನಡೆದರೆ ಸುಂದರ ಜೀವನ ಪ್ರಾಪ್ತವಾಗುತ್ತದೆ ಎಂದು ಹೇಳಿದರು.

ಪಾವನ ಸಾನಿಧ್ಯ ವಹಿಸಿದ್ದ ಆಧ್ಯಾತ್ಮಿಕ ಚಿಂತಕ ಪ್ರದೀಪ ಗುರೂಜಿ, ಹೇಮರಡ್ಡಿ ಮಲ್ಲಮ್ಮ ಭಕ್ತಿಯೋಗದ ಮಾರ್ಗದಲ್ಲಿ ಸಾಧನೆ ಮಾಡಿ ದೇವ ಸಾಕ್ಷಾತ್ಕಾರ ಪಡೆದವಳು. ಸಂಸ್ಕಾರದ ಜೀವನ ಮಾಡಿ ಎಲ್ಲರಲ್ಲೂ ದೇವರನ್ನು ಕಂಡ ಮಲ್ಲಮ್ಮಳದು ನವಯುದ ಭಕ್ತಿಯ ಜೀವನ ಎಂದ ಗುರೂಜಿ, ಅವಳ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಜಯಂತಿ ಆಚರಣೆ ಸಾರ್ಥಕ ಎಂದರು.

ಕಾರ್ಯಕ್ರಮದಲ್ಲಿ ಅನ್ನಪ್ರಸಾದ ದಾನಿಗಳಾದ ಹನಮಂತಗೌಡ ಗೆಣ್ಣೂರ, ವಿನೋದ ನಾಯಕ, ಮಂಜುನಾಥ ಯಡಹಳ್ಳಿ ಅವರನ್ನು ಸನ್ಮಾನಿಸಲಾಯಿತು. ಹೇಮರಡ್ಡಿ ಮಲ್ಲಮ್ಮ ಭಜನಾ ತಂಡದವರಿಂದ ಪ್ರಾರ್ಥನೆ. ಸುರೇಶ ಮನಗೂಳಿ ನಿರೂಪಿಸಿದರು.

# ಹೇಮರಡ್ಡಿ ಮಲ್ಲಮ್ಮ ಜಯಂತಿ-ಅದ್ದೂರಿ ಮೆರವಣಿಗೆ: ಹೇಮರಡ್ಡಿ ಮಲ್ಲಮ್ಮ ಸ್ತ್ರೀಕುಲಕ್ಕೆ ಮಾದರಿ:ಸವಿತಾ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.10–ಆದರ್ಶ ಗೃಹಿಣಿ, ಶ್ರೇಷ್ಠ ಶಿವಶರಣೆ, ತಾಳ್ಮೆ ಮತ್ತು ತ್ಯಾಗದ ಗುಣಗಳನ್ನು ಹೊಂದಿದ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಸ್ತ್ರೀಕುಲಕ್ಕೆ ಮಾದರಿಯಾಗಿದ್ದಾಳೆ ಎಂದು ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆಣ್ಣವರ ಹೇಳಿದರು.

ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ಭಾರತೀಯ ಆಧ್ಯಾತ್ಮಿಕ ಕ್ಷೇತ್ರವನ್ನು ಶ್ರೀಮಂತಗೊಳಿಸಲು ಹಾಗೂ ಸಮಾಜಕ್ಕೆ ತಮ್ಮ ಆದರ್ಶಗಳನ್ನು ತೋರಿದ ಹಲವು ಶಿವಶರಣೆಯರಲ್ಲಿ ಹೇಮರೆಡ್ಡಿ ಮಲ್ಲಮ್ಮ ಸಹ ಒಬ್ಬರಾಗಿದ್ದಾರೆ ಎಂದರು.

ವೇಮ ಎಂದರೆ ಬಂಗಾರ, ಜ್ಞಾನ, ರೆಡ್ಡಿ ಎಂದರೆ ಅನ್ನದಾತ ಹಾಗೂ ಮಲ್ಲಮ್ಮ ಎಂದರೆ ಸಂಸ್ಕೃತಿಯಾಗಿದೆ. ಮಲ್ಲಮ್ಮನಲ್ಲಿರುವ ಪರೋಪಕಾರ, ತ್ಯಾಗ, ಸಂಸ್ಕಾರ, ಗುರು–ಹಿರಿಯರ ಬಗ್ಗೆ ಅಪಾರವಾದ ಗೌರವ, ಭಕ್ತಿ ಹಾಗೂ ಸಮಾಜ ಸೇವೆಯಂತಹ ಆದರ್ಶ ಮೌಲ್ಯಗಳನ್ನು ನಾವು ಅನುಸರಿಸಿ ನಡೆಯಬೇಕು. ಅಂದಾಗ ಮಾತ್ರ ಅವರ ಜಯಂತಿ ಆಚರಿಸಿದ್ದಕ್ಕೂ ಸಾರ್ಥಕತೆ ಬರುತ್ತದೆ ಎಂದು ಸವಿತಾ ಲೆಂಕೆಣ್ಣವರ ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ, ಮಲ್ಲಮ್ಮಳ ಆದರ್ಶಗಳನ್ನು ನಾವೆಲ್ಲರೂ ಪಾಲಿಸಬೇಕು. ಸಹಣೆ, ತ್ಯಾಗ, ಅವರ ಕಾರ್ಯಕ್ರಮತೆ ಗುಣಗಳು ಎಲ್ಲ ಕಾಲದಲ್ಲಿ ಪ್ರಚಲಿತದಲ್ಲಿವೆ. ಕೆಟ್ಟವರನ್ನು ಒಳ್ಳೆಯವರನ್ನಾಗಿ ಕಂಡಾಗ ಮಾತ್ರ ಅವರನ್ನು ಸರಿದಾರಿಗೆ ತರಬಹುದಾಗಿದೆ ಎಂಬುದನ್ನು ಮಲ್ಲಮ್ಮ ತೋರಿಸಿಕೊಟ್ಟಿದ್ದಾರೆ ಎಂದರು.

ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಮಾತನಾಡಿ, ಆದರ್ಶ ವ್ಯಕ್ತಿಗಳ ಸ್ಥಾನದಲ್ಲಿ ಮಲ್ಲಮ್ಮ ಒಬ್ಬರಾಗಿದ್ದಾರೆ. ಜೀವನದ ಕಷ್ಟ, ಸುಖಗಳನ್ನು ಅನುಭವಿಸಿ ಇಡೀ ಜಗತ್ತಿಗೆ ಮಾದರಿಯಾಗಿದ್ದಾರೆ. ತಾಳ್ಮೆಗೆ ಮತ್ತೊಂದು ಹೆಸರೇ ಮಲ್ಲಮ್ಮ ಎಂದು ಹೇಳಿದರು.

ಉಪನ್ಯಾಸ ನೀಡಿದ ಮುಧೋಳ ಆರ್.ಎಂ.ಜಿ ಪಿಯು ಕಾಲೇಜಿನ ಶಿಕ್ಷಕಿ ಅನಿತಾ ಪಾಟೀಲ, ಮಲ್ಲಮ್ಮ ಜೀವನವಿಡಿ ಕಷ್ಟಗಳನ್ನುಂಡರೂ ತನಗೆ ನೋವುಂಟು ಮಾಡಿದವರ ಹಿತವನ್ನು ಬಯಸಿದವರು. ಜೋಳ ದಾನ ಮಾಡಿ ಮಣ್ಣಿನ ಕಣಗಳಿಂದ ಬೆಳೆ ಬೆಳೆದವರು ಮಲ್ಲಮ್ಮ. ಶ್ರೀಶೈಲ ಮಲ್ಲಿಕಾರ್ಜುನನನ್ನು ತನ್ನ ಆರಾಧ್ಯದೈವನಾಗಿ ಆರಾಧಿಸಿ, ಸಾಕ್ಷಾತ್ಕರಿಸಿಕೊಂಡ ಹೇಮರೆಡ್ಡಿ ಮಲ್ಲಮ್ಮ ಮೋಕ್ಷ ಪಡೆಯಲು ಲೌಕಿಕ ಪ್ರಪಂಚವನ್ನು ತ್ಯಾಗ ಮಾಡದೇ ಸಂಸಾರದಲ್ಲಿದ್ದುಕೊಂಡೇ ಸದ್ಗತಿ ಹೊಂದಿದವರು ಎಂದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಜೈನಾಪೂರ, ಸಮುದಾಯದ ಮುಖಂಡರಾದ ಮಲ್ಲಿಕಾರ್ಜುನ ಪಾಟೀಲ, ಶೋಭಾ ಕಟಗೇರಿ, ಆರ್.ಎಸ್.ಪಾಟೀಲ, ವಿರುಪಾಕ್ಷ ಹಾದಿಮನಿ ಸೇರಿದಂತೆ ಇತರರು ಇದ್ದರು.

**ಅದ್ದೂರಿ ಮೆರವಣಿಗೆ**

ಬೆಳಿಗ್ಗೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಹೇಮರಡ್ಡಿ ಮಲ್ಲಮ್ಮಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ನಂತರ ಅದ್ದೂರಿ ಮೆರವಣಿಗೆಗೆ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಚಾಲನೆ ನೀಡಿದರು. ಮೆರವಣಿಗೆಯಲ್ಲಿ ವಿವಿಧ ಜಾನಪದ ಕಲಾತಂಡಗಳು ಪಾಲ್ಗೊಂಡಿದ್ದವು.

ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮುದಾಯದ ಮುಖಂಡರು ಭಾಗವಹಿಸಿದ್ದರು.

# ಬೆನಕಟ್ಟಿಯಲ್ಲಿ ವೈಭವದ ಹೇಮರಡ್ಡಿ ಮಲ್ಲಮ್ಮ ಜಯಂತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.10– ತಾಲೂಕಿನ ಬೆನಕಟ್ಟಿ ಗ್ರಾಮದಲ್ಲಿ ಶನಿವಾರ ಮಹಾಸಾಧ್ವಿ, ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಜಯಂತಿಯನ್ನು ವೈಶಿಷ್ಟ್ಯಪೂರ್ಣವಾಗಿ ಶ್ರದ್ಧಾ–ಭಕ್ತಿಯಿಂದ ಆಚರಿಸಲಾಯಿತು.

ಬೆಳಿಗ್ಗೆ ಹೇಮರಡ್ಡಿ ಮಲ್ಲಮ್ಮ ದೇವಸ್ಥಾನದಲ್ಲಿ ನಾರಾಯಣಭಟ್ ಜೋಶಿ ಅವರಿಂದ ಅಭಿಷೇಕ, ಪೂಜಾ ಕೈಂಕರ್ಯಗಳು ನೆರವೇರಿದವು. ನಂತರ ಮಹಿಳೆಯರು ಮಲ್ಲಮ್ಮಳ ತೊಟ್ಟಿಲು ಪೂಜೆ ಮಾಡಿ, ಅನೇಕ ಮಹಿಳೆಯರಿಗೆ ಉಡಿತುಂಬುವ ಕಾರ್ಯಕ್ರಮ ನಡೆಸಿದರು. 10 ಗಂಟೆಗೆ ಹೇಮರಡ್ಡಿ ಮಲ್ಲಮ್ಮಳ ಉತ್ಸವ ಮೂರ್ತಿಯ ಪಲ್ಲಕ್ಕಿ ಉತ್ಸವ ಜರುಗಿತು. 350 ಕ್ಕೂ ಹೆಚ್ಚು ಕುಂಭ ಹೊತ್ತ ಮಹಿಳೆಯರು, ವಿವಿಧ ವಾದ್ಯವೈಭವಗಳೊಂದಿಗೆ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ನಡೆಯಿತು. ಮಾರ್ಗದುದ್ದಕ್ಕೂ ಭಕ್ತರು ಪಲ್ಲಕ್ಕಿಗೆ ಪೂಜೆ ಸಲ್ಲಿಸಿ, ಹಣ್ಣು, ಕಾಯಿ ಸಮರ್ಪಿಸಿದರು. ಹೇಮರಡ್ಡಿ ಮಲ್ಲಮ್ಮ ದೇವಸ್ಥಾನ ಸಮಿತಿಯ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು, ಗ್ರಾಮದ ಹಿರಿಯರು, ಯುವಕರು, ಮಹಿಳೆಯರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು. ಮಧ್ಯಾಹ್ನ ಅನ್ನಸಂತರ್ಪಣೆ ನಡೆಯಿತು.

# ಭೀಮೆಯ ಒಡಲಲ್ಲಿ ವಿಶ್ವಜ್ಞಾನಿ ಜೈಭೀಮನ ಸಂಭ್ರಮೋತ್ಸವ ಮೇ.12 ರಂದು



ಮಲ್ಲಮ್ಮ ನುಡಿ ವಾರ್ತೆ

ಅಫಜಲಪುರ:ಮೇ.10:ಪಟ್ಟಣದ ನ್ಯಾಶನಲ್ ಫಂಕ್ಷನ್ ಹಾಲನಲ್ಲಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ 134ನೇ ಜಯಂತ್ಯೋತ್ಸವ ಕಾರ್ಯಕ್ರಮವು ಮೇ.12 ರಂದು ಸಮಿತಿ ಅಧ್ಯಕ್ಷ ಕುಮಾರ ಕೋಳಿಗೇರಿ ಅವರ ಅಧ್ಯಕ್ಷತೆಯಲ್ಲಿ ಅದ್ದೂರಿಯಾಗಿ ಜರುಗಲಿದೆ ಎಂದು ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು.

ನಂತರ ಮಾತನಾಡಿದ ಅವರು ಮೆ.12 ರಂದು ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರ 134 ನೇ ಜಯಂತ್ಯೋತ್ಸವ ಐತಿಹಾಸಿಕ ಕಾರ್ಯಕ್ರಮವಾಗಲಿದ್ದು, ಕಾಯರ್ಕ್ರಮವು ವಿಶ್ವಾರಾಧ್ಯ ಮಳೇಂದ್ರ ಶಿವಾಚಾರ್ಯರು, ಚನ್ನಮಲ್ಲ ಶಿವಾಚಾರ್ಯರು, ವೀರ ಮಹಾಂತ ಶಿವಾಚಾರ್ಯರ ಸಾನಿಧ್ಯದಲ್ಲಿ ಅದ್ದೂರಿಯಾಗಿ ಜರುಗಲಿದ್ದು, ಹಿರಿಯ ಮುತ್ಸದ್ದಿ ಶಾಸಕ ಎಮ್.ವೈ.ಪಾಟೀಲ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ವಿಶೇಷ ಭಾಷಣಕಾರರಾಗಿ ಜ್ಞಾನಪ್ರಕಾಶ ಸ್ವಾಮಿಜಿಗಳು ಹಾಗೂ ವಿಶೇಷ ಆಹ್ವಾನಿತರಾಗಿ ಕು.ಆಯಿಧ ಭಾನಿಶಾಲಿ ಆಗಮಿಸಲಿದ್ದಾರೆ. ಈ ಐತಿಹಾಸಿಕ ಕಾರ್ಯಕ್ರಮಕ್ಕೆ ತಾಲೂಕಿನ ಎಲ್ಲಾ ಗುರು ಹಿರಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು.

ನಂತರ ಮಾತನಾಡಿದ ದಲಿತ ಸಂಘರ್ಷ ಸಮಿತಿ (ಕ್ರಾಂತಿಕಾರಿ ಬಣ) ಜಿಲ್ಲಾ ಸಂಚಾಲಕರಾದ ಮಹಾಂತೇಶ ಬಡದಾಳ ಪ್ರತಿವರ್ಷ ನಡೆಯುವ ಬಾಬಾಸಾಹೇಬರ ಜಯಂತ್ಯೋತ್ಸವಕ್ಕಿಂತ ಈ ಬಾರಿಯ ಜಯಂತ್ಯೋತ್ಸವ ಅದ್ದೂರಿಯಾಗಿ ಅರ್ಥಪೂರ್ಣವಾಗಿ ನಡೆಯಲಿದ್ದು, ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಾಜಿ ಸಚಿವ ಮಾಲಿಕಯ್ಯ ಗುತ್ತೇದಾರ ವಹಿಸಲಿದ್ದು, ಜ್ಯೋತಿ ಬೆಳಗಿಸುವ ಕಾರ್ಯಕ್ರಮವನ್ನು ಮಾಜಿ ಜಿಲ್ಲಾ ಪಂಚಾಯತ ಅಧ್ಯಕ್ಷ ನಿತೀನ್ ಗುತ್ತೇದಾರ ನೇರವೇರಿಸಲಿದ್ದಾರೆ. ಡಾ.ಬಿ.ಆರ್. ಅಂಬೇಡ್ಕರ್ ಅವರ ಫೋಟೋ ಪೂಜೆ ಕಾರ್ಯಕ್ರಮವನ್ನು ಕೆಪಿಸಿಸಿ ಸದಸ್ಯ ಅರುಣಕುಮಾರ ಪಾಟೀಲ ನೆರವೇರಿಸಲಿದ್ದಾರೆ. ಜಾತಿ ಧರ್ಮ ಕುಲ ಪಂಥ ಎಲ್ಲವನ್ನು ಒಳಗೊಂಡ ಏಕೈಕ ವ್ಯಕ್ತಿತ್ವವುಳ್ಳ ಬಾಬಾಸಾಹೇಬರ ಜಯಂತಿಯಲ್ಲಿ ಸರ್ವಧರ್ಮಿಯರು ಭಾಗಿಯಾಗಿ ಯಶಸ್ವಿಗೊಳಿಸಬೇಕು ಎಂದರು.

ನಂತರ ಮಾತನಾಡಿದ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ಕುಮಾರ ಕೋಳಿಗೇರಿ ಮೆ.12 ರಂದು ಪಟ್ಟಣದ ನ್ಯಾಶನಲ್ ಫಂಕ್ಷನ್ ಹಾಲನಲ್ಲಿ ಬೆಳಿಗ್ಗೆ 11 ಗಂಟೆಗೆ ಬಹಿರಂಗ ಸಭೆ ಜರುಗಲಿದ್ದು, ನಂತರ ಹತ್ತು ಹಲವು ವಾದ್ಯಗಳು ಸೇರಿದಂತೆ ಸಾವಿರಾರು ಜನ ಯುವಕರ ಸಮ್ಮುಖದಲ್ಲಿ ಬಾಬಾಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಯ ಭವ್ಯ ಮೆರವಣಿಗೆ ನಡೆಯಲಿದೆ. ಹೆಚ್ಚಿನ ಸಂಖ್ಯೆಯಲ್ಲಿ ತಾಲೂಕಿನ ಎಲ್ಲಾ ಜನರು ಭಾಗಿಯಾಗಿ ಯಶಸ್ಸಿಗೊಳಿಸಲು ಮನವಿ ಮಾಡಿದರು.

ಇದೆ ಸಂದರ್ಭದಲ್ಲಿ ಶರಣು ಕೋಳಿಗೇರಿ, ಗ್ರಾಮ ಪಂ.ಮಾಜಿ ಅಧ್ಯಕ್ಷರು ಭಾವಿ ಸದಸ್ಯರಾದ ಅರವಿಂದ ದೊಡ್ಮನಿ,, ದಲಿತಸೇನೆ ವಿಭಾಗೀಯ ಅಧ್ಯಕ್ಷರಾದ ಮಹಾಂತೇಶ್ ಬಳೂಂಡಗಿ, ಶ್ರೀಶೈಲ ಕುಡಕಿ, ರವಿ ಗೌರ, ಜೈಭೀಮ್ ಗುಡ್ಡಡಗಿ, ಶಶಿಕುಮಾರ್ ಆರೇಕರ, ಶಿವು ಹೊಸ್ಮನಿ, ಮಂಜು ಬಟಗೇರಿ, ಮಹೇಶ್ ದೊಡ್ಮನಿ, ದತ್ತು ಹರಿಜನ, ಶಾಮ ಹೊಸ್ಮನಿ, ಶ್ರೀಶೈಲ ಸಿಂಗೆ, ಶಿವಕುಮಾರ್ ಕೋಳಿಗೇರಿ, ಮಹಾದೇವ ಬಂಕಲಗಿ, ಮಡಿವಾಳ ಕೆಳಗಿನ ಮನಿ, ಸುರೇಶ ಬಳೂಂಡಗಿ ಮತ್ತಿತರರು ಉಪಸ್ಥಿತರಿದ್ದರು.

# ತೆರವಾದ ಗ್ರಾ.ಪಂ ಸದಸ್ಯ ಸ್ಥಾನಗಳಿಗೆ ಉಪಚುನಾವಣೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.10–ಜಿಲ್ಲೆಯ ಕೆಲ ಗ್ರಾಮ ಪಂಚಾಯತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗಿರುವ ಹಾಗೂ ಖಾಲಿ ಇರುವ ಸದಸ್ಯ ಸ್ಥಾನಗಳನ್ನು ಭರ್ತಿ ಮಾಡುವ ಸಲುವಾಗಿ ಉಪ ಚುನಾವಣೆ ನಡೆಸಲು ಜಿಲ್ಲಾಧಿಕಾರಿಗಳು ಆಗಿರುವ ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ಚುನಾವಣಾ ಅಧಿಸೂಚನೆಯನ್ನು ಹೊರಡಿಸಿದ್ದಾರೆ.

ನಾಮಪತ್ರ ಸಲ್ಲಿಸಲು ಮೇ.14 ಕೊನೆಯ ದಿನವಾಗಿದೆ. ನಾಮಪತ್ರ ಪರಿಶೀಲನೆ ಮೇ 15 ರಂದು ನಡೆಯಲಿದ್ದು, ಉಮೇದುವಾರಿಕೆಯನ್ನು ಹಿಂಪಡೆಯಲು ಮೇ 17 ಕೊನೆಯ ದಿನವಾಗಿದೆ. ಮತದಾನ ಮೇ 25 ರಂದು ಬೆಳಿಗ್ಗೆ 7 ರಿಂದ ಸಂಜೆ 5 ಗಂಟೆವರೆಗೆ ನಡೆಯಲಿದೆ. ಮರು ಮತದಾನ ಅವಶ್ಯವಿದ್ದಲ್ಲಿ ಮೇ 27 ರಂದು ನಡೆಸಲಾಗುತ್ತದೆ. ಮತಎಣಿಕೆ ಮೇ28 ರಂದು ಆಯಾ ತಾಲೂಕಾ ಕೇಂದ್ರಗಳಲ್ಲಿ ನಡೆಯಲಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಿದ್ದಾರೆ.

ಮುಧೋಳ ತಾಲೂಕಿನ ಬರಗಿ (ಸಾಮಾನ್ಯ), ಮಾಲಾಪೂರ (ಸಾಮಾನ್ಯ ಮಹಿಳೆ), ರಂಜಣಗಿ (ಅನುಸೂಚಿತಜಾತಿ–ಮಹಿಳೆ), ಮೆಟಗುಡ್ಡ (ಸಾಮಾನ್ಯ), ಇಳಕಲ್ಲ ತಾಲೂಕಿನ ವಡ್ಡರ ಹೊಸೂರ (ಅನುಸೂಚಿತಜಾತಿ), ಜಮಖಂಡಿ ತಾಲೂಕಿನ ತುಂಗಳ (ಅನುಸೂಚಿತಪಂಗಡ–ಮಹಿಳೆ), ಖಾಜಿಬೀಳಗಿ (ಸಾಮಾನ್ಯ), ಬಾಗಲಕೋಟೆ ತಾಲೂಕಿನ ಸಿಂದಗಿ/ಸಾಳಗುಂದಿ (ಸಾಮಾನ್ಯ ಮಹಿಳೆ), ಚಿಕ್ಕಶೆಲ್ಲಿಕೇರಿ, ಕಳಸಕೊಪ್ಪ (ಸಾಮಾನ್ಯ), ಬೆಣ್ಣೂರ ಪು.ಕೆ (ಸಾಮಾನ್ಯ ಮಹಿಳೆ) ಗ್ರಾಪಂಗಳಲ್ಲಿ ಸ್ಥಾನಗಳು ಖಾಲಿಯಿವೆ.

ಬಾದಾಮಿ ತಾಲೂಕಿನ ಕುಟಕನಕೇರಿ (ಅನುಸೂಚಿತ ಜಾತಿ–ಮಹಿಳೆ), ಕುಟಕನಕೇರಿ (ಅನುಸೂಚಿತಪಂಗಡ–ಮಹಿಳೆ), ಕುಟಕನಕೇರಿ (ಸಾಮಾನ್ಯ), ಕುಟಕನಕೇರಿ (ಸಾಮಾನ್ಯ ಮಹಿಳೆ), ಕುಟಕನಕೇರಿ (ಅನುಸೂಚಿತ ಜಾತಿ), ಕುಟಕನಕೇರಿ (ಹಿಂದುಳಿದ ವರ್ಗ ಅ–ಮಹಿಳೆ), ಕುಟಕನಕೇರಿ (ಸಾಮಾನ್ಯ ಮಹಿಳೆ), ಕಾತರಕಿ (ಅನುಸೂಚಿತಪಂಗಡ–ಮಹಿಳೆ), ಯಂಡಿಗೇರಿ (ಸಾಮಾನ್ಯ) ಗ್ರಾಪಂಗಳ ತಲಾ ಒಂದು ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

# ಪ್ರಜಾಪ್ರಭುತ್ವದ ತಳಹದಿಯೇ ಬಸವಣ್ಣ: ನಾಡೋಜ ಪಟ್ಟದ್ದೇವರು




ಮಲ್ಲಮ್ಮ ನುಡಿ ವಾರ್ತೆ

ಕಮಲನಗರ :ಮೇ.10: ವಿಶ್ವದಲ್ಲಿ ಪ್ರಜಾಪ್ರಭುತ್ವ ತಳಹದಿಯೇ ಬಸವಣ್ಣ. ಅವರ ತತ್ವಾದರ್ಶಗಳನ್ನು ಪ್ರತಿಯೊಬ್ಬರು ಮೈಗೂಡಿಸಿಕೊಳ್ಳಬೇಕು ಎಂದು ಬಸವಕಲ್ಯಾಣದ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷರಾದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲೂಕಿನ ಬಳತ (ಬಿ) ಗ್ರಾಮದಲ್ಲಿ ಗುರುವಾರ ಸಂಜೆ ನಡೆದ ಪ್ರವಚನ ಸಮಾರೋಪ ವಿಶ್ವಗುರು ಬಸವಣ್ಣನವರ 892ನೇ ಬಸವ ಜಯಂತಿ ಉತ್ಸವ ಹಾಗೂ ರಾಷ್ಟ್ರ ಭಕ್ತಿ ಕುರಿತು ಜೈಜವಾನ ರೂಪಕ ಕಾರ್ಯಕ್ರಮದ ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಬಸವಣ್ಣ ಜಾತಿ, ಧರ್ಮ, ಮತಭೇದವನ್ನು ಮರೆತು ಮನುಷ್ಯಜಾತಿಯನ್ನು ಒಗ್ಗೂಡಿಸಿ ಎಲ್ಲರನ್ನೂ ಒಂದೇ ಎಂಬ ಸಂದೇಶ ಸಾರಿದರು.

ವಿಶ್ವದಲ್ಲಿ 800 ವರ್ಷಗಳ ಹಿಂದೆಯೇ ಶೋಷಿತರ, ಮಹಿಳೆಯರ, ಜಾತಿವರ್ಣಭೇದ ವಿರುದ್ಧ ಧ್ವನಿ ಎತ್ತಿ ಅದರ ಹೋರಾಟ ಮಾಡಿದ್ದರು. ಅನುಭವ ಮಂಟಪ ಎಂಬ ಸಂಸತ್ ರಚನೆ ಮಾಡಿ ಇಡೀ ವಿಶ್ವಕ್ಕೆ ಮಾದರಿಯಾಗಿದ್ದ ಬಸವಣ್ಣ ಇಂದಿಗೂ ಪ್ರಸ್ತುತರಾಗುತ್ತಾರೆ. ಇಂತಹ ವ್ಯಕ್ತಿ ನಮ್ಮ ಭಾಗದಲ್ಲಿ ನಡೆದಾಡಿರುವುದು ನಮ್ಮೆಲ್ಲರ ಪುಣ್ಯವಾಗಿದ್ದು, ಇವರ ತತ್ವದರ್ಶಗಳ ಅನುಕರಣೆ ನಮಗೆ ಪ್ರಸ್ತುತವಾಗುತ್ತದೆ ಎಂದರು.

ಹಿರೇಮಠ ಸಂಸ್ಥಾನದ ಶ್ರೀ ಗುರುಬಸವ ಪಟ್ಟದ್ದೇವರು ಮಾತನಾಡಿ, ಬಸವಣ್ಣ ಇವತ್ತು ವಿಶ್ವಕ್ಕೆ ಅರ್ಥವಾಗದೇ ಇರಬಹುದು. ಇನ್ನು ಕೆಲ ವರ್ಷಗಳ ಬಳಿಕವಾದರೂ ಜಗತ್ತಿಗೆ ಅರ್ಥವಾಗಲಿದೆ. ಆಗ ಎಲ್ಲರೂ ಬಸವಣ್ಣನಿಗೆ ಪೂಜಿಸುವರು. ಈಗಾಗಲೇ ಅನೇಕ ದೇಶಗಳಲ್ಲಿ ಹಲವು ಭಾಷೆಗಳಿಗೆ ವಚನ ಸಂಪುಟ ಅನುವಾದಗೊಂಡಿದೆ. ವಿಶ್ವದ ನಾನಾ ಕಡೆಗಳಲ್ಲಿ ಬಸವ ಜಯಂತಿ ನಡೆಯುತ್ತಿದೆ ಎಂದು ಮಾಹಿತಿ ನೀಡಿದರು. ಮಕ್ಕಳಿಗೆ ಬಸವಣ್ಣನ ವಚನಗಳು ಕಲಿಸಿ ಬದುಕಿನ ಪಾಠ ಕಲಿಸುವ ಅಗತ್ಯವಿದೆ ಎಂದರು.

ನಿವೃತ್ತ ಐಎಎಸ್ ಅಧಿಕಾರಿ ಅಮರನಾಥ ಆರ್ ತಳವಾಡೆ ಕಾರ್ಯಕ್ರಮ ಉದ್ಘಾಟಿಸಿದರು. ನಿವೃತ್ತ ಮುಖ್ಯಗುರು ವೈಜಿನಾಥ ರಾಜಗೀರೆ ಅಧ್ಯಕ್ಷತೆ ವಹಿಸಿದರು. ತಹಸೀಲ್ದಾರ ಮಲ್ಲಶೆಟ್ಟಿ ಚಿದ್ರೆ, ಭಾರತೀಯ ಬಸವ ಬಳಗದ ಜಿಲ್ಲಾಧ್ಯಕ್ಷಡಾ. ಸಂಜೀವಕುಮಾರ ಜುಮ್ಮಾ, ತಾಪಂ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ, ಪತ್ರಕರ್ತ ಸಂಘದ ಅಧ್ಯಕ್ಷ ಶಿವಾನಂದ ಮೊಕ್ತೆದಾರ್, ಕಲಬುರಗಿ ವಿವಿ ಸಿಂಡಿಕೇಟ್ ಸದಸ್ಯ ಸಿದ್ದಪ್ಪ ಮೂಲಗೆ, ವಚನ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಮಹಾದೇವ ಮಡಿವಾಳ, ಶಿಖರೇಶ್ವರ ಶೆಟಕಾರ, ಸಿದ್ರಾಮ ತಳವಾಡೆ, ಗುಂಡಪ್ಪ ಮರ್ಜಾಪೂರೆ, ಶಿವಾನಂದ ಸಾವಳೆ ಸೇರಿದಂತೆ ಅನೇಕರು ಪಾಲ್ಗೊಂಡರು. ಸಂಗಮೇಶ ಸಾವಳೆ ಸ್ವಾಗತಿಸಿದರು. ದಶರಥ ಔರಾದೆ ನಿರೂಪಿಸಿದರು. ಜಗನ್ನಾಥ ಬಿರಾದಾರ್ ವಂದಿಸಿದರು. ಈ ವೇಳೆ ನಡೆದ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಕಣ್ಮನ ಸೆಳೆಯಿತು.

ಸೇವಾ ನಿವೃತ್ತರಿಗೆ ಸತ್ಕಾರ

ಈ ವೇಳೆ ಗ್ರಾಮದ ಸರಕಾರಿ ನಿವೃತ್ತ ನೌಕರರಿಗೆ ಗ್ರಾಮಸ್ಥರು ಸತ್ಕರಿಸುವ ಮೂಲಕ ಗಮನ ಸೆಳೆದರು. ಗ್ರಾಮದಲ್ಲಿ ವಿಜ್ಞಾನಿಗಳು, ಐಎಎಸ್, ಐಪಿಎಸ್ ಸೇರಿದಂತೆ ಬಹುತೇಕ ರಂಗದಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಅವರನ್ನು ಈ ವೇಳೆ ಸತ್ಕರಿಸಿರುವುದು ಸಂತಸ ತಂದಿದೆ ಎಂದು ಗುರುಬಸವ ಪಟ್ಟದ್ದೇವರು ಮೆಚ್ಚುಗೆ ವ್ಯಕ್ತಪಡಿಸಿದರು.

ಗಮನ ಸೆಳೆದ ರೂಪಕ

ಭಾಲ್ಕಿಯ ಚನ್ನಬಸವೇಶ್ವರ ಗುರುಕುಲ ವಿದ್ಯಾರ್ಥಿಗಳಿಂದ ಇಳಕಲ್ ಶ್ರೀಗಳ ರಚಿಸಿರುವ ರಾಷ್ಟ್ರ ಭಕ್ತಿ ಕುರಿತು ಜೈ ಜವಾನ್ ರೂಪಕ ಎಲ್ಲರ ಗಮನ ಸೆಳೆಯಿತು. ಧರ್ಮದ ಆಚರಣೆ ಮಾಡೋಣ ಆದರೆ ದೇಶದ ವಿಚಾರ ಬಂದರೆ ಧರ್ಮಕ್ಕಿಂತ ದೇಶ ದೊಡ್ಡದು. ಯುವಕರು ದೇಶಾಭಿಮಾನ ಬೆಳೆಸಿಕೊಳ್ಳಬೇಕು ಎಂದು ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಹೇಳಿದರು.

## ತಾಲ್ಲೂಕಿನಾದ್ಯಂತ ವೈಭವದಿಂದ ಜರುಗಿದ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ಕಾರ್ಯಕ್ರಮ

# ಹೇಮರೆಡ್ಡಿ ಮಲ್ಲಮ್ಮನವರ ಆದರ್ಶ ಪಾಲನೆ ಅತ್ಯವಶ್ಯಕ

### ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನ ಆದರ್ಶ ಎಲ್ಲರೂ ಪಾಲಿಸಿ

(ರಾಜು ಪೂಜಾರಿ ದುಬಲಗುಂಡಿ)

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ: ದೈವಭಕ್ತಿ, ಕಾಯಕನಿಷ್ಠೆ, ಗುರುಲಿಂಗ ಜಂಗಮರಲ್ಲಿ ಅನನ್ಯ ಭಕ್ತಿ ಹೊಂದಿ, ಸುಖ–ದು:ಖ, ಅಂಬಲಿ–ಅಮೃತ, ಸ್ತುತಿ–ನಿಂದೆಯನ್ನು ಸಮಾನವಾಗಿ ಸ್ವೀಕರಿಸಿದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನ ಆದರ್ಶ ಎಲ್ಲರೂ ಪಾಲಿಸಬೇಕು ಎಂದು ಶಾಸಕ ಡಾ. ಸಿದ್ದು ಪಾಟೀಲ್ ಹೇಳಿದರು.



ಪಟ್ಟಣದ ತಹಸೀಲ್ ಕಚೇರಿ ಸಭಾಂಗಣದಲ್ಲಿ ತಾಲೂಕು ಆಡಳಿತ ವತಿಯಿಂದ ಶನಿವಾರ ನಡೆದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ಕಾರ್ಯಕ್ರಮದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದರು. ಶ್ರೀಶೈಲ ಮಲ್ಲಿಕಾರ್ಜುನನ ಮೇಲೆ ಅಪಾರ ಭಕ್ತಿ ಹೊಂದಿ, ಭಾವನಾತ್ಮಕ ಜೀವಿಯಾಗಿ, ಮಾನಸಿಕ ಶಿವಲಿಂಗ ದೀಕ್ಷೆ ತೊಟ್ಟು ಸಮಾಜ, ನಾಡು, ನುಡಿ ಹಾಗೂ ಮನುಕುಲದ ಉದ್ಧಾರಕ್ಕೆ ಅಪಾರ ಕೊಡುಗೆ ನೀಡಿದ, ಸ್ತ್ರೀ ಕುಲದ ಗೌರವ ಹೆಚ್ಚಿಸಿದ, ಮಲ್ಲಮ್ಮನವರ ವಿಚಾರ ಧಾರೆಗಳನ್ನು ಇಂದಿನ ಯುವ ಸಮುದಾಯದವರು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ನಾಗರಿಕರಾಗಬೇಕು ಎಂದು ಸಲಹೆ ನೀಡಿದರು. ವಿದ್ಯಾರ್ಥಿಗಳು ಮಹಾತ್ಮರ ಆದರ್ಶಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ನಿರಂತರ ಅಧ್ಯಯನ ಮಾಡಿ ಭವಿಷ್ಯ ರೂಪಿಸಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ತಹಸೀಲ್ದಾರ್ ಅಂಜುಮ್ ತಬ್ಬಸುಮ್, ವಿನಾಯಕ ಮಂಡಾ, ಬ್ಯಾಂಕ್ ರೆಡ್ಡಿ, ಗುಂಡು ರೆಡ್ಡಿ, ಅಂಜುರೆಡ್ಡಿ, ನಿಂಗಾರೆಡ್ಡಿ ವಾಂಜ್ರಿ, ರವಿರೆಡ್ಡಿ ಶೇರಿಕರ್, ಧರ್ಮರೆಡ್ಡಿ, ಗಿರಿ–ರೆಡ್ಡಿ, ಸಿದ್ದಾರೆಡ್ಡಿ, ರಾಜರೆಡ್ಡಿ, ನಾಗಭೂಷಣ ಸಂಗಮ್, ಗಿರೀಶ್ ತುಂಬಾ, ವಿನಾಯಕ ಮಣಕೋಜಿ, ಮಲ್ಲಿಕಾರ್ಜುನ ಸೀಗಿ ಇದ್ದರು.

### ಸ್ತ್ರೀ ಕುಲಕ್ಕೆ ಹೇಮರೆಡ್ಡಿ ಮಲ್ಲಮ್ಮ ಆದರ್ಶ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಸಂಸಾರದಲ್ಲಿಯೇ ಇದ್ದು, ಮಹಾನ ಸಾಧನೆ ಮಾಡುವ ಮೂಲಕ ಸ್ತ್ರೀ ಕುಲಕ್ಕೆ ಶಿವಶರಣೆ ಮಹಾಸಾಧ್ವಿ ಹೇಮರೆಡ್ಡಿ ಮಲ್ಲಮ್ಮ ಆದರ್ಶ ಶರಣೆಯಾಗಿದ್ದಾರೆ ಎಂದು ಗೋಂಧಳಿ ಸಮಾಜದ ಅಧ್ಯಕ್ಷ ಡಾ. ಸಿದ್ರಾಮ ವಾಗ್ಮಾರೆ ಹೇಳಿದರು.



ಪಟ್ಟಣದ ಮಾಣಿಕ ಪ್ರಭು ಪತ್ತಿನ ಸೌಹಾರ್ದ ಸಹಕಾರಿ ಕಚೇರಿಯಲ್ಲಿ ಶನಿವಾರ ನಡೆದ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಪುಣ್ಯಕ್ಷೇತ್ರ ಶ್ರೀಶೈಲದ ಸನಿಹದಲ್ಲಿ ಜನಿಸಿದ ಹೇಮರಡ್ಡಿ ಮಲ್ಲಮ್ಮನವರ ಜೀವನದಲ್ಲಿ ಘಟಿಸಿದ ಸಾಕಷ್ಟು ಪವಾಡಗಳು ಎಲ್ಲರೂ ಅರಿತುಕೊಳ್ಳಬೇಕು. ಪ್ರಸ್ತುತ ಸಮಾಜದಲ್ಲಿ ಮನುಷ್ಯರು ಕೇವಲ ಅಧಿಕಾರ, ಅಂತಸ್ತು, ಐಶ್ವರ್ಯಕ್ಕಾಗಿ ಬಡಿದಾಡುತ್ತಿದ್ದಾರೆ. ಆದರೆ ರಾಜಮನೆತನದ ಒಡತಿ ಆಗಿರಬೇಕಾದ ಹೇಮರಡ್ಡಿ ಮಲ್ಲಮ್ಮ ಬಾಲ್ಯದಲ್ಲಿಯೇ ವಿವಾಹವಾಗಿ ಅತ್ತೆ ನಾದಿನಿಯರು ಕೊಡುತ್ತಿದ್ದ ಕಿರುಕುಳದ ಮಧ್ಯೆಯೂ ಭಕ್ತಿ ಮಾರ್ಗದಲ್ಲಿ ನಡೆದು ಉತ್ತಮ ಸಾಧನೆ ಮಾಡಿದ್ದಾರೆ ಎಂದರು.

ಮಾಣಿಕ ಪ್ರಭು ಪತ್ತಿನ ಸೌಹಾರ್ದ ಸಹಕಾರಿ ಅಧ್ಯಕ್ಷ ರಮೇಶ ರೆಡ್ಡಿ ಮಾತನಾಡಿ, ಹೇಮರೆಡ್ಡಿ ಮಲ್ಲಮ್ಮನವರು ಇಡೀ ಸ್ತ್ರೀ ಕುಲಕ್ಕೆ ಮಾದರಿ ಆಗಿರುವಂತೆ ವ್ಯಕ್ತಿತ್ವ ರೂಪಿಸಿಕೊಂಡು, ಕೌಟುಂಬಿಕ ಕಷ್ಟಗಳು ಮೆಟ್ಟಿನಿಂತು, ಸಾಮಾಜಿಕ ಚಿಂತನೆಯಲ್ಲಿ ಆದರ್ಶ ಮೌಲ್ಯ ರೂಢಿ ಸಿಕೊಂಡು ಧಾರ್ಮಿಕ ಸಾಧನೆಗೈದ ಮಹಾಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮ ಎಂದು ಬಣ್ಣಿಸಿದರು.

ಈ ಸಂಸರ್ಭದಲ್ಲಿ ಗೋಪಾಲಕೃಷ್ಣ ಕಮ್ಮಾ, ರಾಮರೆಡ್ಡಿ ಕಂಚೆಟ್ಟಿ, ಮೋಹನ್‌ರೆಡ್ಡಿ, ಜೈಕಾಂತರೆಡ್ಡಿ ಕ್ಷಡಿಯಾಳ, ಸುರೇಶ ಧುಮಾಳೆ, ರಮೇಶ ಜಾಧವ, ಮಲ್ಲಿಕಾರ್ಜುನರೆಡ್ಡಿ, ವಿಜಯಲಕ್ಷ್ಮೀ, ಸೀಫಾ ಮಾಣಿಕನಗರ ಉಪಸ್ಥಿತರಿದ್ದರು.



ಹುಮನಾಬಾದ್ ತಾಲೂಕಿನ ಧಮ್ಮನಸೂರ ಗ್ರಾಮ ಪಂಚಾಯತ್ ಕಚೇರಿಯಲ್ಲಿ ನಡೆದ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ಕಾರ್ಯಕ್ರಮದಲ್ಲಿ ಗ್ರಾಪಂ. ಅಧ್ಯಕ್ಷ ವೀರಪ್ಪ ಪೂಜೆ ಸಲ್ಲಿಸಿದರು. ಈ ವೇಳೆ ಗ್ರಾಪಂ. ಸದಸ್ಯ ಸಂಜುಕುಮಾರ ಕಣ್ಣಿ, ಪಿಡಿಒ ಮಲ್ಲಿಕಾರ್ಜುನ್ ಸಾಗರ್, ರಾಜುರೆಡ್ಡಿ, ನಾರಾಯಣರೆಡ್ಡಿ, ತಿಪ್ಪಾರೆಡ್ಡಿ, ಸತೀಷರೆಡ್ಡಿ, ಮಹಾದೇವರೆಡ್ಡಿ, ತುಕ್ಕಾರೆಡ್ಡಿ, ಬಾಲರೆಡ್ಡಿ, ಸಂಜುರೆಡ್ಡಿ, ವಿಲಾಸರೆಡ್ಡಿ ಇದ್ದರು. (ಮಲ್ಲಮ್ಮ ನುಡಿ ಚಿತ್ರ)




ಹುಮನಾಬಾದ್ ಪಟ್ಟಣದ ವಾಂಜರಿ ಬಡಾವಣೆಯಲ್ಲಿ ರೆಡ್ಡಿ ಸಮಾಜದ ವತಿಯಿಂದ ಶನಿವಾರ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಿತು. ಶಾಸಕ ಡಾ. ಸಿದ್ದು ಪಾಟೀಲ್, ತಹಸೀಲ್ದಾರ್ ಅಂಜುಮ್ ತಬಸುಮ್, ಸುಭಾಷ ಆರ್ಯ, ಬ್ಯಾಂಕ್ ರೆಡ್ಡಿ, ವಿನಾಯಕ ಮಾಂಡಾ, ಗೋಪಾಲರೆಡ್ಡಿ, ಗುಂಡುರೆಡ್ಡಿ ಪುಟಕಲ್ ಇದ್ದರು. (ಮಲ್ಲಮ್ಮ ನುಡಿ ಚಿತ್ರ)



ಧಾರ್ಮಿಕ ಸಾಧನೆಗೈದ ಮಹಾಶಿವ ಶರಣೆ ಹೇಮರೆಡ್ಡಿ ಮಲ್ಲಮ್ಮನವರು ರೆಡ್ಡಿ ಸಮಾಜಕ್ಕೆ ಬಡತನ ಬರದಂತೆ ಶ್ರೀಶೈಲದ ಮಲ್ಲಿಕಾರ್ಜುಸ್ವಾಮಿಯಲ್ಲಿ ಬೇಡಿಕೊಂಡು ಸಮಾಜದ ಏಳಿಗೆಗಾಗಿ ಹೇಮರೆಡ್ಡಿ ಮಲ್ಲಮ್ಮ ಶ್ರಮಿಸಿದ್ದಾರೆ.

–ರಮೇಶ ರೆಡ್ಡಿ
ಅಧ್ಯಕ್ಷ, ಮಾಣಿಕ ಪ್ರಭು ಬ್ಯಾಂಕ್ ಹುಮನಾಬಾದ್



ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ನಿರಂತರ ಅಧ್ಯಾಯನ ಮಾಡಬೇಕು. ಮಾನವೀಯ ಮೌಲ್ಯಗಳನ್ನು ಮೌಗೂಡಿಸಿಕೊಂಡು ಸಮಾಜದ ಅಭಿವೃದ್ಧಿಗೆ ನಿಸ್ವಾರ್ಥ ಸೇವೆ ಸಲ್ಲಿಸಬೇಕು.

– ಡಾ. ಸಿದ್ರಾಮ ವಾಗ್ಮಾರೆ
ಅಧ್ಯಕ್ಷ, ಗೋಂಧಳಿ ಸಮಾಜ



ಪತಿಯೆ ದೇವರು ಎಂದು ತಿಳಿದುಕೊಂಡಿದ್ದ ಹೇಮರಡ್ಡಿ ಮಲ್ಲಮ್ಮ ಬದುಕು ಅತ್ಯಂತ ಕಠಿಣವಾಗಿತ್ತು. ಶ್ರೀಶೈಲ ಮಲ್ಲಿಕಾರ್ಜುನನ್ನು ಆರಾಧಿಸಿ ಪೂಜೆ ಮಾಡಿ ಸಾಕ್ಷಾತ್ಕರಿಸಿಕೊಂಡು ತನಗೆ ಕಾಟ ಕೊಟ್ಟವರಿಗೂ ಒಳ್ಳೆಯದನ್ನು ಬಯಸಿದ ಸಾಧ್ವಿ ಶಿರೋಮಣಿ ಹೇಮರೆಡ್ಡಿ ಮಲ್ಲಮ್ಮನವರು.

–ರಾಜು ಪೂಜಾರಿ ಪತ್ರಕರ್ತ, ಹುಮನಾಬಾದ

## ಮಾನವೀಯ ಮೌಲ್ಯಗಳ ಉಳಿವಿಗೆ ಯುವಕರ ಶ್ರಮ ಅಗತ್ಯ : ನಿಂಬೂರೆ







ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್: ಇಂದಿನ ನಾಗರಿಕ ಜಗತ್ತಿನಲ್ಲಿ ಉತ್ತಮ ಜೀವನಕ್ಕೆ ಪೂರಕವಾದ ಮಾನವೀಯ ಮೌಲ್ಯಗಳ ಉಳಿವಿಗೆ ಯುವಕರ ಶ್ರಮ ಅಗತ್ಯವಾಗಿದೆ ಎಂದು ಎಸ್‌ಬಿಐ ಬ್ಯಾಂಕಿನ ಸಹಾಯಕ ಅಧಿಕಾರಿ ಬಸವರಾಜ ನಿಂಬೂರೆ ಹೇಳಿದರು. ತಾಲೂಕಿನ ಮಾಣಿಕ ನಗರ ಗ್ರಾಮದ ಐತಿಹಾಸಿಕ ಮಾಣಿಕಪ್ರಭು ಸಂಸ್ಥಾನದ ಮಾಣಿಕ ವಿದ್ಯಾಲಯದ ಆವರಣದಲ್ಲಿ ಸರಕಾರಿ ಪ್ರಥಮ ದರ್ಜೆ ಕಾಲೇಜು ಹುಮನಾಬಾದ್ ವತಿಯಿಂದ ಶನಿವಾರ ನಡೆದ ರಾಷ್ಟ್ರೀಯ ಸೇವಾ ಯೋಜನೆ ಶಿಬಿರ ಹಾಗೂ ಮಾನವೀಯ ಮೌಲ್ಯ ಮತ್ತು ಯುವಕರು ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಪ್ರತಿಯೊಬ್ಬರ ವ್ಯಕ್ತಿತ್ವ ವಿಕಸನಕ್ಕೆ ಶಿಕ್ಷಣ ಅವಶ್ಯವಾಗಿದ್ದು, ಈ ನಿಟ್ಟಿನಲ್ಲಿ ನಾವು ನೈತಿಕ ಹಾಗೂ ಮೌಲ್ಯಯುತ ಶಿಕ್ಷಣಕ್ಕೆ ಒತ್ತು ನೀಡಬೇಕಾಗಿದೆ. ಪಾಲಕರು ಹಾಗೂ ಶಿಕ್ಷಕರು ಮಕ್ಕಳಲ್ಲಿ ಉತ್ತಮ ಸಂಸ್ಕಾರ ನೀಡಬೇಕಾಗಿದೆ. ಜತೆಗೆ ಸ್ವಾಮಿ ವಿವೇಕಾನಂದರ ಆದರ್ಶ ಹಾಗೂ ದೇಶ ಪ್ರೇಮ ಮೈಗೂಡಿಸಿಕೊಂಡು ಬಲಿಷ್ಠ ರಾಷ್ಟ್ರದ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಸಲಹೆ ನೀಡಿದರು.

ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಅಧಿಕಾರಿ ಡಾ. ಶಾಂತಕುಮಾರ ಬನಗುಂಡಿ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಗ್ರಾಮೀಣ ಭಾಗದ ಹಳ್ಳಿಗಳ ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಪಠ್ಯಗಳಿಗೆ ಸೀಮಿತಗೊಳಿಸದೆ ಪ್ರತಿನಿತ್ಯ ಪತ್ರಿಕೆಗಳನ್ನು ಓದುವ ಹವ್ಯಾಸವ ಬೆಳೆಸಿಕೊಳ್ಳಬೇಕು. ಇದರಿಂದ ಜ್ಞಾನದ ಮಟ್ಟ ಹೆಚ್ಚಾಗುತ್ತದೆ. ಅಲ್ಲದೇ ಸ್ಪರ್ಧಾತ್ಮಕ ಪರೀಕ್ಷೆಗಳು ಎದುರಿಸುವ ಶಕ್ತಿ ಬರುತ್ತದೆ ಎಂದು ತಿಳಿಸಿದರು. ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಮಾಣಿಕ ವಿದ್ಯಾಲಯದಿಂದ ಮಾಣಿಕ ಪ್ರಭು ಸಂಸ್ಥಾಮದ ವರೆಗೆ ಕಾಲ್ನಡಿಗೆ ಜಾಥಾ ನಡೆಸಿ ಸಿಂಧೂರ ಕಾರ್ಯಚರಣೆಯಲ್ಲಿ ಹುತಾತ್ಮರಾದ ಯೋಧರ ಆತ್ಮಕ್ಕೆ ಶಾಂತಿ ಸಿಗಲೆಂದು ಪ್ರಾರ್ಥನೆ ಸಲ್ಲಿಸದರು. ಬಳಿಕೆ ದೇಶ ಭಕ್ತಿ ಘೋಷಣೆಗಳನ್ನು ಕೂಗಿ ಸಿಂಧೂರ್ ಕಾರ್ಯಚರಣೆ ಕೈಗೊಂಡ ಭಾರತೀಯ ಸೈನಿಕರು ಪ್ರತಿ ಹೆಜ್ಜೆಯಲ್ಲಿ ಯಶಸ್ಸು ಸಾಧಿಸಲಿ ಎಂದು ಮಾಣಿಕ ಪ್ರಭು ಸಂಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಡಾ. ಅರುಣಕುಮಾರ ಚಂದನ್, ವಿಶಾಲ ಸ್ವಾಮಿ, ಶಿವಾಜಿ ರಾಠೋಡ ಇದ್ದರು. ಬೀರಗೊಂಡ ಸ್ವಾಗತಿಸಿದರು. ಪಾಯಲ್ ನಿರೂಪಿಸಿದರು. ಪಲ್ಲವಿ ವಂದಿಸಿದರು.

## ವಿದ್ಯಾರ್ಥಿಗಳ ಬೆಳವಣಿಗೆಗೆ ಎನ್‌ಎಸ್‌ಎಸ್ ಸಹಕಾರಿ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಶೈಲಕ್ಷಣಿಕ ಕ್ಷೇತ್ರದಲ್ಲಿ ವಿದ್ಯಾರ್ಥಿಗಳ ಸಮಗ್ರ ಬೆಳವಣಿಗೆಗೆ ರಾಷ್ಟ್ರೀಯ ಸೇವಾ ಯೋಜನೆ ಸಹಕಾರಿಯಾಗಿದೆ ಎಂದು ಶಿಕ್ಷಣ ತಜ್ಞ ಪ್ರೊ. ಕೈಲಾಸ ಹೇಳಿದರು. ಪಟ್ಟಣದ ಕಲ್ಲೂರ ರಸ್ತೆಯ ಬಸವತೀರ್ಥ ವೀರಭದ್ರೇಶ್ವರ ದೇವಸ್ಥಾನ ಆವರಣದಲ್ಲಿ ಎಸ್ ಬಿಸಿಎಸ್ ಮತ್ತು ಎಸ್ ವಿ ಕಾಲೇಜಿನ ವತಿಯಿಂದ ಶನಿವಾರ ನಡೆದ ರಾಷ್ಟ್ರೀಯ ಸೇವಾ ಯೋಜನೆ ಶಿಬಿರಕ್ಕೆ ಚಾಲನೆ ನೀಡಿ ಮಾತನಾಡಿದರು.




ರಾಷ್ಟ್ರೀಯ ಸೇವಾ ಯೋಜನೆ ಸೇವಾ ಮನೋಭಾವನೆ, ರಾಷ್ಟ್ರ ಪ್ರೇಮ, ಪರಿಸರ ಸಂರಕ್ಷಣೆ ಸೇರಿ ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುತ್ತದೆ. ಹೀಗಾಗಿ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ರಾಷ್ಟ್ರೀಯ ಸೇವಾ ಯೋಜನೆ ಅಧಿಕಾರಿ ಪ್ರವೀಣಕುಮಾರ ಕಲಬುರ್ಗಿ ಮಾತನಾಡಿ, ಶೈಕ್ಷಣಿಕ ಕ್ಷೇತ್ರದ ಪ್ರಗತಿಗೆ ಪೂರಕವಾದ ವಾತಾವರಣ ನಿರ್ಮಾಣ ಮಾಡುವುದರೊಂದಿ ವಿದ್ಯಾರ್ಥಿಗಳಿಗೆ ಎಲ್ಲ ಸೌಲಭ್ಯಗಳು ಕಲ್ಪಿಸಿಕೊಡಲಾಗುತ್ತಿದೆ. ನಿರಂತರ 7 ದಿನಗಳು ನಡೆಯುವ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಎಲ್ಲಾ ಶಿಬಿರಾರ್ಥಿಗಳು ಸೂಕ್ತ ಸಮಯಕ್ಕೆ ಹಾಜರಾಗಿ ಶಿಬಿರದ ಲಾಭ ಪಡೆಯಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ. ರವೀಂದ್ರನಾಥಪ್ಪ, ದೀಪಕ ಕಲ್ಬುರ್ಗಿ, ಡಾ. ವಿಕಾಸ ಪೋಸ್ತಾರ್, ಸಂಗ್ರಾಮರೆಡ್ಡಿ, ಅವಿನಾಶ ಪಾಟೀಲ್, ಮಲ್ಲಪ್ಪ, ಸಿ.ಕೆ. ಲದ್ದೆ, ಡಾ. ರಮಾದೇವಿ ಇದ್ದರು.



ಬಸವಕಲ್ಯಾಣ :– ಇಲ್ಲಿನ ಬಂದವರ ಓಣಿಯ ಹತ್ತಿರ ಇರುವ ಶಿವಶರಣೆ ಹೇಮ ರೆಡ್ಡಿ ಮಲ್ಲಮ್ಮ ನವರ ಉದ್ಯಾನ ವನದಲಿ ಶಿವಶರಣೆ ಹೇಮ ರೆಡ್ಡಿ ಮಲ್ಲಮ್ಮ ನವರ 603 ನೇಯ ಜಯಂತಿ ಉತ್ಸವದಲ್ಲಿ ಸಾನಿಧ್ಯ ವನ್ನು ತಿಪುರಾಂತಿನ ಪೂಜ್ಯ ಶ್ರೀ ಡಾ ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ವಹಿಸಿ ಆರ್ಶೀವಚನ ನೀಡಿದರು. ವಿಶೇಷ ಉಪನ್ಯಾಸಕರಾಗಿ ಬೀದರನ ಅಕ್ಕ ಮಹಾದೇವಿ ಮಹಿಳಾ ಮಹಾವಿದ್ಯಾಲಯದ ನಿವೃತ್ತ ಪ್ರಾಂಶುಪಾಲರಾದ ಪ್ರೊ. ಎಸ್. ಜಿ. ಹುಗ್ಗೆ ಪಾಟೀಲ. ಬಿ. ಕೆ. ಡಿ. ಬಿ. ಆಯುಕ್ತರಾದ ಜಗನ್ನಾಥ ರೆಡ್ಡಿ. ಕಲಬುರ್ಗಿಯ ಮಹಾನಗರ ಪಾಲಿಕೆ ಅಧಿಕಾರಿ ಸಾವಿತ್ರಿ ಸಲಗರ. ರೆಡ್ಡಿ ಸಮಾಜದ ಅಧ್ಯಕ್ಷರಾದ ವಿಜಯಕುಮಾರ ರೆಡ್ಡಿ . ಉಪಾಧ್ಯಕ್ಷರಾದ ರಾಜರೆಡ್ಡಿ ಪಾಟೀಲ್. ನಿಲಾಂಬಿಕಾ ಸರ್ಕಾರಿ ಪ್ರೌಢ. ಪ. ಪೂ. ಕಾಲೇಜಿನ ಉಪನ್ಯಾಸಕರಾದ ಅಶೋಕ ರೆಡ್ಡಿ ನಿಂಗಾವರೆ. ನರ್ಸಿಂಗರೆಡ್ಡಿ ಗದಲೇಗಾಂವ. ನಿವೃತ್ತ ಉಪನ್ಯಾಸಕರಾದ ಹೇಮರೆಡ್ಡಿ ಗೌರೆ ಕಿಟ್ಟಾ. ಮುಖ್ಯ ಗುರುಗಳಾದ ಸೂರ್ಯಕಾಂತ ಪಾಟೀಲ. ಶರಣಬಸಪ್ಪ ಬಿರಾದಾರ್. ಅಲ್ಲದೆ ಅಶೋಕ ರೆಡ್ಡಿ ಕುದಗೆ ಕಿಟ್ಟಾ. ಗೋವಿಂದ ರೆಡ್ಡಿ ಕೋತಾಪಲ್ಲೆ. ಶಿಕ್ಷಕರಾದ ವೀರೇಂದ್ರರೆಡ್ಡಿ. ಜಗನ್ನಾಥ ರೆಡ್ಡಿ ಹುಡೆ ಕಿಟ್ಟಾ. ಹಾಗೂ ಗಾಯಕರಾದ ಕಲ್ಯಾಣರಾವ ಮದರಗಾಂವಕರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮಹಿಳೆಯ ಚಿನ್ನದ ಸರ ಎಗರಿಸಿದ ಕಳ್ಳ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ, ಮೇ.10– ಅಂಗಡಿಯೊಂದರಲ್ಲಿ ಕೆಲಸ ಮುಗಿಸಿ ಮನೆಗೆ ತೆರಳುತ್ತಿದ್ದ ಮಹಿಳೆಯೊಬ್ಬಳ ಕೊರಳಲ್ಲಿನ ಚಿನ್ನದ ಸರ ಎಗರಿಸಿದ ಘಟನೆ ಜಿಲ್ಲೆಯ ಇಳಕಲ್ಲ ನಗರದಲ್ಲಿ ಶುಕ್ರವಾರ ನಡೆದಿದೆ. ಬಸಮ್ಮ ಕರ್ಲಿ ಎಂಬ ಮಹಿಳೆ ಕೆಲಸ ಮುಗಿಸಿ ಮಾರುತಿ ನಗರದ ತನ್ನ ಮನೆಗೆ ರಸ್ತೆಯಲ್ಲಿ ನಡೆದು–ಕೊಂಡು ತೆರಳುತ್ತಿದ್ದಾಗ ಬೈಕ್ ಮೇಲೆ ಬಂದ ವ್ಯಕ್ತಿ ಬಸಮ್ಮ ಕೊರಳಲ್ಲಿನ 15 ಗ್ರಾಂ.ತೂಕದ ಚಿನ್ನದ ಸರವನ್ನು ಕ್ಷಣಾರ್ಧದಲ್ಲಿ ಎಗರಿಸಿಕೊಂಡು ಹೋಗಿದ್ದಾನೆ. ಇಳಕಲ್ಲ ಶಹರ್ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪಿಎಸ್ಐ ಷಹಜಹಾನ ನಾಯಕ ತನಿಖೆ ಕೈಗೊಂಡಿದ್ದಾರೆ.

## ಮಲ್ಲಮ್ಮ ಜಯಂತಿ ಆಚರಣೆ




ಮಲ್ಲಮ್ಮ ನುಡಿ ವಾರ್ತೆ


ಹುಮನಾನಾದ್ ಪಟ್ಟಣದ ಬಿಜೆಪಿ ಮಂಡಲ್ ಕಚೇರಿಯಲ್ಲಿ ಶನಿವಾರ ಶಿವಶರಣೆ ಹೇಮರೆಡ್ಡಿ ಮಲ್ಲಮನವರ ಜಯಂತಿ ಕಾರ್ಯಕ್ರಮ ನಡಯತು. ಪುರಸಭೆ ಸದಸ್ಯ ರಮೇಶ ಕಲ್ಲೂರ್, ಬಿಜೆಪಿ ಮಂಡಲ್ ಅಧ್ಯಕ್ಷ ಅನಿಲ ಪಸಾರ್ಗಿ, ರವಿ ಹೊಸಳ್ಳಿ, ಸತೀಷ ರಂಜೇರಿ ಇದ್ದರು.

### ಆಪರೇಷನ್ ಸಿಂಧೂರ್ ಯಶಸ್ವಿ; ಶಾಸಕರಿಂದ ವಿಶೇಷ ಪೂಜೆ

## ವೀರಭದ್ರನ ದೇಗುಲದಲ್ಲಿ ಸೈನಿಕರ ಜೈ ಜೈಕಾರ

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಪಹಲ್ಗಾಮ್ ದಾಳಿಗೆ ಪ್ರತ್ಯುತ್ತರವಾಗಿ ಭಾರತೀಯ ಸೇನೆ ಪಾಕಿಸ್ತಾನದ ಉಗ್ರರ ನೆಲೆಗಳ ಮೇಲೆ ನಡೆಸಿದ ಆಪರೇಷನ್ ಸಿಂಧೂರ ಯಶಸ್ವಿ ಹಿನ್ನೆಲೆ ಪಟ್ಟಣದ ಐತಿಹಾಸಿಕ ವೀರಭದ್ರೇಶ್ವರ ದೇವಸ್ಥಾನದಲ್ಲಿ ಶನಿವಾರ ಬಿಜೆಪಿ ಮುಖಂಡರು ವಿಶೇಷ ಪೂಜೆ ಸಲ್ಲಿಸಿದರು. ಶಾಸಕ ಡಾ. ಸಿದ್ದು ಪಾಟೀಲ್ ಹಾಗೂ ಮಾಜಿ ಶಾಸಕ ಸುಭಾಷ ಕಲ್ಲೂರ್ ನೇತೃತ್ವದಲ್ಲಿ ಬಿಜೆಪಿ ಮುಖಂಡರು ಕಾರ್ಯಕರ್ತರು ಬೆಳಗ್ಗೆ ದೇವಸ್ಥಾನಕ್ಕೆ ಭೇಟಿ ನೀಡಿ ಧಾರ್ಮಿಕ ಪರಂಪರೆಯಂತೆ ಪೂಜೆ ಸಲ್ಲಿಸಿ, ಶತ್ರುಗಳ ಸಂಹಾರ ಮಾಡುವಂತೆ ಭಾರತೀಯ ಸೈನ್ಯಕ್ಕೆ ಹೆಚ್ಚಿನ ಶಕ್ತಿ ಕರುಣಿಸಲಿ ಎಂದು ಪ್ರಾರ್ಥಿಸಿದರು. ಪಹಲ್ಗಾಮ್ ದಾಳಿ




ನಡೆಸಿದ ಪಾಕಿಗಳಿಗೆ ಪ್ರತ್ಯುತ್ತರ ನೀಡುವುದಕ್ಕಾಗಿ ಭಾರತೀಯ ಸೈನ್ಯ ಕೈಗೊಂಡ ಸಿಂಧೂರ್ ಆಪರೇಷನ್ ಹಿನ್ನಲೆ ಭಾರತೀಯ ಸೈನಿಕರ ಪರ ಜೈ ಜೈಕಾರ ಘೋಷಣೆಗಳನ್ನು ಕೂಗಿದರು.

ಈ ಸಂದರ್ಭದಲ್ಲಿ ಸುಭಾಷ ಕಲ್ಲೂರ್, ವಿಶ್ವನಾಥ ಪಾಟೀಲ್ ವಿನಾಯಕ ಮಂಡಾ, ಅನಿಲ ಪಾಸರ್ಗಿ, ಪ್ರಭಾಕರ ನಾಗರಳೆ, ಸಂತೋಷ ಪಾಟೀಲ್, ಸುನೀಲ ಪಾಟೀಲ್, ಡಾ. ಭದ್ರೇಶ ಪಾಟೀಲ್, ಗಿರೀಶ್ ತುಂಬಾ, ನಾಗಭೂಷಣ ಸಂಗಮ , ಸುನೀಲ ಪತ್ರಿ ಇದ್ದರು.



ಹುಮನಾಬಾದ್ ಪಟ್ಟಣದ ತಾಲೂಕು ಪಂಚಾಯತ್ ಕಚೇರಿಯಲ್ಲಿ ಶನಿವಾರ ಮಹಾನ್ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನವರ ಜಯಂತಿ ನಡೆಯಿತು. ತಾಪಂ. ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಇದ್ದರು. (ಮಲ್ಲಮ್ಮ ನುಡಿ ಚಿತ್ರ)

## ಕಾರು ಡಿಕ್ಕಿ: ಗಾಯಗೊಂಡಿದ್ದ ಬೈಕ್ ಸವಾರ ಸಾವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ, ಮೇ.8–ಕಾರು ಡಿಕ್ಕಿ ಹೊಡೆದು ಗಾಯಗೊಂಡಿದ್ದ ಬೈಕ್ ಸವಾರನೊಬ್ಬ ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾನೆ.

ಅಣ್ಣಾರಾಯ ಮಳ್ಳಿ ಮೃತಪಟ್ಟವರು.

ಇವರು ಬೈಕ್ ಮೇಲೆ ಕಲಬುರಗಿಯಿಂದ ಬಮ್ಮನಹಳ್ಳಿ ಗ್ರಾಮಕ್ಕೆ ಹೋಗುತ್ತಿರುವಾಗ ಭೋಸಗಾ ಕ್ರಾಸ ಸಮೀಪ ಬರುವ ದಾಬಾ ಹತ್ತೀರ ಆಳಂದ ಕಡೆಯಿಂದ ಕಲಬುರಗಿ ಕಡೆಗೆ ಬರುತ್ತಿದ್ದ ಕಾರು ಡಿಕ್ಕಿ ಹೊಡೆದು ಗಂಭೀರವಾಗಿ ಗಾಯಗೊಂಡಿ–ದ್ದರು. ಜಿಲ್ಲಾ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದಾರೆ. ಈ ಸಂಬಂಧ ಮೃತರ ಪತ್ನಿ ಅಂಬಿಕಾ ಅವರು ಸಂಚಾರಿ ಪೊಲೀಸ್ ಠಾಣೆ–2ರಲ್ಲಿ ದೂರು ಸಲ್ಲಿಸಿದ್ದಾರೆ. ತನಿಖೆ ನಡೆದಿದೆ.